ಸಂಪುಟ: 21, ಸಂಚಿಕೆ: 108, ಪುಟಗಳು: 8, ಭಾನುವಾರ, 28 ಜನವರಿ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 28, ಜನವರಿ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ,
- ತೃತೀಯ, ಭಾನುವಾರ,
- ಆಶ್ಲೇಷ ನಕ್ಷತ್ರ / ಮಖ ನಕ್ಷತ್ರ''.
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

### ಕೆಸಿ ಜೆನೆರಲ್ ಆಸ್ಪತ್ರೆಯಲ್ಲಿ ಉಚಿತ ಡಯಾಲಿಸಿಸ್ ಸೇವೆ ಆರಂಭ

## ಇದು ಬಡ ಜನರಿಗಾಗಿ ಎಂದ ಸಿಎಂ

**ಬೆಂಗಳೂರು:** ನಗರದ ಮಲ್ಲೇಶ್ವರಂನಲ್ಲಿರುವ ಕೆಸಿ ಜೆನೆರಲ್ ಆಸ್ಪತ್ರೆಯಲ್ಲಿ ಉಚಿತ ಡಯಾಲಿಸಿಸ್ ಸೇವೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಇಂದು ಕೆಸಿ ಜೆನೆರಲ್ ಆಸ್ಪತ್ರೆಯಲ್ಲಿ ಉಚಿತ ಡಯಾಲಿಸಿಸ್ ಸೇವೆಗಳನ್ನು ಉದ್ಘಾಟನೆ ಮಾಡಿದ್ದೇನೆ ನಾನು ಅತ್ಯಂತ ಸಂತೋಷದಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ ಎಂದರು.

ಕಿಡ್ನಿ ವೈಫಲ್ಯದಿಂದ ಡಯಾಲಿಸಿಸ್ ಬರುತ್ತದೆ. ಬಡವರಿಗೆ ಡಯಾಲಿಸಿಸ್ ಮಾಡಿಸಿಕೊಳ್ಳುವುದು ದೊಡ್ಡ ಹೊರೆಯಾಗಿದೆ. ವಾರಕ್ಕೆ ಮೂರು ಬಾರಿ ಡಯಾಲಿಸಿಸ್ ಮಾಡಿಸಬೇಕು. ಒಮ್ಮೆ ಡಯಾಲಿಸ್ ಮಾಡಿಸಿದರೆ 2 ರಿಂದ 3 ಸಾವಿರ ರೂಪಾಯಿ ಬೇಕಾಗುತ್ತದೆ. ಬಡವರಿಗೆ ತುಂಬ ಕಷ್ಟ ಆಗುತ್ತದೆ. ಹೀಗಾಗಿ ಸರ್ಕಾರ ಬಡವರಿಗೆ ಸಹಾಯ ಮಾಡಬೇಕು ಅಂತ ಈ ಉಚಿತ ಡಯಾಲಿಸಿಸ್ ಸೇವೆಗಳನ್ನು ಪ್ರಾರಂಭಿಸಿದ್ದೇವೆ ಎಂದರು.

ರಾಜ್ಯದಲ್ಲಿ ಒಟ್ಟು 219 ಡಯಾಲಿಸಿಸ್ ಸೆಂಟರ್



ಗಳಿದ್ದು, ಒಟ್ಟು 800 ಡಯಾಲಿಸಿಸ್ ಯಂತ್ರಗಳನ್ನ ಅಳವಡಿಕೆ ಮಾಡುತ್ತಿದ್ದೇವೆ. ಶ್ರೀಮಂತರು ಹಣ ಕೊಟ್ಟು ಚಿಕಿತ್ಸೆ ಪಡೆಯುತ್ತಾರೆ. ಆದರೆ ಬಡವರಿಗೆ ಕಷ್ಟ. ಈ ಕಿಡ್ನಿ ವೈಫಲ್ಯ ಎಲ್ಲಾರಿಗೂ ಬರುತ್ತದೆ. ದೊಡ್ಡವರು, ಚಿಕ್ಕವರಿಗೂ ಬರುತ್ತದೆ. ಕಾಯಿಲೆ ಹೆಚ್ಚಾಗಿ ವಯ್ಯಸ್ಸದವರಿಗೆ ಬಂದರು ಕೂಡ ಚಿಕ್ಕವರಿಗೆ ಬರುವುದಿಲ್ಲ ಅಂತ ಹೇಳುವುದಕ್ಕೆ ಆಗುವುದಿಲ್ಲ ಎಂದರು.

ಪುಟ 2

### ಆರ್‌ಜೆಡಿ ಸಚಿವರನ್ನು ವಜಾ ಮಾಡಿ

## ನಿತೀಶ್ ಕುಮಾರ್‌ಗೆ ಸಂಪುಟದಲ್ಲಿ ಸ್ಥಾನ

**ಪಾಟ್ನಾ:** ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಮೈತ್ರಿ ಪಾಲುದಾರ ಮತ್ತು ಲಾಲು ಯಾದವ್ ಅವರ ಪಕ್ಷವಾದ ರಾಷ್ಟ್ರೀಯ ಜನತಾ ದಳ ಪಕ್ಷದ ಸಚಿವರನ್ನು ಇಂದು ವಜಾ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿರುವುದಾಗಿ ಎನ್‌ಡಿಟಿವಿಗೆ ವರದಿ ಮಾಡಿದೆ. ಬಿಜೆಪಿ ಮತ್ತು ನಿತೀಶ್ ಕುಮಾರ್ ಅವರ ಜನತಾ ದಳ (ಯುನೈಟೆಡ್), ಅಥವಾ ಜೆಡಿಯು ಸಹ ಮೂರು ತಿಂಗಳಲ್ಲಿ ಲೋಕಸಭೆ ಚುನಾವಣೆಗೆ ಸೀಟು ಹಂಚಿಕೆ ಒಪ್ಪಂದವನ್ನು ಅಂತಿಮಗೊಳಿಸಿದೆ. ಬಿಹಾರದ ಎಲ್ಲಾ ಬಿಜೆಪಿ ಶಾಸಕರು ಈಗಾಗಲೇ ನಿತೀಶ್ ಕುಮಾರ್ ಅವರಿಗೆ ಬೆಂಬಲ ಪತ್ರ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.



ಆಗಸ್ಟ್ 2022 ರಲ್ಲಿ ಮಹಾಘಟಬಂಧನ್ ಅಥವಾ ಮಹಾಮೈತ್ರಿಕೂಟಕ್ಕೆ ಸೇರಲು ಬಿಜೆಪಿಯನ್ನು ತ್ಯಜಿಸಿದ ಜೆಡಿಯು ಮುಖ್ಯಸ್ಥರು ಆರ್‌ಜೆಡಿ ಮತ್ತು ಕಾಂಗ್ರೆಸ್‌ನೊಂದಿಗೆ ಮೈತ್ರಿ ಸರ್ಕಾರದಿಂದ ಹೊರನಡೆಯಲಿದ್ದಾರೆ ಎಂದು ಈ ಬೆಳವಣಿಗೆಗಳು ಸೂಚಿಸುತ್ತವೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ನೆಹರು-ಅಂಬೇಡ್ಕರ್ ಕುರಿತು ಸ್ಯಾಮ್ ಪಿತ್ರೋಡಾ ಪೋಸ್ಟ್‌ಗೆ ಟೀಕೆ



**ದೆಹಲಿ:** ಇಂಡಿಯನ್ ಓವರ್ ಸೀಸ್ ಕಾಂಗ್ರೆಸ್ ಅಧ್ಯಕ್ಷ ಸ್ಯಾಮ್ ಪಿತ್ರೋಡಾ ಅವರು ಶನಿವಾರ ಸಾಮಾಜಿಕ ಮಾಧ್ಯಮದಲ್ಲಿ ಮಾಡಿದ ಪೋಸ್ಟ್‌ಗೆ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದ್ದು, ಕಾಂಗ್ರೆಸ್ ನಾಯಕ ಆ ಪೋಸ್ಟ್ ಡಿಲೀಟ್ ಮಾಡಿದ್ದಾರೆ. ಸುಧೀಂದ್ರ ಕುಲಕರ್ಣಿ ಅವರು ಬರೆದ ಲೇಖನದ ಲಿಂಕ್ ನ್ನು ಪಿತ್ರೋಡಾ ಪೋಸ್ಟ್ ಮಾಡಿದ್ದು, ನೆಹರೂ ಅವರು ಸಂವಿಧಾನ ಮತ್ತು ಅದರ ಪೀಠಿಕೆಗೆ ಹೆಚ್ಚಿನ ಕೊಡುಗೆ ನೀಡಿದ್ದಾರೆ, ಅಂಬೇಡ್ಕರ್ ಅಲ್ಲ ಎಂದು ಇದರಲ್ಲಿದೆ. ಸ್ಯಾಮ್ ಪಿತ್ರೋಡಾ ಮಾತ್ರವಲ್ಲ ಲೇಖನ ಬರೆದ ರಾಜಕೀಯ ಕಾರ್ಯಕರ್ತ ಸುಧೀಂದ್ರ ಕುಲಕರ್ಣಿ ವಿರುದ್ಧವೂ ಟೀಕಾ ಪ್ರಹಾರ ನಡೆದಿದೆ. ಆದಾಗ್ಯೂ,ಕುಲಕರ್ಣಿ ಅವರು ಕ್ಷಮೆಯಾಚಿಸಲು ನಿರಾಕರಿಸಿದರು. ಹಿಂದೂ ಸಮಾಜದಲ್ಲಿ ನ್ಯಾಯ ಮತ್ತು ಸಮಾನತೆಗಾಗಿ ಹೋರಾಡಿದ ಡಾ.ಅಂಬೇಡ್ಕರ್ ಅವರ ಬಗ್ಗೆ ನನಗೆ ಅಪಾರ

ಪುಟ 2

### ಚಿಕ್ಕಮಗಳೂರಿಗೆ ಎಂಟ್ರಿಕೊಟ್ಟ 30 ಕಾಡಾನೆಗಳ ಹಿಂಡು



**ಚಿಕ್ಕಮಗಳೂರು:** ಕಾಫಿನಾಡಿಗೆ ಬೀಟಮ್ಮ ಅಂಡ್ ಗ್ಯಾಂಗ್ ಎಂಟ್ರಿ ಕೊಟ್ಟಿದೆ. ಚಿಕ್ಕಮಗಳೂರು ತಾಲೂಕಿನ ಕೆಆರ್ ಪೇಟೆ ಗ್ರಾಮದಲ್ಲಿ ಬರೊಬ್ಬರಿ 30 ಕಾಡಾನೆಗಳ ಹಿಂಡು ಬೀಡುಬಿಟ್ಟಿದ್ದು, ಸ್ಥಳಕ್ಕೆ ಚಿಕ್ಕಮಗಳೂರು ಅರಣ್ಯ ಇಲಾಖೆಯ ಸಿಬ್ಬಂದಿಗಳು ದೌಡಾಯಿಸಿದ್ದಾರೆ. ಇದು ಜನ ವಸತಿ ಪ್ರದೇಶದಿಂದ ಕೂಗಳತೆ ದೂರದಲ್ಲಿರುವುದರಿಂದ

ಪುಟ 2

# ಬಜೆಟ್ ಮಂಡನೆಗೆ ಸಿದ್ಧತೆ

## ನಿರ್ಮಲಾ ಸೀತಾರಾಮನ್ ಪಾಲಾಗಲಿವೆ ಹಲವು ದಾಖಲೆಗಳು

**ನವದೆಹಲಿ:** ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಫೆಬ್ರವರಿ 1 ರಂದು ಸತತ ಆರನೇ ಬಜೆಟ್ ಮಂಡಿಸಲಿದ್ದಾರೆ. ಇದರೊಂದಿಗೆ ಹಲವು ದಾಖಲೆಗಳು ಅವರ ಪಾಲಾಗಲಿವೆ. ಅವರು ಸತತ ಐದು ಪೂರ್ಣ ಬಜೆಟ್ ಮತ್ತು ಒಂದು ಮಧ್ಯಂತರ ಬಜೆಟ್ ಮಂಡಿಸಿದ ಮಾಜಿ ಪ್ರಧಾನಿ ಮೊರಾರ್ಜಿ ದೇಸಾಯಿ ಅವರ ದಾಖಲೆಯನ್ನು ಸರಿಗಟ್ಟಲಿದ್ದಾರೆ. ಅಲ್ಲದೆ, ಸೀತಾರಾಮನ್ ಅವರು ಜುಲೈ 2019 ರಿಂದ ಐದು ಪೂರ್ಣ ಬಜೆಟ್‌ಗಳನ್ನು ಮಂಡಿಸಿದ್ದಾರೆ. ಸತತ ಐದು ಬಾರಿ ಪೂರ್ಣ ಪ್ರಮಾಣದ ಬಜೆಟ್ ಮಂಡಿಸಿದ ಮಹಿಳಾ ಹಣಕಾಸು ಸಚಿವರಾಗಿದ್ದಾರೆ.

ಫೆಬ್ರವರಿ 1 ರಂದು ಮಧ್ಯಂತರ ಬಜೆಟ್ ಮಂಡಿಸುವುದರೊಂದಿಗೆ ನಿರ್ಮಲಾ ಸೀತಾರಾಮನ್ ಮಾಜಿ ಹಣಕಾಸು ಸಚಿವರಾದ ಮನಮೋಹನ್ ಸಿಂಗ್, ಅರುಣ್ ಜೇಟ್ಲಿ, ಪಿ ಚಿದಂಬರಂ ಮತ್ತು ಯಶವಂತ್ ಸಿನ್ಹಾ ಅವರ ದಾಖಲೆಗಳನ್ನು ಹಿಂದಿಕ್ಕಲಿದ್ದಾರೆ. ಈ ನಾಯಕರು ಸತತ ಐದು ಬಜೆಟ್ ಮಂಡಿಸಿದ್ದರು. ಹಣಕಾಸು ಮಂತ್ರಿಯಾಗಿ, ದೇಸಾಯಿ 1959-1964 ರ ನಡುವೆ ಐದು ವಾರ್ಷಿಕ ಬಜೆಟ್ ಮತ್ತು ಒಂದು ಮಧ್ಯಂತರ ಬಜೆಟ್ ಮಂಡಿಸಿದ್ದರು. ಫೆಬ್ರವರಿ 1 ರಂದು ಮಂಡಿಸಲಿರುವ 2024-25 ರ ಹಣಕಾಸು ವರ್ಷದ ಮಧ್ಯಂತರ ಬಜೆಟ್ ಏಪ್ರಿಲ್-ಮೇನಲ್ಲಿ ಲೋಕಸಭೆ ಚುನಾವಣೆಯ ನಂತರ ಹೊಸ ಸರ್ಕಾರ ರಚನೆಯಾಗುವವರೆಗೆ ಕೆಲವು ವಸ್ತುಗಳ ಮೇಲೆ ಖರ್ಚು ಮಾಡುವ ಹಕ್ಕನ್ನು ಸರ್ಕಾರಕ್ಕೆ ನೀಡುತ್ತದೆ.



**ಪ್ರಮುಖ ಘೋಷಣೆ ಅನುಮಾನ:** ಲೋಕಸಭೆ ಚುನಾವಣೆಗಳು ನಡೆಯಲಿರುವ ಕಾರಣ, ಸೀತಾರಾಮನ್ ಅವರ ಮಧ್ಯಂತರ ಬಜೆಟ್‌ನಲ್ಲಿ ಯಾವುದೇ ಪ್ರಮುಖ ನೀತಿ ಬದಲಾವಣೆ, ಪ್ರಮುಖ ಯೋಜನೆಗಳ ಘೋಷಣೆ ಸಾಧ್ಯತೆ ಕಡಿಮೆಯಾಗಿದೆ. ಮಧ್ಯಂತರ ಬಜೆಟ್‌ನಲ್ಲಿ ಯಾವುದೇ ಪ್ರಮುಖ ಘೋಷಣೆ ಮಾಡುವುದನ್ನು ಕಳೆದ ತಿಂಗಳು ನಡೆದ ಕಾರ್ಯಕ್ರಮವೊಂದರಲ್ಲಿ ಹಣಕಾಸು ಸಚಿವರು ನಿರಾಕರಿಸಿದ್ದರು.

ಲೋಕಸಭೆ ಚುನಾವಣೆಯ ನಂತರ, ಜೂನ್‌ನಲ್ಲಿ ಹೊಸ ಸರ್ಕಾರ ರಚನೆಯಾಗುವ ಸಾಧ್ಯತೆಯಿದೆ. ಹೊಸ ಸರ್ಕಾರವು ಜುಲೈನಲ್ಲಿ 2024-25 ರ ಪೂರ್ಣ ಪ್ರಮಾಣದ ಬಜೆಟ್ ಮಂಡಿಸಲಿದೆ. ಸಾಮಾನ್ಯವಾಗಿ, ಮಧ್ಯಂತರ ಬಜೆಟ್ ಪ್ರಮುಖ ನೀತಿ ಘೋಷಣೆಗಳನ್ನು ಒಳಗೊಂಡಿರುವುದಿಲ್ಲ, ಆದರೆ ಆರ್ಥಿಕತೆ ಎದುರಿಸುತ್ತಿರುವ ಸಮಸ್ಯೆಗಳನ್ನು ಎದುರಿಸಲು ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳುವುದರಿಂದ ಸರ್ಕಾರಕ್ಕೆ

ಪುಟ 2

## ಜನಾರ್ದನ ರೆಡ್ಡಿ ಬಿಜೆಪಿಗೆ ಬಂದರೆ ಮತ್ತೆ ಬಲ ಬರುತ್ತೆ

**ಬಳ್ಳಾರಿ:** ಶಾಸಕ ಜನಾರ್ದನ ರೆಡ್ಡಿ ಬಿಜೆಪಿಗೆ ಬಂದರೆ ಮತ್ತೆ ಪಕ್ಷಕ್ಕೆ ಬಲ ಬರುತ್ತೆ ಎಂದು ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ಹೇಳಿದ್ದಾರೆ. ಬೇರೆ ಪಕ್ಷ ಕಟ್ಟಿದ್ದಕ್ಕೆ ಮಾತ್ರ ಜನಾರ್ದನ ರೆಡ್ಡಿ ವಿರೋಧ ಮಾಡಿದ್ದೇವೆ. ವೈಯಕ್ತಿಕ ದ್ವೇಷವಿಲ್ಲ. ಸಹೋದರ ಜನಾರ್ದನ ರೆಡ್ಡಿ ಮರಳಿ ಬಿಜೆಪಿಗೆ ಬಂದ್ರೆ ಖುಷಿ ಆಗುತ್ತದೆ. ಮುಂಬರುವ ಲೋಕಸಭಾ ಚುನಾವಣೆ ಸೇರಿದಂತೆ, ಜಿಲ್ಲಾ ಪಂಚಾಯತ್ , ತಾಲೂಕು ಪಂಚಾಯತ್ ಚುನಾವಣೆಗೂ ಪ್ಲಸ್ ಆಗುತ್ತೆ. ಮಾಜಿ ಸಿಎಂ ಃ.ಖ.ಯಡಿಯೂರಪ್ಪ ನೇತೃತ್ವದಲ್ಲಿ ಬಿಜೆಪಿಗೆ



ಜನಾರ್ದನ ರೆಡ್ಡಿ ಬರುತ್ತಾರೆ. ದೊಡ್ಡ ದೊಡ್ಡ ನಾಯಕರು ಜನಾರ್ದನ ರೆಡ್ಡಿ ಸಂಪರ್ಕ ಮಾಡಿದ್ದಾರೆ. ಶೀಘ್ರದಲ್ಲಿ ಅವರು ಬಿಜೆಪಿಗೆ ಬರುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.

ರೆಡ್ಡಿ ಪಕ್ಷಕ್ಕೆ ಬರುವುದು ಬಿಜೆಪಿಗೆ ಪ್ಲಸ್ ಆಗುತ್ತೆ. ಕೆಆರ್‌ಪಿಪಿ ಪಕ್ಷದಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಜೆಪಿಗೆ ಸ್ವಲ್ಪ ಹೊಡೆತ ಬಿದ್ದಿದೆ. ಗ್ಯಾರಂಟಿ ಎಫೆಕ್ಟ್ ನಿಂದ ಬಿಜೆಪಿ ಸೋಲಾಯಿತು. ಗ್ಯಾರಂಟಿ ಯೋಜನೆಗಳು ಬೋಗಸ್ ಅಂತ ಜನರಿಗೆ ಗೊತ್ತಾಗಿದೆ. ರೆಡ್ಡಿ ಬಿಜೆಪಿಗೆ ಸೇರಿದರೆ ಕೆಆರ್‌ಪಿಪಿ ಪಕ್ಷವನ್ನ ಮರ್ಜ್ ಮಾಡಲಾಗುತ್ತೆ ಎಂದರು.

ಪುಟ 2

## ಕಾಂಗ್ರೆಸ್ ಧ್ವಂಸ ಮಾಡಿ ಬಿಜೆಪಿ ಅಧಿಕಾರಕ್ಕೆ ಏರಬೇಕು

**ಬೆಂಗಳೂರು:** ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ 400 ಸೀಟುಗಳು ಸಿಗುವುದು ಖಚಿತ, ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿ ಆಗುವುದೂ ಖಚಿತ ಎಂದು ಕೇಂದ್ರ ಸಚಿವ ಭೂಪೇಂದ್ರ ಯಾದವ್ ಹೇಳಿದ್ದಾರೆ. ಬೆಂಗಳೂರು ನಗರದ ಅರಮನೆ ಮೈದಾನದಲ್ಲಿ ನಡೆದ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಧ್ವಂಸ ಮಾಡಿ ಬಿಜೆಪಿ ಅಧಿಕಾರಕ್ಕೆ ಏರಬೇಕು ಎಂದರು.

ಬಿಜೆಪಿಯನ್ನು ಅಧಿಕಾರಕ್ಕೆ ತರಲು ರಾಜ್ಯದಲ್ಲಿ



ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಈಗಾಗಲೇ ಕೆಲಸ ಆರಂಭಿಸಿದ್ದಾರೆ ಎಂದ ಕೇಂದ್ರ ಸಚಿವರು, ಪಂಚ ರಾಜ್ಯಗಳಲ್ಲಿ ಕಾಂಗ್ರೆಸ್‌ನ ಸುಳ್ಳುಗಳು ಜನರಿಗೆ ಗೊತ್ತಾಯಿತು. ಹಾಗಾಗಿ ಮೂರು ರಾಜ್ಯಗಳಲ್ಲಿ ಕಾಂಗ್ರೆಸ್ ಗೆ ಹೀನಾಯ ಸೋಲಾಯಿತು. ಕಾಂಗ್ರೆಸ್ ನ ಗ್ಯಾರಂಟಿಗಳು ವಿಫಲವಾಗಿವೆ ಎಂದರು. ಕಾಂಗ್ರೆಸ್ ಕೇವಲ ಗಾಂಧಿ ಪರಿವಾರ ಹಾಗೂ ಅಲ್ಪಸಂಖ್ಯಾತರಿಗೆ ಸೀಮಿತವಾಗಿ ಅಧಿಕಾರ ಮಾಡಿದೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ 400 ಸ್ಥಾನ ಗೆಲ್ಲೋದು ಪಕ್ಕಾ ಎಂದರು.

ಪುಟ 2

## ಯಾರು ಹೋಗ್ತಾರೋ ಬಿಡುತ್ತಾರೋ ನಮ್ಮ ಕೈಯಲ್ಲಿ ಇಲ್ಲ



**ಹಾವೇರಿ:** ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರು ಬಿಜೆಪಿಗೆ ಘರ್ ವಾಪ್ಸಿ ಆಗಿದ್ದಾರೆ. ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಬಿಜೆಪಿ ಸೇರ್ಪಡೆ ಬಗ್ಗೆ ರಾಜ್ಯ ರಾಜಕೀಯದಲ್ಲಿ ಮಾತು ಕೇಳಿಬರುತ್ತಿದೆ. ಸದ್ಯ ಈ ವಿಚಾರವಾಗಿ ನಗರಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಕಫಾಆ ಸಚಿವ ಸತೀಶ್ ಜಾರಕಿಹೊಳಿ, ಯಾರು ಹೋಗುತ್ತಾರೋ ಬಿಡುತ್ತಾರೋ ನಮ್ಮ ಕೈಯಲ್ಲಿ ಇಲ್ಲ. ಹೋಗುವ ಮನಸಿದ್ದರೆ ತಡೆಯಲು ಆಗಲ್ಲ. ಮಾಜಿ ಸಿಎಂ ಜಗದೀಶ್ ಶೆಟ್ಟರ್ ಈಗ ಬಿಜೆಪಿಗೆ ಹೋಗಿದ್ದಾರೆ. ಮುಂದೆ ಯಾರು ಹೋಗುತ್ತಾರೋ ಗೊತ್ತಿಲ್ಲ ಎಂದು ಹೇಳಿದ್ದಾರೆ.

ಎಲ್ಲರು ಇರುತ್ತಾರೆ ಅನ್ನೋ ಆಶಾಭಾವನೆ ಅಷ್ಟೇ ನಮ್ಮದು. ನಮ್ಮದೇ ಪಕ್ಷವಿದೆ, ನಮ್ಮದೇ ಆದ ವೋಟ್ ಬ್ಯಾಂಕ್ ಇದೆ. ನಮ್ಮ ಸ್ವಂತ ಶಕ್ತಿಯಿಂದ ರಾಜ್ಯದಲ್ಲಿ ಗೆದ್ದಿದ್ದೇವೆ. ಅವರಿಂದ ಅಧಿಕಾರಕ್ಕೆ ಬಂತು, ಇವರಿಂದ ಬಂತು ಅಂತ ಹೇಳಲಿಕ್ಕೆ ಆಗಲ್ಲ, ಪಕ್ಷದಿಂದ ಗೆದ್ದಿದ್ದೇವೆ ಅಷ್ಟೇ ಎಂದರು.

ಪುಟ 2

### ನಮ್ಮ ತಲೆಯಲ್ಲಿ ಜೈ ಶ್ರೀರಾಮ್ ಘೋಷಣೆ

## ಹೇರಲಾಗುತ್ತಿದೆ

**ಬೆಳಗಾವಿ:** ಜೈ ಶ್ರೀರಾಮ್ ಪದಕ್ಕೆ ಇತಿಹಾಸವಿಲ್ಲ. ಜೈ ಶ್ರೀರಾಮ್ ಘೋಷಣೆಯನ್ನು ನಮ್ಮ ತಲೆಗೆ ಹೇರಲಾಗುತ್ತಿದೆ ಎಂದು ಕುಡಚಿ ಕಾಂಗ್ರೆಸ್ ಶಾಸಕ ಮಹೇಂದ್ರ ತಮ್ಮಣ್ಣವರ್ ಹೇಳಿದರು. ಬೆಳಗಾವಿ ಜಿಲ್ಲೆ ರಾಯಬಾಗ ತಾಲೂಕಿನ ಅಳಗವಾಡಿ ಗ್ರಾಮದಲ್ಲಿ ನಡೆದ ಸಂಗೊಳ್ಳಿ ರಾಯಣ್ಣ ಹುತಾತ್ಮ ದಿನಾಚರಣೆಯಲ್ಲಿ ಮಾತನಾಡಿದ ಅವರು, ಮೊದಲು ಹರ ಹರ ಮಹದೇವ ಎಂದು ಹೇಳುತ್ತಿದ್ದರು. ರಾಯಣ್ಣ ಕೂಡ ಹರ ಹರ ಮಹದೇವ ಎಂದು ಹೇಳಿ ಗಲ್ಲಿಗೇರಿದ್ದರು ಎಂದರು.



ನಾವು ಇಂದು ಯಾವ ಸಂಸ್ಕೃತಿಯಲ್ಲಿ ಬದುಕುತ್ತಿದ್ದೇವೆ ಅಂದರೆ ಹರ ಹರ ಮಹದೇವ ಎಂಬ ಘೋಷಣೆ ನಮ್ಮ ತಲೆಯಲ್ಲಿ ಇಲ್ಲ.

ಪುಟ 2

### ಅಗರ ಗ್ರಾಮದಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಆಸ್ಪತ್ರೆ ಉದ್ಘಾಟನೆ

## ಕೈಗೆಟಕುವ ದರದಲ್ಲಿ ಚಿಕಿತ್ಸೆ

**ಬೆಂಗಳೂರು:** ಗ್ರಾಮೀಣ ಭಾಗದ ಜನರಿಗೆ ಸುಸಜ್ಜಿತ ಆರೋಗ್ಯ ಸೇವೆ ಸಿಗೋದು ದೂರದ ಮಾತು. ಹಳ್ಳಿ ಜನ ತೀವ್ರ ಅನಾರೋಗ್ಯಕ್ಕೀಡಾದರೆ ನಗರಕ್ಕೇ ಬರಬೇಕು. ಅಷ್ಟರಲ್ಲಿ ಜೀವ ಉಳಿದಿದ್ದರೆ ಅದೃಷ್ಟ ಅಷ್ಟೇ. ಗ್ರಾಮೀಣ ಜನರ ಇಂತಹ ನಿತ್ಯದ ಪರದಾಟ ಗಮನಿಸಿದ ಬಿಎಂಎಸ್ ಟ್ರಸ್ಟ್ ಆಸ್ಪತ್ರೆ ಗ್ರಾಮೀಣ ಭಾಗದಲ್ಲೊಂದು ಸುಸಜ್ಜಿತ ಹಾಗೂ ಅತ್ಯಾಧುನಿಕ ತಂತ್ರಜ್ಞಾನದ ಆಸ್ಪತ್ರೆಯನ್ನು ಅಗರ ಗ್ರಾಮದ ಮಾತೃಛಾಯಾ ಟ್ರಸ್ಟ್ ಆವರಣದಲ್ಲಿ ಲೋಕಾರ್ಪಣೆ ಮಾಡಿದೆ.

ಬೆಂಗಳೂರು ಹೊರವಲಯದಲ್ಲಿ ಬರುವ ತಾತಗುಣಿ ಪೋಸ್ಟ್ ಅಗರ ಗ್ರಾಮದಲ್ಲಿ ಬಿಎಂಎಸ್ ಟ್ರಸ್ಟ್ ಆಸ್ಪತ್ರೆಯ ಎರಡನೇ ಶಾಖೆ ಉದ್ಘಾಟನೆ ಶನಿವಾರ ನೆರವೇರಿತು. 29 ಬೆಡ್ ಗಳ ಈ ಆಸ್ಪತ್ರೆಯಲ್ಲಿ ಅತ್ಯಾಧುನಿಕ ವ್ಯವಸ್ಥೆ ಜೊತಗೆ ತಜ್ಞ ವೈದ್ಯರ ತಂಡ ಕೂಡಾ ಇಲ್ಲಿ ಕೆಲಸ ಮಾಡುತ್ತಿದೆ. ಬಡ ಜನರಿಗೆ ಅತಿಕಡಿಮೆ ದರದಲ್ಲಿ ಉತ್ಕೃಷ್ಟ ಆರೋಗ್ಯ ಸೇವೆ ಒದಗಿಸಲೆಂದೇ ಈ ಆಸ್ಪತ್ರೆ



ಪ್ರಾರಂಭಿಸಲಾಗಿದೆ. ಸುತ್ತಮುತ್ತಲ ಹಳ್ಳಿಗಳ ಜನರು ಇದರ ಉಪಯೋಗವನ್ನು ಪಡೆದುಕೊಳ್ಳಬಹುದು.

ಬಿಎಂಎಸ್ ಟ್ರಸ್ಟ್ ಆಸ್ಪತ್ರೆಯ ಲೈಫ್ ಟ್ರಸ್ಟಿ ಡಾ. ಬಿ.ಎಸ್. ರಾಗಿಣಿ ನಾರಾಯಣ, ಡಾ. ದಯಾನಂದ ಪೈ .ಪಿ ಹಾಗೂ ಇತರೆ ಟ್ರಸ್ಟಿಗಳ ನೇತೃತ್ವದಲ್ಲಿ ಉದ್ಘಾಟನಾ ಕಾರ್ಯಕ್ರಮ ನೆರವೇರಿತು. ಟ್ರಸ್ಟಿಗಳಾದ ಛೇರ್ಮನ್ ಶ್ರೀ ಗೌತಮ್ ವಿ. ಕಲತ್ತೂರ್, ಅವಿರಾಮ್ ಶರ್ಮಾ, ವೈದ್ಯಕೀಯ ನಿರ್ದೇಶಕರಾದ ಡಾ.ಕುಮಾರಸ್ವಾಮಿ ಕೆ.ಇ ಹಾಗೂ ಮಾತೃಛಾಯಾ ಟ್ರಸ್ಟ್ ನ ವಿ. ಕೃಷ್ಣಮೂರ್ತಿ ಮತ್ತು ಕೌಶಿಕ್ ಕೃಷ್ಣಮೂರ್ತಿ, ಡಾ. ಪ್ರಿಯಾಂಕಾ ಎಂಡಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಏಕಾಏಕಿ ಸಿಎಂ ಸಿದ್ದರಾಮಯ್ಯ ಬಳಿ ನುಗ್ಗಿದ ವ್ಯಕ್ತಿ ವಿರುದ್ಧ ಎಫ್‌ಐಆರ್

**ಬೆಂಗಳೂರು:** ನಗರದ ಮಾನಿಕ್ ಷಾ ಪರೇಡ್ ಮೈದಾನದಲ್ಲಿ ನಿನ್ನೆ ಗಣರಾಜ್ಯೋತ್ಸವ ಆಚರಣೆ ವೇಳೆ ಭದ್ರತೆ ಭೇದಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರತ್ತ ನುಗ್ಗಲು ಯತ್ನಿಸಿದ ವ್ಯಕ್ತಿ ವಿರುದ್ಧ ಕಬ್ಬನ್ ಪಾರ್ಕ್ ಠಾಣಾ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಸಾರ್ವಜನಿಕರಲ್ಲಿ ಆತಂಕ ಉಂಟುಮಾಡುವುದು, ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಡಿ ಪ್ರಕರಣ ದಾಖಲಿಸಲಾಗಿದೆ.

ಮೈಸೂರು ಮೂಲದ ಪರಶುರಾಮ್ 1993ರಲ್ಲಿ ಕೆಪಿಎಸ್‌ಸಿ ಪರೀಕ್ಷೆ ಬರೆದಿದ್ದರು. ಆದರೆ, ಪರೀಕ್ಷೆ ಫಲಿತಾಂಶವನ್ನು ಸರ್ಕಾರ ತಡೆಹಿಸಿದಿದೆ. ಇದರಿಂದ ಬೇಸತ್ತು ಮನವಿ ಕೊಡಲು ಪ್ರೆಸ್ ಪಾಸ್ ಹಿಡಿದು ಸಿದ್ದರಾಮಯ್ಯರತ್ತ ನುಗ್ಗಲು ಯತ್ನಿಸಿದ್ದರು. ಮೊದಲು ಸಿದ್ದರಾಮಯ್ಯ ಅವರ ಗಮನ ಸೆಳೆಯಲು ಪತ್ರ ಪ್ರದರ್ಶಿಸಿದ್ದರು. ಸಿದ್ದರಾಮಯ್ಯ ಅವರು ಗಮನಿಸಿದಿದ್ದಾಗ ಮೈದಾನಕ್ಕೆ ನುಗ್ಗಲು



ಪ್ರಯತ್ನಿಸಿದ್ದರು. ಕೂಡಲೇ ಎಚ್ಚೆತ್ತ ಪೊಲೀಸರು, ಪರುಶರಾಮನನ್ನು ವಶಕ್ಕೆ ಪಡೆದಿದ್ದರು.

**ಏನಿದು ಪ್ರಕರಣ?:** ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ನಡೆದ ಗಣರಾಜ್ಯೋತ್ಸವ ಪರೇಡ್ ವೇಳೆ ಅಪರಿಚಿತ ವ್ಯಕ್ತಿಯೋರ್ವ ಸಿಎಂ ಸಿದ್ದರಾಮಯ್ಯ ಬಳಿ ನುಗ್ಗಲು ಯತ್ನಿಸಿರುವ ಘಟನೆ ನಿನ್ನೆ ನಡೆದಿತ್ತು. ತಮ್ಮ ಏಕಖಅ ಆರ್ಡರ್ ವಿಳಂಬದ ಬಗ್ಗೆ ಸಿಎಂಗೆ ಮನವಿ ಸಲ್ಲಿಸಲು ಪರಶುರಾಮ್ ಬಂದಿದ್ದರು. ಆದರೆ ಸಿಎಂ ಸಿದ್ದರಾಮಯ್ಯ ಅವರ ಬಳಿ ಹೋಗಲು ಪೊಲೀಸರು ಬಿಡದಿದ್ದಾಗ ಪರಶುರಾಮ್ ಗಣರಾಜ್ಯೋತ್ಸವ ಪರೇಡ್ ನಡೆಯುತ್ತಿರುವಾಗಲೇ ನುಗ್ಗಲು ಯತ್ನಿಸಿದ್ದರು. ಗಣರಾಜ್ಯೋತ್ಸವ ಪರೇಡ್ ನಡೆಯುತ್ತಿರುವಾಗ ಮನವಿ ಪತ್ರ ಪ್ರದರ್ಶಿಸಿದ್ದರೆ. ಪರಶುರಾಮ್ ಮನವಿ ಪತ್ರ ಪ್ರದರ್ಶಿಸುತ್ತಿದ್ದ ಹಾಗೇ ಪೊಲೀಸರು ಅವರನ್ನ ವಶಕ್ಕೆ ಪಡೆದು ವಿಚಾರಣೆ ಆರಂಭಿಸಿದ್ದರು.

# ರಾಮಲಲ್ಲಾ ಕೆತ್ತಿದ ಗಣೇಶ್ ಭಟ್‌ರಿಗೆ ಬರ್ತಿದೆ ಬೇರೆ ಬೇರೆ ರಾಜ್ಯಗಳಿಂದ ಕರೆ!

**ಬೆಂಗಳೂರು:** ಅಯೋಧ್ಯೆಯಲ್ಲಿ ರಾಮಲಲ್ಲಾನ ಕೆತ್ತಿದ ಗಣೇಶ್ ಭಟ್‌ರಿಗೆ ಈಗ ಬೇರೆ ಬೇರೆ ರಾಜ್ಯಗಳಿಂದ ಕರೆ ಬರುತ್ತಿದೆ. ಮಾಧ್ಯಮದ ಜೊತೆ ಮಾತನಾಡಿದ ಅವರು, ಅಸ್ಸಾಂ, ಛತ್ತೀಸ್‌ಗಢ್ ಹಾಗೂ ಜಮ್ಮುಕಾಶ್ಮೀರ ಸೇರಿದಂತೆ ಅನೇಕ ರಾಜ್ಯಗಳಿಂದ ಅಯೋಧ್ಯೆಯಲ್ಲಿ ಕೆತ್ತಿದ ರಾಮಲಲ್ಲಾನ ಪ್ರತಿಮೆ ಕೊಡುವಂತೆ ಕರೆಗಳು ಬರುತ್ತಿದೆ. ಕೆಲವರು ಅದೇ ವಿಗ್ರಹ ನೀಡುವಂತೆ ಕೇಳುತ್ತಿದ್ದಾರೆ, ಇನ್ನೂ ಕೆಲವರು ಹೊಸ ವಿಗ್ರಹ ಕೆತ್ತನೆಗೆ ಹೇಳಿದ್ದಾರೆ ಎಂದರು.



ಅಯೋಧ್ಯೆಯಲ್ಲಿ ನಾನು ಕೆತ್ತಿದ ವಿಗ್ರಹ ಅದು ಅಯೋಧ್ಯೆಯ ಟ್ರಸ್ಟ್ ಸ್ವತ್ತಾಗಿದೆ. ಅವರು ರಾಮಮಂದಿರದಲ್ಲಿಯೇ ಇಡೋದಾಗಿ ಹೇಳಿದ್ದಾರೆ. ನಾನು ಕೆತ್ತಿದ ವಿಗ್ರಹವನ್ನು ಆಲಯ ಗರ್ಭಗುಡಿಯೊಳಗೆ ಇಟ್ಟರೆ ಸೂಕ್ತ ಅನ್ನೋದು ನನ್ನ ಅಭಿಪ್ರಾಯವಾಗಿದೆ. ಹೀಗಾಗಿ ಅದನ್ನು ಕರುನಾಡಿನ ಪ್ರಸಿದ್ಧ ಸ್ಥಳದಲ್ಲಿ ಪ್ರತಿಷ್ಟಾಪಿಸಿದ್ರೂ, ನನಗೆ ಬಹಳ ಸಂತಸ. ಯಾಕೆಂದರೆ ಕಂಕಣ ಕಟ್ಟಿ ಸಾಕಷ್ಟು ವಿಧಿ-ವಿಧಾನ ಪೂಜೆ ಮಾಡಿ ಶಾಸ್ತ್ರೋಕ್ತವಾಗಿ ಕೆತ್ತಿರೋದು ಮ್ಯೂಸಿಯಂ ಅಥವಾ ಸರ್ಕಲ್ ನಲ್ಲಿ ಇಡೋದು ಸೂಕ್ತವು ಅಲ್ಲ. ತೀರ್ಥ ಭೂಮಿ ಟ್ರಸ್ಟ್ ನವರ ನಿರ್ಧಾರ ಏನು ಅನ್ನೋದರ ಬಗ್ಗೆ ನಾನು ಕಾಯುತ್ತಿದ್ದೇನೆ ಎಂದು ಹೇಳಿದರು. ಈಗಾಗಲೇ ಕರ್ನಾಟಕದಲ್ಲಿಯೂ ಈ ವಿಗ್ರಹವನ್ನು ಟ್ರಸ್ಟ್ ನವರು ನೀಡಲು ಒಪ್ಪಿದ್ರೆ, ರಾಮದೇವರ ಬೆಟ್ಟ ಅಥವಾ ಕಲ್ಲು ಸಿಕ್ಕ ಜಮೀನಿನಲ್ಲಿ ಪ್ರತಿಷ್ಠಾಪನೆಯ ಬಗ್ಗೆಯೂ ಜನಪ್ರತಿನಿಧಿನಿಧಿಗಳಿಗೆ ಆಸಕ್ತಿ ಇದೆ ಎಂದರು.

# ಹೃದಯದಲ್ಲಿ ಟಿಪ್ಪು ಇಟ್ಟುಕೊಂಡು ಜೈ ಶ್ರೀರಾಮ್ ಅಂತಾರೆ

**ಬೆಂಗಳೂರು:** ಕಾಂಗ್ರೆಸ್‌ನವರು ಹೃದಯದಲ್ಲಿ ಟಿಪ್ಪು ಇಟ್ಟುಕೊಂಡು ಜೈ ಶ್ರೀರಾಮ್ ಎನ್ನುತ್ತಾರೆ. ಇದೆಲ್ಲಾ ಈಗ ವರ್ಕೌಟ್ ಆಗಲ್ಲ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.



ನಗರದ ಅರಮನೆ ಮೈದಾನದಲ್ಲಿ ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದಲ್ಲಿ ಯಾವುದೇ ಕಾಮಗಾರಿ ನಡೆಯುತ್ತಿಲ್ಲ. ಹಿಂದಿನ ಎಲ್ಲಾ ಯೋಜನೆ ಸ್ಥಗಿತವಾಗಿದೆ. ಲ್ಯಾಪ್ ಟಾಪ್ ಕೂಡ ವಿದ್ಯಾರ್ಥಿಗಳಿಗೆ ನೀಡುತ್ತಿಲ್ಲ. ಕೇವಲ ಟಾಪ್‌ಗೆ ಹಣ ಸರಬರಾಜು ಅಷ್ಟೇ. ಇದರ ವಿರುದ್ಧ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಮನಮೋಹನ್ ಸಿಂಗ್ ಕಾಲದಲ್ಲಿ ಕೊಟ್ಟ ಹಣಕ್ಕಿಂತ ದುಪ್ಪಟ್ಟು ಹಣ ಮೋದಿ ಕಾಲದಲ್ಲಿ ರಾಜ್ಯಕ್ಕೆ ಬಂದಿದೆ ಎಂದು ಹೇಳಿದ್ದಾರೆ. ಲೋಕಸಭೆ ಚುನಾವಣೆಗೆ ಕಾರ್ಯತಂತ್ರ ರೂಪಿಸುವ ಸಂಬಂಧ ಮಧ್ಯಾಹ್ನದ ಮೇಲೆ ಚರ್ಚೆ ನಡೆಯಲಿದೆ. ಮುಸ್ಲಿಂರಿಗೆ 10 ಸಾವಿರ ರೂ. ಕೋಟಿ, ರೈತರಿಗೆ 105 ಕೋಟಿ ರೂ. ನೆರವು ಇದು ರಾಜ್ಯ ಸರ್ಕಾರದ ಧೋರಣೆ ಎಂದು ಕಿಡಿಕಾರಿದ್ದಾರೆ. ಕಾರ್ಯಕಾರಿಣಿಗೆ ಕೆಲವರ ಗೈರು ವಿಚಾರವಾಗಿ ಮಾತನಾಡಿದ ಅವರು, ಎಲ್ಲರಿಗೂ ಆಹ್ವಾನ ಕಳುಹಿಸಲಾಗಿದೆ. ಕಾರಣಾಂತರಗಳಿಂದ ಕೆಲವರು ಬಂದಿಲ್ಲ. ಅವರ ಜೊತೆ ಮಾತನಾಡುತ್ತೇವೆ. ಯಾವುದೇ ಸಮಸ್ಯೆ ಇಲ್ಲ. ಎಲ್ಲವು ಸುಗಮವಾಗಿದೆ. ಎಲ್ಲರಿಗೂ ಆಹ್ವಾನ ಹೋಗಿದೆ ಎಂದಿದ್ದಾರೆ. ಸಂಸದ ರಾಘವೇಂದ್ರರನ್ನ ಶಾಮನೂರು ಹೊಗಳಿದ ವಿಚಾರವಾಗಿ ಮಾತನಾಡಿದ್ದು, ಕಾಂಗ್ರೆಸ್ ಮನೆಯೊಂದು 3 ಬಾಗಿಲಾಗಿದೆ. ಮುಂದೆ ಕಾಂಗ್ರೆಸ್ ಮನೆ ಒಡೆದು 100 ಚೂರು ಆಗಲಿದೆ. ಪ್ರಧಾನಿ ನರೇಂದ್ರ ಮೋದಿ ಉತ್ತಮ ಕೆಲಸ ಮಾಡಿದ್ದಾರೆ. ಮೋದಿ ಬೆಂಬಲಿಸಿ ರಾಘವೇಂದ್ರಗೆ ಮತ ನೀಡಿ ಅಂದಿದ್ದಾರೆ. ಇದು ಏನು ಸಂದೇಶ ನೀಡುತ್ತದೆ ಎಂದು ಗೊತ್ತಲ್ವಾ ಎಂದು ಹೇಳಿದ್ದಾರೆ.

# ಇಂಡಿಯಾ ಮೈತ್ರಿಕೂಟದ ಒಗ್ಗಟ್ಟಿಗೆ ಶ್ರಮಿಸುತ್ತೇವೆ

**ಕಲಬುರಗಿ:** ಇಂಡಿಯಾ ಮೈತ್ರಿಕೂಟ ಒಟ್ಟಾಗಿರಲು ಪ್ರಯತ್ನ ಮಾಡುತ್ತಿದ್ದೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು. ಕಲಬುರಗಿ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಮೈತ್ರಿಕೂಟವು ಒಗ್ಗಟ್ಟು ಕಾಯ್ದುಕೊಳ್ಳುವ ಬಗ್ಗೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ, ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಸೇರಿದಂತೆ ಎಲ್ಲರಿಗೂ ಪತ್ರ ಬರೆದಿದ್ದೇನೆ. ಹೀಗಾಗಿ ಇನ್ನು ಆ ವಿಚಾರದ ಬಗ್ಗೆ ಈಗ ಹೇಳಿಕೆ ಕೊಟ್ಟರೆ ಗೊಂದಲ ಆಗುತ್ತದೆ ಎಂದರು.

ಡೆಹ್ರಾಡೂನ್‌ಗೆ ಹೋಗಿ ಮಾಹಿತಿ ಪಡೆದುಕೊಂಡು ನಂತರ ಮಾತನಾಡುತ್ತೇನೆ. ಇಂಡಿಯಾ ಒಕ್ಕೂಟದಿಂದ ಎಲ್ಲರೂ ಸ್ಪರ್ಧೆ ಮಾಡಿದರೆ ಒಳ್ಳೆಯದಾಗಲಿದೆ ಎಂದು ಅವರು ಹೇಳಿದರು.

ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಸಿಎಂ ಸ್ಥಾನಕ್ಕೆ ರಾಜಿನಾಮೆ ನೀಡುವ ಬಗ್ಗೆ ಮಾಹಿತಿಯಿಲ್ಲ. ಅವರು ರಾಜ್ಯಪಾಲರನ್ನು ಭೇಟಿಯಾಗಿದ್ದಾರೋ ಇಲ್ಲವೋ ಗೊತ್ತಿಲ್ಲ. ಪ್ರಜಾಪ್ರಭುತ್ವ ಉಳಿಯಬೇಕಾದರೆ ನಾವು ಒಗ್ಗಟ್ಟಾಗಿರಬೇಕು. ಆ ನಿಟ್ಟಿನಲ್ಲಿ ನಮ್ಮ ಪ್ರಯತ್ನ ಮುಂದುವರಿದಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.



ಜೆಡಿಯು ಮತ್ತು ಬಿಜೆಪಿ ಮೈತ್ರಿ ಸರ್ಕಾರದ ಮುಖ್ಯಮಂತ್ರಿಯಾಗಿ ನಿತೀಶ್ ಕುಮಾರ್ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಯಿದೆ ಎಂದು ಮೂಲಗಳು ಹೇಳಿರುವ ಮತ್ತು ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಏಕಾಂಗಿಯಾಗಿ ಲೋಕಸಭೆ ಚುನಾವಣೆ ಎದುರಿಸಲಿದೆ ಎಂಬ ಮಮತಾ ಹೇಳಿಕೆಗಳ ಬೆನ್ನಲ್ಲೇ ಖರ್ಗೆ ಈ ಹೇಳಿಕೆ ನೀಡಿದ್ದಾರೆ.

ಬಂಗಾಳದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಭಾರತ್ ಜೋಡೋ ನ್ಯಾಯ ಯಾತ್ರೆ ಆರಂಭವಾಗಿದೆ. ಮುಂದಿನ ದಿನಗಳಲ್ಲಿ ಅವರು ಹಲವಾರು ಕಾರ್ಯಕ್ರಮಗಳನ್ನು ಹೊಂದಿದ್ದಾರೆ. ಅವುಗಳಲ್ಲಿ ಮಮತಾ ಬ್ಯಾನರ್ಜಿ ಭಾಗವಹಿಸಬೇಕೆಂದು ಕಾಂಗ್ರೆಸ್ ಬಯಸುತ್ತದೆ. ಕೆಲವು ನಿಮಿಷಗಳಾದರೂ ರಾಹುಲ್ ಪರವಾಗಿ ನಿಲ್ಲುವಂತೆ ಮಮತಾ ಅವರಿಗೆ ಕಾಂಗ್ರೆಸ್ ಮನವಿ ಮಾಡಿದೆ. ಈ ವಿಚಾರವಾಗಿ ಮಮತಾ ಜತೆ ಖರ್ಗೆ ಚರ್ಚಿಸಿದ್ದಾರೆ ಎಂದು ಜೈರಾಂ ರಮೇಶ್ ತಿಳಿಸಿದ್ದರು.

ಲೋಕಸಭೆ ಚುನಾವಣೆ ಸಮೀಪಿಸುತ್ತಿರುವ ಬೆನ್ನಲ್ಲೇ ಇಂಡಿಯಾ ಮೈತ್ರಿಕೂಟದ ನಾಯಕರಲ್ಲಿ ಬಿರುಕು ಮೂಡುತ್ತಿರುವುದು ಕಾಂಗ್ರೆಸ್‌ಗೆ ತಲೆನೋವಾಗಿ ಪರಿಣಮಿಸಿದೆ. ಬಿಜೆಪಿ ವಿರುದ್ಧ ಒಗ್ಗಟ್ಟಿನಿಂದ ಹೋರಾಡುವುದಕ್ಕಾಗಿ ರಚನೆಯಾಗಿರುವ ಮೈತ್ರಿಕೂಟದಲ್ಲೇ ಇದೀಗ ಅಪಸ್ವರಗಳು ಹೆಚ್ಚಾಗಿರುವುದು ಇತ್ತೀಚಿನ ಬೆಳವಣಿಗೆಗಳಿಂದ ಕಂಡುಬರುತ್ತಿದೆ. ಇದನ್ನು ಸರಿಪಡಿಸುವ ಹೊಣೆಗಾರಿಕೆ ಇದೀಗ ಖರ್ಗೆ ಮೇಲಿದ್ದು, ಆ ನಿಟ್ಟಿನಲ್ಲಿ ಅವರು ಕಾರ್ಯಪ್ರವೃತ್ತರಾಗಿದ್ದಾರೆ ಎನ್ನಲಾಗುತ್ತಿದೆ.

# ಶೃಂಗೇರಿ ಮಠದ ಗುತ್ತಿಗೆದಾರನ ವಿರುದ್ಧ ಎಫ್‌ಐಆರ್



**ಚಿಕ್ಕಮಗಳೂರು:** ಶೃಂಗೇರಿ ಮಠದಿಂದ ನಿರ್ಮಾಣವಾಗುತ್ತಿರುವ ಕಾಮಗಾರಿಗಾಗಿ ಅರಣ್ಯ ನಾಶಪಡಿಸಿರುವ ಆರೋಪದ ಮೇಲೆ ಶೃಂಗೇರಿ ಮಠದ ಗುತ್ತಿಗೆದಾರ ಸಂದೀಪ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಶೃಂಗೇರಿ ಮಠದಿಂದ ಗುಡ್ಡದ ಮೇಲೆ ಶಂಕರಾಚಾರ್ಯರ ಪ್ರತಿಮೆ ಬಳಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಗುತ್ತಿಗೆ ಪಡೆದಿದ್ದ ಸಂದೀಪ್ ಅವರು ಗುಡ್ಡ ನಾಶ, ಮರಗಳ ಕಡಿತ ಹಿನ್ನೆಲೆ ಶೃಂಗೇರಿ ವಲಯ ಅರಣ್ಯ ಇಲಾಖೆಯ ಕಚೇರಿಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಶೃಂಗೇರಿ ಮಠದಿಂದ ನಿರ್ಮಾಣವಾಗಿರುವ ಶಂಕರಾಚಾರ್ಯರ ಪ್ರತಿಮೆ ಬಳಿ ಕಟ್ಟಡ ಕಾಮಗಾರಿ ನಡೆಯುತ್ತಿದೆ. ಕೆಳ ಭಾಗದಲ್ಲಿ ಮಣ್ಣು ಕುಸಿತ ಹಿನ್ನೆಲೆ ಮರಗಳ ಕಡಿದು ಕಾಂಪೌಂಡ್ ಗೋಡೆ ನಿರ್ಮಾಣ ಮಾಡಲಾಗಿದೆ. ಶೃಂಗೇರಿ ಸಮೀಪದ ಮಾರುತಿ ಬೆಟ್ಟದಲ್ಲಿ ಗುಡ್ಡದ ಮೇಲೆ ಎಅಃ ಬಳಸಿ ಕಾಮಗಾರಿ ಮಾಡಿದ ಹಿನ್ನೆಲೆ ರಸ್ತೆಗೆ ಅಡ್ಡಲಾಗಿ ಗುಡ್ಡದ ಮಣ್ಣು ಕುಸಿದು ಬಿಳುತ್ತಿದೆ. ಸದ್ಯ ಕಾಮಗಾರಿಗೆ ಗುಡ್ಡ ನಾಶ, ಮರಗಳ ಕಡಿತ ಹಿನ್ನೆಲೆ ಶೃಂಗೇರಿ ವಲಯ ಅರಣ್ಯ ಇಲಾಖೆ ಕಚೇರಿಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸ್ಥಳಕ್ಕೆ ಅರಣ್ಯ ಇಲಾಖೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಶೃಂಗೇರಿ ಖಈಔ ಶೃತಿ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ.

ಅರಣ್ಯ ಇಲಾಖೆ ಜನವರಿ 2 ರಂದೇ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸುತ್ತಿದೆ. ನೂರಾರು ಮರಗಳ ಕಡಿತ, ಗುಡ್ಡ ನಾಶವಾದ ಹಿನ್ನೆಲೆ ಸ್ವಯಂ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಗುತ್ತಿಗೆದಾರ ಸಂದೀಪ್ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

# ಶಾಮನೂರು ಹೇಳಿಕೆಗೆ ಡಿಕೆ ಶಿವಕುಮಾರ್ ಸಿಡಿಮಿಡಿ

**ಬೆಂಗಳೂರು:** ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಸಂಸದ ಬಿವೈ ರಾಘವೇಂದ್ರ ಗೆಲ್ಲಬೇಕು ಎಂದು ಕಾಂಗ್ರೆಸ್‌ನ ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ ಹೇಳಿರುವುದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಸಿಡಿಮಿಡಿಗೊಂಡಿದ್ದಾರೆ. ಶಾಮನೂರು ಹೇಳಿಕೆಗೆ ತಿರುಗೇಟು ನೀಡಿದ ಅವರು, ಶಿವಮೊಗ್ಗದಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ಹೇಳಿದ್ದಾರೆ. ಶಿವಮೊಗ್ಗದ ಬೆಕ್ಕಿನ ಕಲ್ಮಠದಲ್ಲಿ ಬಸವಶ್ರೀ ಪ್ರಶಸ್ತಿ ಸ್ವೀಕಾರ ಮಾಡಿದ ನಂತರ ಶುಕ್ರವಾರ ಮಾತನಾಡಿದ್ದ ಶಾಮನೂರು ಶಿವಶಂಕರಪ್ಪ, ಜಿಲ್ಲೆಯ ಜನರು ಉತ್ತಮ ಸಂಸದರನ್ನು ಆಯ್ಕೆ ಮಾಡಿದ್ದೀರಿ. ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಆಗಿದೆ ಎಂದು ಸಂಸದ ರಾಘವೇಂದ್ರ ಅವರನ್ನು ಶ್ಲಾಘಿಸಿದ್ದರು.



ಮತ್ತೊಂದೆಡೆ, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನಿರ್ನಾಮ ಮಾಡಬೇಕು ಎಂಬ ಜಗದೀಶ್ ಶೆಟ್ಟರ್ ಹೇಳಿಕೆಗೂ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ. ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ನಿರ್ನಾಮ ಮಾಡಲು ಶೆಟ್ಟರ್ ಕರೆ ನೀಡಿದ್ದರು. ಇದೇ ಶೆಟ್ಟರ್ ಬಿಜೆಪಿ ನಿರ್ನಾಮ ಮಾಡಿ ಎಂದು ಕರೆ ನೀಡಿದ್ದರು ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಶಾಮನೂರು ಶಿವಶಂಕರಪ್ಪ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಪ್ರತಿಪಕ್ಷ ನಾಯಕ ಆರ್ ಅಶೋಕ, ಪ್ರಧಾನಿ ಮೋದಿ ಉತ್ತಮ ಕೆಲಸ ಮಾಡಿದ್ದಾರೆ. ಮೋದಿ ಬೆಂಬಲಿಸಿ, ರಾಘವೇಂದ್ರ ಅವರಿಗೆ ಮತ ನೀಡಿ ಎಂದು ಶಾಮನೂರು ಹೇಳಿದ್ದಾರೆ. ಇದು ಏನು ಸಂದೇಶ ನೀಡುತ್ತದೆ ಎಂಬುದು ಗೊತ್ತಲ್ವಾ. ಕಾಂಗ್ರೆಸ್ ಮನೆಯೊಂದು ಮೂರು ಬಾಗಿಲಾಗಿದೆ. ಮುಂದೆ ಒಡೆದು ನೂರು ಚೂರು ಆಗಲಿದೆ ಎಂದು ಹೇಳಿದ್ದಾರೆ.

ಕೆಲವರು ಸಂಸದರಾಗಿ ಗೆದ್ದು ಸಂಸತ್‌ಗೆ ಹೋಗಿ ಬಂದದ್ದಷ್ಟೇ ಗೊತ್ತು. ಆದರೆ, ಸಂಸದ ರಾಘವೇಂದ್ರ ಹಾಗಲ್ಲ. ಉತ್ತಮ ಕೆಲಸ ಮಾಡಿದ್ದಾರೆ. ವಿಪಕ್ಷ ಸಂಸದರ ಕೆಲಸವನ್ನು ಒಬ್ಬ ವ್ಯಕ್ತಿ ಮೆಚ್ಚಿ ಹೇಗೆ ಮಾತನಾಡಬಹುದು ಎಂಬುದಕ್ಕೆ ಶಾಮನೂರು ಶಿವಶಂಕರಪ್ಪ ಅವರ ಮಾತುಗಳೇ ಉದಾಹರಣೆ ಎಂದು ಮಾಜಿ ಸಚಿವ ಆರಗ ಜ್ಞಾನೇಂದ್ರ ಹೇಳಿದ್ದಾರೆ. ಶಾಮನೂರು ಶಿವಶಂಕರಪ್ಪ ವಯಸ್ಸಿನಲ್ಲಿ ಅಷ್ಟೇ ಅಲ್ಲ, ಆಲೋಚನೆಯಲ್ಲೂ ಹಿರಿಯರು. ಅವರು ಸರಿಯಾದ್ದನ್ನೇ ಹೇಳಿದ್ದಾರೆ ಎಂದು ಆರಗ ಜ್ಞಾನೇಂದ್ರ ಅಭಿಪ್ರಾಯಪಟ್ಟಿದ್ದಾರೆ.

ಶಾಮನೂರು ಶಿವಶಂಕರಪ್ಪ ಹೇಳಿಕೆಗೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಪ್ರತಿಕ್ರಿಯಿಸಿದ್ದು, ರಾಘವೇಂದ್ರ ಅವರ ಕಾರ್ಯವನ್ನು ಎಲ್ಲರೂ ಮೆಚ್ಚಿದ್ದಾರೆ. ಅದನ್ನು ಬಹಿರಂಗವಾಗಿ ಪ್ರಕಟಪಡಿಸಿದ್ದಕ್ಕಾಗಿ ಶಾಮನೂರು ಶಿವಶಂಕರಪ್ಪ ಅವರನ್ನು ಅಭಿನಂದಿಸುತ್ತೇನೆ ಎಂದು ಹೇಳಿದ್ದಾರೆ.

# ಸಲಿಂಗಕಾಮಕ್ಕೆ ಬಾಲಕ ಬಲಿ



**ರಾಮನಗರ:** ಇಲ್ಲಿನ ಜಿಲ್ಲಾ ಕ್ರೀಡಾಂಗಣದ ಹಿಂಭಾಗದ ರೈಲ್ವೇ ಹಳಿ ಪಕ್ಕದಲ್ಲಿ ಅನುಮಾನಾಸ್ಪದವಾಗಿ ಬಾಲಕನ ಶವ ಪತ್ತೆಯಾದ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಯುವಕನೊಬ್ಬನ ಸಲಿಂಗಕಾಮಕ್ಕೆ ಬಾಲಕ ಬಲಿಯಾಗಿರುವುದು ಪೊಲೀಸರ ತನಿಖೆ ವೇಳೆ ಬಯಲಾಗಿದೆ.

ಶುಕ್ರವಾರ 6 ವರ್ಷದ ಬಾಲಕನ ಶವ ಪತ್ತೆಯಾಗಿದೆ ಎಂದು ಯುವಕನೊಬ್ಬ ಪೊಲೀಸರಿಗೆ ಕರೆ ಮಾಡಿ ಮಾಹಿತಿ ನೀಡಿದ್ದ. ಇದೀಗ ಮಾಹಿತಿ ನೀಡಿದ ಯುವಕನೇ ಕೊಲೆಗಾರ ಎಂಬುದು ತಿಳಿದು ಬಂದಿದೆ. ಬಸ್ ನಿಲ್ದಾಣದ ಬಳಿ ಇದ್ದ ಬಾಲಕನನ್ನು ಬಿಸ್ಕೆಟ್ ನೀಡಿ ನಿರ್ಜನ ಪ್ರದೇಶಕ್ಕೆ ಕರೆದುಕೊಂಡು ಬಂದು ದೌರ್ಜನ್ಯ ಎಸಗಿರುವುದಾಗಿ ಯುವಕ ಪೊಲೀಸರ ಬಳಿ ಒಪ್ಪಿಕೊಂಡಿದ್ದಾನೆ.

ಇನ್ನೂ ಬಾಲಕನ ಗುರುತು ಪತ್ತೆಯಾಗದ ಹಿನ್ನೆಲೆಯಲ್ಲಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆರೋಪಿ ಯುವಕ ಹಿಂದೆಯೂ ಇದೇ ರೀತಿಯ ಕೃತ್ಯಗಳಲ್ಲಿ ಭಾಗಿಯಾಗಿದ್ದನಾ ಎಂಬ ಆಯಾಮದಲ್ಲೂ ತನಿಖೆ ನಡೆಯುತ್ತಿದೆ.

ಜಿಲ್ಲಾ ಕ್ರೀಡಾಂಗಣದ ಹಿಂಭಾಗದ ರೈಲ್ವೇ ಹಳಿ ಪಕ್ಕದಲ್ಲಿ ಬಾಲಕನ ಶವ ಜ.26 ರಂದು ಪತ್ತೆಯಾಗಿತ್ತು. ಈ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕ ಬಳಿಕ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದರು. ಇನ್ನೂ ಬಾಲಕನ ಶವದ ಮೇಲೆ ಸಿಗರೇಟಿನಿಂದ ಸುಟ್ಟ ಗುರುತುಗಳು ಪತ್ತೆಯಾಗಿತ್ತು. ಬೇರೆಡೆ ಕೊಲೆಗೈದು ಶವವನ್ನು ಎಸೆದು ಹೋದ ಶಂಕೆ ವ್ಯಕ್ತವಾಗಿತ್ತು. ಈ ಸಂಬಂಧ ರಾಮನಗರ ಟೌನ್ ಪೊಲೀಸ್ (ಕಂಟಳಿಜ) ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

## ಬಡ ಜನರಿಗಾಗಿ ಎಂದ ಸಿಎಂ

ವಾರದಲ್ಲಿ ಮೂರು ಬಾರಿಯಾದರೂ ಡಯಾಲಿಸಿಸ್ ಮಾಡಿಸಬೇಕು. ಹೀಗಾಗಿ ಸರ್ಕಾರ ಡಯಾಲಿಸ್ ಮಾಡಿಸಲು ಜನರಿಗೆ ಸಹಾಯವಾಗಲಿ ಎಂಬ ದೃಷ್ಟಿಯಿಂದ ತಾಲೂಕು, ಜಿಲ್ಲೆ, ನಗರದ ಪ್ರದೇಶಗಳಲ್ಲಿ ಅಳವಡಿಕೆ ಮಾಡುತ್ತಿದ್ದೇವೆ ಎಂದರು.

ಕೆಸಿ ಜೆನೆರಲ್ ಆಸ್ಪತ್ರೆ ಅತ್ಯಂತ ಹಳೆಯ ಆಸ್ಪತ್ರೆ. ಸಾಕಷ್ಟು ಜನರು ಈ ಆಸ್ಪತ್ರೆಗೆ ಬರುತ್ತಾರೆ. ಹೀಗಾಗಿ ಈ ಆಸ್ಪತ್ರೆಯಲ್ಲಿ ಸೇವೆಗಳನ್ನ ಆರಂಭಿಸುತಿದ್ದೇವೆ. ಇದೀಗಾ ಏಕಾ ಬಳಕೆಯನ್ನ ಜಾರಿ ಮಾಡುತ್ತಿದ್ದಾರೆ. ಇದು ಉತ್ತಮ ಬೆಳವಣಿಗೆ. ಇದರಿಂದ ಸೋಂಕು ಹರಡುವುದನ್ನ ತಡೆಗಟ್ಟಬಹುದು. ಈ ಡಯಾಲಿಸಿಸ್ ಗೆ ಶೇ.60 ರಷ್ಟು ರಾಜ್ಯ ಸರ್ಕಾರ ಹಾಗೂ ಶೇ.40 ರಷ್ಟು ಕೇಂದ್ರ ಸರ್ಕಾರ ನೀಡುತ್ತದೆ. ಆದರೆ ಡಯಾಲಿಸಿಸ್ ಕೇಂದ್ರ ಸರ್ಕಾರದ ಯೋಜನೆ ಅಂತಾರೆ ಎಂದರು. ಅಲ್ಲದೆ, ಕೆ.ಸಿ.ಜನರಲ್ ಆಸ್ಪತ್ರೆ ಅಭಿವೃದ್ಧಿಗೆ 150 ಕೋಟಿ ಮೀಸಲಿಟ್ಟಿದ್ದೇವೆ ಎಂದರು.

ಬಡವರಿಗೆ ಅತ್ಯಂತ ಆಸಕ್ತಿಯಿಂದ, ಗುಣಮಟ್ಟದ ಚಿಕಿತ್ಸೆ ನೀಡಬೇಕು. ನಮ್ಮ ರಾಜ್ಯದಲ್ಲಿ ಬಡವರು ಹೆಚ್ಚಿದ್ದಾರೆ. ನಮ್ಮ ಸಮಾಜದಲ್ಲಿ ಅಸಮಾನತೆ ಇದೆ. ಈ ಅಸಮಾನತೆಯಿಂದ ಬಹಳ ಜನ ಕಷ್ಟಪಡುತ್ತಾ ಇದ್ದಾರೆ. ಇದನ್ನ ಹೋಗಲಾಡಿಸುವ ಸಲುವಾಗಿ ಈ ಉಚಿತ ಯೋಜನೆಗಳನ್ನ ಕೊಟ್ಟಿದ್ದೇವೆ ಎಂದರು.

ಶಕ್ತಿ ಯೋಜನೆ ಜಾರಿಯಾದ ನಂತರ ಜೂ.1ರಿಂದ ಈವರೆಗೆ ಈವರೆಗೆ 141 ಕೋಟಿ ಮಹಿಳೆಯರು ಸಂಚಾರ ಮಾಡಿದ್ದಾರೆ. ಇದರಿಂದ ಪ್ರಯಾಣಕ್ಕೆ ಕೊಡುತ್ತಿದ್ದ ಅವರ ಹಣ ಉಳಿತಾಯವಾಗಿದೆ. ಗೃಹಲಕ್ಷ್ಮೀ ಯೋಜನೆಯಡಿ ಮನೆ ಯಜಮಾನಿಗೆ 2 ಸಾವಿರ ರೂಪಾಯಿ, ಗೃಹಜ್ಯೋತಿ ಯೋಜನೆಯಡಿ ಉಚಿತವಾಗಿ 200 ಯೂನಿಟ್ ವಿದ್ಯುತ್ ನೀಡಲಾಗುತ್ತಿದ್ದು, ಯುವನಿಧಿ ಯೋಜನೆಯನ್ನೂ ಜಾರಿ ಮಾಡಿದ್ದೇವೆ. ಇಂತಹ ಯೋಜನೆಗಳನ್ನು ಯಾವ ಸರ್ಕಾರವೂ ಜಾರಿ ಮಾಡಿಲ್ಲ ಎಂದರು. ರಾಜ್ಯದಲ್ಲಿ ಉಚಿತ ಡಯಾಲಿಸಿಸ್ ಸೇವೆ ನೀಡಿದ್ದೇ ಸಿದ್ದರಾಮಯ್ಯ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೆಲ ಸಮಸ್ಯೆಗಳಿದ್ದವು, ಅದನ್ನು ಸರಿಪಡಿಸುವ ಕೆಲಸಕ್ಕೆ ಮುಂದಾಗಿದ್ದೇವೆ. ವ್ಯವಸ್ಥೆ ಬದಲಾಯಿಸುವ ನಿಟ್ಟಿನಲ್ಲಿ ನೂತನ ವ್ಯವಸ್ಥೆ ಜಾರಿ ಮಾಡಿದ್ದೇವೆ ಎಂದರು.

ರಾಜ್ಯದ ಪ್ರತಿ ಕೇಂದ್ರದಲ್ಲೂ ಹೊಸ ಯಂತ್ರವನ್ನು ಅಳವಡಿಸಿದ್ದೇವೆ. 42 ತಾಲೂಕುಗಳಲ್ಲಿ ಹೊಸ ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆ, ಸರ್ಕಾರಿ ಆಸ್ಪತ್ರೆಗಳಲ್ಲಿ ನಿತ್ಯ 6 ರೋಗಿಗಳಿಗೆ ಡಯಾಲಿಸಿಸ್ ಸೇವೆ ಇದೆ. ಬೆಂಗಳೂರು, ಮೈಸೂರು, ಬೆಳಗಾವಿಗೆ ಟಂಡರ್ ಮುಗಿದು ಕಾರ್ಯ ಆರಂಭವಾಗಿದೆ. ಕಲಬುರಗಿಯಲ್ಲಿ ಮಾತ್ರ ಮತ್ತೆ ಟೆಂಡರ್ ಕರೆಯಲಾಗಿದೆ. ಇನ್ನೊಂದು ವಾರದಲ್ಲಿ ಅದು ಕೂಡ ಆಗಲಿದೆ ಎಂದರು.

ಕೆಸಿ ಜನರಲ್ ಗೆ ಒತ್ತಡ ಹೆಚ್ಚಾಗುತ್ತಿದೆ. ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಬೇಕಾಗಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಜೊತೆ ಮಾತುಕತೆ ಮಾಡಲಾಗಿದೆ. 150 ಕೋಟಿ ವೆಚ್ಚದಲ್ಲಿ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಬೇಕಿದೆ. ಮುಖ್ಯಮಂತ್ರಿಗಳು ಆಶೀರ್ವಾದ ಮಾಡಿದ್ರೆ ಅದು ಕೂಡ ಆಗಲಿದೆ ಎಂದರು.

## ಸಂಪುಟದಲ್ಲಿ ಸ್ಥಾನ

ನಿತೀಶ್ ಕುಮಾರ್ ಅವರು ಮುಂದಿನ ನಡೆ ರೂಪಿಸಲು ಗೃಹ ಸಚಿವ ಅಮಿತ್ ಶಾ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನೇರ ಮಾತುಕತೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬಿಹಾರ ಮುಖ್ಯಮಂತ್ರಿ ನಾಳೆ ಜೆಡಿಯು ಮತ್ತು ಬಿಜೆಪಿ ಶಾಸಕರಿಗೆ ತಮ್ಮ ಮನೆಯಲ್ಲಿ ಉಪಾಹಾರ ಕೂಟ ಏರ್ಪಡಿಸಲಿದ್ದು, ನಂತರ ಉಭಯ ಪಕ್ಷಗಳ ಶಾಸಕರು ರಾಜ್ಯಪಾಲರ ಬಳಿ ತೆರಳಿ ಬೆಂಬಲ ಪತ್ರ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ರಾಜ್ಯದಲ್ಲಿ ಬಿಜೆಪಿ ಮತ್ತು ಜನತಾ ದಳ (ಯುನೈಟೆಡ್) ಮೈತ್ರಿಯಲ್ಲಿದ್ದಾಗ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಉಪ ಮುಖ್ಯಮಂತ್ರಿ ಆಗಿದ್ದ ಬಿಜೆಪಿ ನಾಯಕ ಸುಶೀಲ್ ಕುಮಾರ್ ಮೋದಿ ಅವರಿಗೆ ಅದೇ ಸ್ಥಾನ ಸಿಗುವ ಸಾಧ್ಯತೆ ಇದೆ ಎಂದು ಬಲ್ಲಮೂಲಗಳು ವರದಿ ಮಾಡಿವೆ.

**ಬಿಹಾರದಲ್ಲಿ ಇದುವರೆಗಿನ ಪ್ರಮುಖ 10 ಬೆಳವಣಿಗೆಗಳು:** ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರನ್ನು ಪಾಟ್ನಾದಲ್ಲಿ ಏನಾಗುತ್ತಿದೆ ಎಂಬುದರ ಹಿರಿಯ ವೀಕ್ಷಕರಾಗಿ ಪಾಟ್ನಾಗೆ ಕಳುಹಿಸಲಾಗಿದೆ.

ನಿತೀಶ್ ಕುಮಾರ್ ಅವರನ್ನು ಸಂಪರ್ಕಿಸಲು ಪಕ್ಷವು ಪ್ರಯತ್ನಿಸುತ್ತಿದೆ ಎಂದು ಕಾಂಗ್ರೆಸ್ ಹೇಳಿದೆ. ಮಲ್ಲಿಕಾರ್ಜುನ ಖರ್ಗೆ ಅವರು ನಿತೀಶ್ ಕುಮಾರ್ ಅವರಿಗೆ ಹಲವಾರು ಬಾರಿ ಕರೆ ಮಾಡಿದ್ದಾರೆ. ಆದರೆ ನಿತೀಶ್ ಕುಮಾರ್ ಅವರು ಸಭೆಯಲ್ಲಿದ್ದರು. ಬಿಹಾರ ಸಿಎಂ ಮರಳಿ ಕರೆ ಮಾಡಿದಾಗ, ಕಾಂಗ್ರೆಸ್ ಅಧ್ಯಕ್ಷರು ಕಾರ್ಯನಿರತರಾಗಿದ್ದರು, ಆದ್ದರಿಂದ ಅವರು ಇನ್ನೂ ಮಾತನಾಡಲು ಸಾಧ್ಯವಾಗಲಿಲ್ಲ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಶನಿವಾರ ನಡೆದ ಪಕ್ಷದ ಸಭೆಯಲ್ಲಿ ತೇಜಸ್ವಿ ಹಲವು ಅನಿರೀಕ್ಷಿತ ಬೆಳವಣಿಗೆಗಳು ನಡೆಯಬಹುದು ಎಂದು ಸೂಚಿಸಿದರು. ಮುಖ್ಯಮಂತ್ರಿಯವರು ನನ್ನೊಂದಿಗೆ ವೇದಿಕೆಯಲ್ಲಿ ಕುಳಿತು 2005 ರ ಮೊದಲು ಬಿಹಾರದಲ್ಲಿ ಏನಿತ್ತು ಎಂದು ಕೇಳುತ್ತಿದ್ದರು, ನಾನು ಏನೂ ಪ್ರತಿಕ್ರಿಯಿಸಲಿಲ್ಲ. ಈಗ, ಹೆಚ್ಚು ಜನರು ನಮ್ಮೊಂದಿಗಿದ್ದಾರೆ. ಎರಡು ದಶಕಗಳಲ್ಲಿ ಏನು ಮಾಡದೆ ಉಳಿದಿದೆಯೋ ಅದನ್ನು ನಾವು ಪಡೆಯುವಲ್ಲಿ ಯಶಸ್ವಿಯಾಗಿದ್ದೇವೆ. ಉದ್ಯೋಗಗಳು, ಜಾತಿ ಜನಗಣತಿ, ಹೆಚ್ಚುತ್ತಿರುವ ಮೀಸಲಾತಿ ಇತ್ಯಾದಿ ಕಡಿಮೆ ಸಮಯದಲ್ಲಿ ಮಾಡಲ್ಪಟ್ಟಿದೆ.. 'ಬಿಹಾರ ಮೇ ಅಭಿ ಖೇಲ್ ಹೋನಾ ಬಾಕಿ ಹೈ' (ಬಿಹಾರದಲ್ಲಿ ಆಟ ಇನ್ನೂ ಪ್ರಾರಂಭವಾಗಿಲ್ಲ) ಎಂದು ತೇಜಸ್ವಿ ಹೇಳಿರುವುದಾಗಿ ಎಎನ್‌ಐ ವರದಿ ಮಾಡಿದೆ.

ಊಹಾಪೋಹಗಳಿಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಜೆಡಿಯು ಹೊರಗೆ ಹೋಗುತ್ತಿದೆಯೇ ಅದರ ಬಗ್ಗೆ ನನಗೆ ಯಾವುದೇ ಮಾಹಿತಿ ಸಿಕ್ಕಿಲ್ಲ, ನಾನು ಅವರಿಗೆ (ಜೆಡಿ (ಯು) ನಾಯಕತ್ವಕ್ಕೆ ಪತ್ರ ಬರೆದಿದ್ದೇನೆ. ಮತ್ತು ಅವರೊಂದಿಗೆ ಮಾತನಾಡಲು ಪ್ರಯತ್ನಿಸಿದೆ. ಅವರ ಮನಸ್ಸಿನಲ್ಲಿ ಏನಿದೆ ಎಂದು ನನಗೆ ಸ್ಪಷ್ಟವಾಗಿ ತಿಳಿದಿಲ್ಲ ಎಂದು ಹೇಳಿದ್ದಾರೆ.

ಬಿಹಾರ ಬಿಜೆಪಿ ಕೋರ್ ಕಮಿಟಿ ಸಭೆಯೂ ಶನಿವಾರ ನಡೆದಿದೆ. ನಿತೀಶ್ ಕುಮಾರ್ ಇನ್ನೂ ಸಿಎಂ, ತೇಜಸ್ವಿ ಯಾದವ್ ಉಪ ಮುಖ್ಯಮಂತ್ರಿ ಎಂದು ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಹೇಳಿದ್ದಾರೆ.

ಬಿಹಾರದ ರಾಜಕೀಯ ಚಟುವಟಿಕೆಗಳ ಮೇಲೆ ಬಿಜೆಪಿ ಕಣ್ಣಿಟ್ಟಿದೆ ಎಂದು ಗಿರಿರಾಜ್ ಸಿಂಗ್ ಹೇಳಿದ್ದಾರೆ. ''ನಾವು ಬಿಟ್ಟಿದ್ದೇವೆ ಎಂದು ಲಾಲು ಯಾದವ್ ಆಗಲೀ, ಬಿಟ್ಟು ಹೋಗುವುದಾಗಿ ನಿತೀಶ್ ಕುಮಾರ್ ಆಗಲೀ ಹೇಳಿಲ್ಲ. ಇದರ ಬಗ್ಗೆ ಬಿಜೆಪಿ ಏನು ಹೇಳಬಹುದು '' ಗಿರಿರಾಜ್ ಸಿಂಗ್ ಹೇಳಿದರು.

ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿದ್ದು, ಅಲ್ಲಿ ಲೋಕ ಜನಶಾಂಕ್ತಿ ಪಕ್ಷದ (ರಾಮ್ ವಿಲಾಸ್) ಅಧ್ಯಕ್ಷ ಚಿರಾಗ್ ಪವನ್ ಕೂಡ ಉಪಸ್ಥಿತರಿದ್ದರು. ಸಭೆಯ ಬಳಿಕ ಮಾತನಾಡಿದ ಚಿರಾಗ್, ನಿತೀಶ್ ಕುಮಾರ್ ಅವರು ಎನ್ ಡಿಎಗೆ ಬರುತ್ತಾರೋ ಇಲ್ಲವೋ ಎಂಬುದನ್ನು ಮೊದಲು ಸ್ಪಷ್ಟಪಡಿಸಬೇಕು ಮತ್ತು ಅವರು ಬರುತ್ತಿದ್ದರೆ ಅದರ ಸಮಯವನ್ನು ಸ್ಪಷ್ಟಪಡಿಸಬೇಕು ಎಂದಿದ್ದಾರೆ.

ಇಷ್ಟೆಲ್ಲ ರಾಜಕೀಯ ಮೇಲಾಟದ ನಡುವೆ ನಿತೀಶ್ ಕುಮಾರ್ ಬಕ್ಸರ್‌ನ ಬ್ರಹ್ಮಪುರದಲ್ಲಿ ಎರಡನೇ ಹಂತದ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

### ಮೊದಲ ಪುಟದಿಂದ...

## ಬಜೆಟ್ ಮಂಡನೆಗೆ ಸಿದ್ಧತೆ

ಯಾವುದೇ ನಿರ್ಬಂಧವಿಲ್ಲ.

**ಐದು ಬಜೆಟ್ ಮಂಡಿಸಿದ್ದ ಅರುಣ್ ಜೇಟ್ಲಿ:** 2014 ರಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಅರುಣ್ ಜೇಟ್ಲಿ ಅವರು ಹಣಕಾಸು ಸಚಿವಾಲಯದ ಜವಾಬ್ದಾರಿಯನ್ನು ವಹಿಸಿಕೊಂಡರು ಮತ್ತು 2014-15 ರಿಂದ 2018-19 ರವರೆಗೆ ಸತತ ಐದು ಬಜೆಟ್ ಗಳನ್ನು ಮಂಡಿಸಿದ್ದರು. 2017 ರಲ್ಲಿ, ಫೆಬ್ರವರಿ ಒಂದರಂದೇ ಬಜೆಟ್ ಮಂಡಿಸಲು ಸರ್ಕಾರ ನಿರ್ಧರಿಸಿತು.

ಜೇಟ್ಲಿ ಅವರ ಅನಾರೋಗ್ಯದ ಕಾರಣ, ಹೆಚ್ಚುವರಿಯಾಗಿ ಸಚಿವಾಲಯದ ಜವಾಬ್ದಾರಿಯನ್ನು ಹೊತ್ತಿದ್ದ ಪಿಯೂಷ್ ಗೋಯಲ್ ಅವರು 2019 ರ ಫೆಬ್ರವರಿ 1ರಂದು ಮಧ್ಯಂತರ ಬಜೆಟ್ ಅನ್ನು ಮಂಡಿಸಿದರು. ಗೋಯಲ್ ಅವರು ವೇತನ ಸಹಿತ ತೆರಿಗೆದಾರರಿಗೆ ಸ್ಟ್ಯಾಂಡರ್ಡ್ ಡಿಡಕ್ಷನ್ ಮಿತಿಯನ್ನು 10,000 ರೂ.ನಿಂದ 50,000 ರೂ.ಗೆ ಹೆಚ್ಚಿಸಿದ್ದರು. ಅಲ್ಲದೆ, ವಾರ್ಷಿಕ ತೆರಿಗೆಗೆ ಒಳಪಡುವ ಆದಾಯ 5 ಲಕ್ಷ ರೂಪಾಯಿ ಮೀರದ ತೆರಿಗೆದಾರರಿಗೆ ತೆರಿಗೆ ವಿನಾಯಿತಿ ಮಿತಿಯನ್ನು 2,500 ರಿಂದ 12,500 ಕ್ಕೆ ಹೆಚ್ಚಿಸಿದ್ದರು.

**ಇಂದಿರಾ ಗಾಂಧಿ ನಂತರದ ಮಹಿಳಾ ಹಣಕಾಸು ಸಚಿವೆ:** 2019 ರ ಸಾರ್ವತ್ರಿಕ ಚುನಾವಣೆಯ ನಂತರ ಎರಡನೇ ಅವಧಿಯಲ್ಲಿ ಸೀತಾರಾಮನ್ ಅವರಿಗೆ ಹಣಕಾಸು ಇಲಾಖೆಯ ಜವಾಬ್ದಾರಿಯನ್ನು ಮೋದಿ ಸರ್ಕಾರ ವಹಿಸಿತು. ಮಾಜಿ ಪ್ರಧಾನಿ ದಿ. ಇಂದಿರಾ ಗಾಂಧಿ ನಂತರ ಬಜೆಟ್ ಮಂಡಿಸಿದ ಎರಡನೇ ಮಹಿಳೆ ಎಂಬ ಹೆಗ್ಗಳಿಕೆಗೆ ನಿರ್ಮಲಾ ಸೀತಾರಾಮನ್ ಪಾತ್ರರಾದರು. ಇಂದಿರಾ ಗಾಂಧಿಯವರು 1970-71ರ ಆರ್ಥಿಕ ವರ್ಷದ ಬಜೆಟ್ ಮಂಡಿಸಿದ್ದರು.

**ಒಟ್ಟು 10 ಬಾರಿ ಬಜೆಟ್ ಮಂಡಿಸಿದ್ದ ಮೊರಾರ್ಜಿ ದೇಸಾಯಿ:** ಮಾಜಿ ಪ್ರಧಾನಿ ಮೊರಾರ್ಜಿ ದೇಸಾಯಿ ಅವರು ಗರಿಷ್ಠ 10 ಬಾರಿ ಬಜೆಟ್ ಮಂಡಿಸಿದ್ದಾರೆ. ದೇಶದ ಈವರೆಗಿನ ಹಣಕಾಸು ಸಚಿವರ ಪೈಕಿ ಅತಿಹೆಚ್ಚು ಬಾರಿ ಬಜೆಟ್ ಮಂಡಿಸಿದ ದಾಖಲೆ ಇವರದ್ದಾಗಿದೆ. ಇದರಲ್ಲಿ, ಸತತ ಐದು ಪೂರ್ಣ ಬಜೆಟ್ ಮತ್ತು ಒಂದು ಮಧ್ಯಂತರ ಬಜೆಟ್ ಮಂಡಿಸಿದ್ದಾರೆ. ಸ್ವತಂತ್ರ ಭಾರತದ ಮೊದಲ ಬಜೆಟ್ ಅನ್ನು ಮೊದಲ ಹಣಕಾಸು ಸಚಿವ ಆರ್ ಕೆ ಷಣ್ಮುಖಂ ಚೆಟ್ಟಿ ಮಂಡಿಸಿದ್ದರು.

ಈ ಬಾರಿ ನಿರ್ಮಲಾ ಸೀತಾರಾಮನ್ ಅವರು ತಮ್ಮ ಆರನೇ ಬಜೆಟ್ ಅನ್ನು ಮಂಡಿಸುತ್ತಿದ್ದು, ಗ್ರಾಮೀಣ ಪ್ರದೇಶಗಳನ್ನು ಉತ್ತೇಜಿಸಲು ಕೆಲವು ಕ್ರಮಗಳನ್ನು ತೆಗೆದುಕೊಳ್ಳಬಹುದು ಎಂದು ನಿರೀಕ್ಷಿಸಲಾಗಿದೆ.

ಭಾರತವು 2027-28ರ ವೇಳೆಗೆ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಮತ್ತು 2047 ರ ವೇಳೆಗೆ 30 ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಗುರಿಯೊಂದಿಗೆ ಮುನ್ನಡೆಯುತ್ತಿದೆ.

## ಮತ್ತೆ ಬಲ ಬರುತ್ತೆ

ಮರ್ಜ ಮಾಡುವ ಮೂಲಕವೇ ಶ್ರೀರಾಮುಲು, ಯಡಿಯೂರಪ್ಪ ಪಕ್ಷಕ್ಕೆ ಸೇರಿದ್ದಾರೆ. ಇವರ ಹಾದಿಯಲ್ಲಿ ಜರ್ನಾದನ ರೆಡ್ಡಿ ಪಕ್ಷಕ್ಕೆ ಸೇರುತ್ತಾರೆ. ನಾನು ಜನಾರ್ದನ ರೆಡ್ಡಿ ಸಂಪರ್ಕ ಮಾಡಿಲ್ಲ ಎಂದು ಹೇಳಿದ್ದಾರೆ.

ಕೊಪ್ಪಳದಲ್ಲಿ ಶಾಸಕ ಜನಾರ್ದನ ರೆಡ್ಡಿ ಮಾತನಾಡಿದ್ದು, ಕೆಆರ್ ಪಿಪಿ ಪಕ್ಷದ ಜೊತೆ ಬಿಜೆಪಿ ಹೊಂದಾಣಿಕೆಗೆ ಸಿದ್ದವಾಗಿದ್ದರೆ ನಾನೂ ಪ್ರಯಾಣ ಮಾಡುತ್ತೇನೆ. ಹೊಂದಾಣಿಕೆ ಮಾಡಿಕೊಂಡು ಹೋಗೋದಕ್ಕೆ ಸಿದ್ದರಿದ್ದೇವೆ ಎಂದು ಹೇಳಿದ್ದಾರೆ. ದೇಶ ಮೋದಿ ಅವರು ಪ್ರಧಾನಿಯಾಗಬೇಕೆಂತಿದೆ. ಮೋದಿ ಪ್ರಧಾನಿಯಾಗುವುದಕ್ಕೆ ಕೆಆರ್ ಪಿಪಿ ಪಕ್ಷ ಹೊಂದಾಣಿಕೆಗೆ ಸಿದ್ಧ. ಕಲ್ಯಾಣ ರಾಜ್ಯ ಪಕ್ಷದಿಂದ ಗೆದ್ದ ಮೇಲೆ ಬಿಜೆಪಿಗೆ ಸಪೋರ್ಟ್ ಮಾಡುತ್ತೇನೆ ಎಂದು ಹೇಳಿದ್ದಾರೆ.

ಕೆಆರ್ ಪಿಪಿ ಪಕ್ಷದ ಸಂಸ್ಥಾಪಕ ಹಾಗೂ ಗಂಗಾವತಿ ಶಾಸಕ ಜನಾರ್ದನರೆಡ್ಡಿಯನ್ನ ಬಿಜೆಪಿಗೆ ಕರೆತರುವ ಪ್ರಯತ್ನಗಳು ನಡೆಯುತ್ತಿರುವ ಬಗ್ಗೆ ಮಾಹಿತಿ ಇದೆ. ಬಿಜೆಪಿ ಜತೆಗೆ ಕೆಆರ್ ಪಿಪಿ ವಿಲೀನ ಮಾಡಿ, ಕೊಪ್ಪಳದಿಂದ ರೆಡ್ಡಿಯನ್ನ ಅಖಾಡಕ್ಕೆ ಇಳಿಸುವ ಬಗ್ಗೆ ಚರ್ಚೆ ಇದೆ ಅಂತ ಹೇಳಲಾಗುತ್ತಿದೆ. ಬಹಿರಂಗ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿಯನ್ನ ರೆಡ್ಡಿ ಹೊಗಳಿದ್ದು ಈ ಬೆಳವಣಿಗೆಗೆ ತಳಕು ಹಾಕಲಾಗಿದೆ.

## ನಮ್ಮ ಕೈಯಲ್ಲಿ ಇಲ್ಲ

ಅದು ನಮಗೆ ಸಂಬಂಧವಿಲ್ಲದ ವಿಷಯ ಜಗದೀಶ್ ಶೆಟ್ಟರ್ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧೆ ವಿಚಾರವಾಗಿ ಮಾತನಾಡಿದ್ದು, ಬಿಜೆಪಿ ಪಕ್ಷದಿಂದ ಯಾರಾದರು ನಿಲ್ಲಲ್ಲೇ ಬೇಕು ನಿಲ್ಲುವುದು ಬಿಡುವುದು ಅವರ ಪಕ್ಷಕ್ಕೆ ಬಿಟ್ಟಿದ್ದು, ನಮಗೆ ಸಂಬಂಧವಿಲ್ಲದ ವಿಷಯ. ಶೆಟ್ಟರ್ ಸ್ಪರ್ಧೆಯಿಂದ ಬಿಜೆಪಿಗೆ ಲಾಭ, ಲಿಂಗಾಯತ ಮತಗಳು ಭದ್ರ ಎನ್ನುವ ಚರ್ಚೆ ವಿಚಾರ, ಚುನಾವಣೆ ಬಂದಾಗ ನೋಡೋಣ, ಯಾರು ಯಾವ ಕಡೆ ಆಗುತ್ತಾರೆ ಎಂದಿದ್ದಾರೆ.

ಕಾಂಗ್ರೆಸ್ ನಲ್ಲಿ ಉಸಿಗಟ್ಟಿಸುವ ವಾತಾವರಣ ಇತ್ತು ಎಂಬ ಜಗದೀಶ್ ಶೆಟ್ಟರ್ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ್ದು, ಬಿಜೆಪಿಯಿಂದ ಯಾಕೆ ಕಾಂಗ್ರೆಸ್ ಗೆ ಬಂದರು ಅವರು ಅವಾಗ ಬರುವಾಗ ಏನಾಗಿತ್ತಂತೆ ಅಲ್ಲಿ ಎಂದು ಪ್ರಶ್ನಿಸಿದ್ದಾರೆ.

ಶೆಟ್ಟರ್ ಬಿಜೆಪಿ ಅಭ್ಯರ್ಥಿ ಆದರೆ ಬೆಳಗಾವಿ ಬಿಜೆಪಿಗೆ ದೊಡ್ಡ ಲಾಭ ಆಗಲಿದೆ ಎಂಬ ಚರ್ಚೆ ವಿಚಾರ, ಒಬ್ಬ ವ್ಯಕ್ತಿಯಿಂದ ಆಗಲ್ಲ. ಪಕ್ಷದ ಲೆಕ್ಕ ಹಿಡಿಯಬೇಕು. ಸತೀಶ್ ಜಾರಕಿಹೊಳಿ, ಶೆಟ್ಟರ್ ಇಬ್ಬರನ್ನೇ ಲೆಕ್ಕಾಚಾರ ಹಾಕಲು ಆಗಲ್ಲ ಎಂದಿದ್ದಾರೆ.

ಸತೀಶ್ ಜಾರಕಿಹೊಳಿ ಕಾಂಗ್ರೆಸ್ ನಲ್ಲಿ ಪವರ್ ಸೆಂಟರ್ ಆಗುತ್ತಿದ್ದಾರೆ ಎಂಬ ಚರ್ಚೆ ವಿಚಾರವಾಗಿ ಮಾತನಾಡಿ, ನಾವೇನು ಪವರ್ ಸೆಂಟರ್ ಅಲ್ಲ. ಪಕ್ಷದಲ್ಲಿ ಇದ್ದೇವೆ. ಅಷ್ಟೇ ಹೊರಗಡೆ ಏನು ಹೋಗಿಲ್ಲ. ಸಮಾನ ಮನಸ್ಕರರು ಕೂಡಿದ್ದೇವೆ ಹೊರತಾಗಿ ಪವರ್ ಸೆಂಟರ್ ಏನು ಅಲ್ಲ ಎಂದು ಹೇಳಿದ್ದಾರೆ.

ಡಿಸಿಎಂ ಈಗ ಸದ್ಯಕ್ಕೆ ಇಲ್ಲ. ಚುನಾವಣೆ ಫೋಕಸ್ ಮಾಡುತ್ತಿದ್ದೇವೆ. ಚುನಾವಣೆ ಮೇಲೆ ಗಮನ ಹರಿಸಿದ್ದೇವೆ. ಸದ್ಯಕ್ಕಂತೂ ಅದರ ಅವಶ್ಯಕತೆ ಇಲ್ಲ. ಚುನಾವಣೆ ಬಳಿಕ ಕೇಳೋಣ ಮತ್ತೊಂದು ಸರಿ ಕೇಳುತ್ತೇವೆ. ನಮ್ಮ ಹೈಕಮಾಂಡ್ ಜೊತೆ ಚರ್ಚೆ ಮಾಡುತ್ತೇವೆ ಎಂದಿದ್ದಾರೆ.

## ಬಿಜೆಪಿ ಅಧಿಕಾರಕ್ಕೆ ಏರಬೇಕು

ಲೋಕಸಭಾ ಚುನಾವಣೆಗೆ ಬಿಜೆಪಿಯಿಂದ ಭರದ ಸಿದ್ಧತೆ ನಡೆಯುತ್ತಿದ್ದು, ಲೋಕಸಭಾ ಕ್ಷೇತ್ರಗಳ ಕ್ಲಸ್ಟರ್ ಗಳಿಗೆ ಉಸ್ತುವಾರಿಗಳನ್ನು ನೇಮಕ ಮಾಡಿದೆ. 28 ಕ್ಷೇತ್ರಗಳನ್ನು 8 ಕ್ಲಸ್ಟರ್ ಗಳಾಗಿ ವಿಂಗಡಿಸಲಾಗಿದ್ದು, ಎಸ್.ಎ.ರಾಮದಾಸ್, ಎಂ.ಬಿ.ಭಾನುಪ್ರಕಾಶ್, ಮಹೇಶ್ ಟೆಂಗಿನಕಾಯಿ, ರಾಜಕುಮಾರ್ ಪಾಟೀಲ್ ತೇಲ್ಕೂರ್, ಚಂದ್ರಶೇಖರ ಪಾಟೀಲ್ ಹಲಗೇರಿ, ಕೆ.ಎಸ್.ನವೀನ್, ಎಸ್.ಮುನಿರಾಜು, ಹೆಚ್.ಎಸ್. ಗೋಪಿನಾಥರೆಡ್ಡಿ ಅವರನ್ನು ಉಸ್ತುವಾರಿಗಳನ್ನಾಗಿ ನೇಮಕ Lok ಮಾಡಲಾಗಿದೆ.

## ಟೀಕೆ

ಗೌರವವಿದೆ.ಅವರು ಅನೇಕ ಸಾಮಾಜಿಕ ಸುಧಾರಣೆಗಳಿಗೆ ನಾಂದಿ ಹಾಡಿದ್ದಾರೆ. ಸತ್ಯಗಳ ಆಧಾರದಲ್ಲಿ ಅಂಬೇಡ್ಕರ್ ಅವರ ಕೊಡುಗೆಗಿಂತ ನೆಹರೂ ಅವರ ಕೊಡುಗೆ ಹೆಚ್ಚು ಎಂದು ನಾನು ಲೇಖನ ಬರೆದಿದ್ದೇನೆ. ಇತಿಹಾಸ ಓದಿದ ಯಾರಾದರೂ ಇದನ್ನು ಒಪ್ಪಿಕೊಳ್ಳುತ್ತಾರೆ. ಕಾಂಗ್ರೆಸ್ ಸಂವಿಧಾನವನ್ನು ಬರೆಯುವ ಪ್ರಕ್ರಿಯೆಯನ್ನು ಪ್ರಾರಂಭಿಸಿತು, 1930 ರಲ್ಲಿ, ಜನವರಿ 26 ರಂದು ಕಾಂಗ್ರೆಸ್ 'ಪೂರ್ಣ ಸ್ವರಾಜ್' ನಿರ್ಣಯವನ್ನು ಅಂಗೀಕರಿಸಿತು, ಅಂದಿನಿಂದ ನೆಹರೂ ಅವರು ಸಂವಿಧಾನ ರಚನೆಗೆ ಶ್ರಮಿಸಿದರು ಎಂದು ಕುಲಕರ್ಣಿ ಹೇಳಿದರು. ''ನಾನು ಈಗ ಯಾವುದೇ ರಾಜಕೀಯ ಪಕ್ಷದಲ್ಲಿ ಇಲ್ಲ, ನಾನು ಒಮ್ಮೆ ಬಿಜೆಪಿಯೊಂದಿಗೆ ಇದ್ದೆ, ನನ್ನ ಪದಗಳನ್ನು ರಾಜಕೀಯವಾಗಿ ಬಳಸಬಾರದು ಅಥವಾ ದುರುಪಯೋಗಪಡಿಸಿಕೊಳ್ಳಬಾರದು. ಅಂಬೇಡ್ಕರ್ ಅವರೇ ಇದು ನನ್ನ ಸಂವಿಧಾನವಲ್ಲ ಎಂದು ಹೇಳಿದ್ದರು ಎಂದು ಕುಲಕರ್ಣಿ ಪ್ರತಿಕ್ರಿಯಿಸಿದ್ದಾರೆ.

ಕುಲಕರ್ಣಿ ಅವರ ಅಭಿಪ್ರಾಯವನ್ನು ಅನುಮೋದಿಸಿದ್ದಕ್ಕಾಗಿ ಸ್ಯಾಮ್ ಪಿತ್ರೋಡಾ ಅವರನ್ನು ತರಾಟೆಗೆ ತೆಗೆದುಕೊಂಡ ಬಿಜೆಪಿ ರಾಷ್ಟ್ರೀಯ ವಕ್ತಾರ ಶೆಹಜಾದ್ ಪೂನಾವಾಲಾ, ಕಾಂಗ್ರೆಸ್ ಅಂಬೇಡ್ಕರ್-ವಿರೋಧಿ, ದಲಿತ ವಿರೋಧಿ ಡಿಎನ್‌ಎ ಹೊಂದಿದೆ ಎಂದು ಹೇಳಿದರು. ''ರಾಹುಲ್ ಗಾಂಧಿಯವರ ಅಂಕಲ್ ಸ್ಯಾಮ್ (ಸ್ಯಾಮ್ ಪಿತ್ರೋಡಾ) ಅವರು ಸಂವಿಧಾನಕ್ಕೆ ಅಂಬೇಡ್ಕರ್ ಅವರ ಕೊಡುಗೆಯನ್ನು ಪ್ರಶ್ನಿಸಿ ಟ್ವೀಟ್ ಮಾಡಿದ್ದಾರೆ. ಈ ಮಾತುಗಳು ಸ್ಯಾಮ್ ಪಿತ್ರೋಡಾ ಅವರದ್ದಾಗಿರಬಹುದು, ಆದರೆ ಅದರ ಹಿಂದಿನ ಭಾವನೆಯನ್ನು ಸೋನಿಯಾ ಮತ್ತು ರಾಹುಲ್ ಗಾಂಧಿ ನೀಡಿದ್ದಾರೆ. ಕಾಂಗ್ರೆಸ್ ಅಂಬೇಡ್ಕರ್ ಮತ್ತು ಎಸ್‌ಸಿ ವಿರೋಧಿ. ನೆಹರೂ ಅವರ ಆಡಳಿತಾವಧಿಯಲ್ಲಿ ಅಂಬೇಡ್ಕರ್ ಅವರನ್ನು ಎರಡು ಬಾರಿ ಚುನಾವಣೆಯಲ್ಲಿ ಸೋಲುವಂತೆ ಮಾಡಿದ್ದು ಇದೇ ಕಾಂಗ್ರೆಸ್. ಇದೇ ಕಾಂಗ್ರೆಸ್ ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಲು ವಿಳಂಬ ಮಾಡಿತು ಎಂದು ಪೂನಾವಾಲಾ ಹೇಳಿದರು.

ಈ ಮಧ್ಯೆ ಸ್ಯಾಮ್ ಪಿತ್ರೋಡಾ ತಮ್ಮ ಪೋಸ್ಟ್ ಅನ್ನು ಡಿಲೀಟ್ ಮಾಡಿದ್ದಾರೆ.

## ಹೇರಲಾಗುತ್ತಿದೆ

ನಮ್ಮ ತಲೆಯಲ್ಲಿ ಇಂದು ಜೈ ಶ್ರೀರಾಮ್ ಘೋಷಣೆ ಹೇರುತ್ತಿದ್ದಾರೆ. ಹರ ಹರ ಮಹದೇವ ಘೋಷಣೆಗೆ ಇತಿಹಾಸವಿದೆ. ಜೈ ಶ್ರೀರಾಮ್ ಘೋಷಣೆಗೆ ಇತಿಹಾಸವಿದೆಯೇ ಹೇಳಿ ನೋಡೋಣ ಎಂದರು.

ಅಯೋಧ್ಯೆ ಶ್ರೀರಾಮ ಮಂದಿರ ಉದ್ಘಾಟನೆ ನಂತರ ಜೈ ಶ್ರೀರಾಮ್ ಘೋಷಣೆಗಳನ್ನು ಹಿಂದೂ ಕಾರ್ಯಕರ್ತರು, ಬಿಜೆಪಿಗರಲ್ಲಿ ಮಾತ್ರವಲ್ಲದೆ, ಕಾಂಗ್ರೆಸ್ ನಲ್ಲೂ ಮೊಳಗಲು ಆರಂಭವಾಗಿದೆ. ಜೈ ಶ್ರೀರಾಮ್ ನಾವು ಕೂಡ ಹೇಳುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಅವರು ಇತ್ತೀಚೆಗೆ ಘೋಷಣೆಗಳನ್ನು ಕೂಗಿಸಿದ್ದರು.

ಜೈ ಶ್ರೀರಾಮ್ ಅಂತ ನಾವೂ ಹೇಳೋಲ್ವಾ ಜೈ ಶ್ರೀರಾಮ್ ಎಂಬುದು ಒಬ್ಬರ ಸ್ಲೋಗನ್ ಅಲ್ಲ, ನಾನೂ ಹೇಳುತ್ತೇನೆ. ಕೆಲವರು ಜೈ ಶ್ರೀರಾಮ್ ಸ್ಲೋಗನ್ ತಮ್ಮ ಸ್ವತ್ತು ಅಂದುಕೊಂಡಿದ್ದಾರೆ. ಎಲ್ಲರೂ ಜೈ ಶ್ರೀರಾಮ್ ಹೇಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನರಿಗೆ ಹೇಳುತ್ತಾ ತಾವು ಸಹ ಜೈ ಶ್ರೀರಾಮ್ ಎಂದು ಕೂಗಿದ್ದರು. ಬೆಂಗಳೂರು ಪೂರ್ವ ತಾಲೂಕಿನ ಬಿದರಹಳ್ಳಿ ಹೋಬಳಿಯ, ಹಿರಂಡಹಳ್ಳಿ ಶ್ರೀರಾಮ ಟೆಂಪಲ್ ಟ್ರಸ್ಟ್ ನಿರ್ಮಿಸಿದ್ದ ರಾಮ ಸೀತ ಲಕ್ಷ್ಮಣ ದೇವಾಲಯ ಹಾಗೂ 33 ಅಡಿ ಎತ್ತರದ ಏಕಶಿಲಾ ಆಂಜನೇಯ ಸ್ವಾಮಿ ವಿಗ್ರಹದ ಶಿಲಾ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಘೋಷಣೆ ಕೂಗಿದ್ದರು.

## ಹಿಂಡು

ಜನರು ಭಯಭೀತರಾಗಿದ್ದಾರೆ. ಇನ್ನು ಇದರ ಜೊತೆಯೇ ಹಂತಕ ಭೀಮ ಆನೆ ಸೇರಿಕೊಂಡಿದೆ. ಈಗಾಗಲೇ ಬೇಲೂರಿನಲ್ಲಿ ದಾಂಧಲೆ ಎಬ್ಬಿಸಿದ್ದ ಬೀಟಮ್ಮ ಅಂಡ್ ಗ್ಯಾಂಗ್. ಬೇಲೂರು ಮಾರ್ಗವಾಗಿಯೇ ಏಖ ಪೇಟೆ ಗ್ರಾಮಕ್ಕೆ ಆಗಮಿಸಿದೆ.

ಸಂಜೆ ಮುಗಿಲು
ಭಾನುವಾರ
28.1.2024


# ಮೀನುಗಳ ಮಾರಣಹೋಮ

**ಚಾಮರಾಜನಗರ:** ಜಮೀನಿನಲ್ಲಿದ್ದ ಮೀನು ಸಾಕಾಣೆ ಘಟಕಕ್ಕೆ ಕಿಡಿಗೇಡಿಗಳು ವಿಷವಿತ್ತ ಪರಿಣಾಮ ಸಾವಿರಾರು ಮೀನುಗಳು ಸಾವನ್ನಪ್ಪಿರುವ ಘಟನೆ ಚಾಮರಾಜನಗರ ರಾಮಸಮುದ್ರದ ಬಸವನಪುರ ಸಮೀಪ ನಡೆದಿದೆ. ಚಾಮರಾಜನಗರ ಪಟ್ಟಣದ ರಾಮಸಮುದ್ರ ಸಮೀಪದ ಬಸವನಪುರದ ರೈತ ಮಹೇಶ್ ಎಂಬವರು ಜಮೀನಿನಲ್ಲಿ ಮೀನು ಸಾಕಣೆ ಮಾಡಿದ್ದರು , ಲಕ್ಷಾಂತರ ರೂ ಹಣ ವ್ಯಯಿಸಿ ಲಾಭದ ನಿರೀಕ್ಷೆಯಲ್ಲಿದ್ದ ರೈತನಿಗೆ ಕಿಡಿಗೇಡಿಗಳು ಮಾಡಿದ ಕೃತ್ಯ ಬಾರಿ ಹೊಡೆತ ನೀಡಿದೆ. ರಾಮಸಮುದ್ರ ಬಸವನಪುರ ರಸ್ತೆಯ ಮಹದೇಶ್ವರ ದೇವಸ್ಥಾನದ ಸಮೀಪದ ಮಹೇಶ್ ಬಾಬು ಎಂಬವರ ಜಮೀನಿಗೆ ಪ್ರವೇಶಿಸಿದ ಕಿಡಿಗೇಡಿಗಳು ನೀರಿಗೆ ವಿಷ ಬೆರಿಸಿದ ಪರಿಣಾಮ ಸಾವಿರಾರು ಮೀನುಗಳು ಅಸುನೀಗಿವೆ , ನನಗೆ ಯಾರು ದ್ವೇಷಿಗಳಿಲ್ಲ ಆದ್ರೂ ಸಹ ಈ ರೀತಿ ಮಾಡಿರುವುದು ತುಂಬಾ ನೋವುಂಟು ಮಾಡಿದೆ ಎಂದು ರೈತ ಅಳಲು ತೋಡಿಕೊಂಡಿದ್ದಾರೆ.



# ಸರಿಯಾಗಿ ತಂತ್ರಜ್ಞಾನವನ್ನು ಬಳಸಿಕೊಳ್ಳಿ

**ಮೈಸೂರು:** ತಂತ್ರಜ್ಞಾನವನ್ನು ಸರಿಯಾದ ಮಾರ್ಗದಲ್ಲಿ ಬಳಸಿಕೊಳ್ಳಿ ಮತ್ತು ನಿಮ್ಮನ್ನು ಉತ್ತಮಗೊಳಿಸಿಕೊಳ್ಳಿ ಎಂದು ಎಚ್‌ಸಿಜಿ-ಬಿಎಚ್‌ಐಒ ಆಸ್ಪತ್ರೆಗಳ ಸಂಸ್ಥಾಪಕ ಮತ್ತು ಕಾರ್ಯಾಧ್ಯಕ್ಷ ಹಾಗೂ ಅಂತರಧ್ವನಿ ಸಂಸ್ಥಾಪಕ ಡಾ.ಬಿ.ಎಸ್.ಅಜಯಕುಮಾರ್ ಹೇಳಿದರು.

ನಗರದ ವಿಜ್ಞಾನ ಭವನದಲ್ಲಿ ಅಂತರಧ್ವನಿ, ಸ್ವತಂತ್ರ ಚಿಂತಕರ ಚಾವಡಿ ಆಯೋಜಿಸಿದ್ದ ದಿನವಿಡೀ ನಾಯಕತ್ವ ಸಮಾವೇಶಕ್ಕೆ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ?ಬದುಕಿನಲ್ಲಿ ಸಾಧನೆ ಮಾಡಲು ಸಂಪೂರ್ಣ ಪರಿಶ್ರಮ ಮತ್ತು ದೃಢಸಂಕಲ್ಪ ಬೇಕು. ಇವೆರಡು ನಿಮ್ಮನ್ನು ನಾಯಕರಾಗಿ ರೂಪಿಸುತ್ತದೆ. ಕನಸುಗಳನ್ನು ಬಿಟ್ಟುಕೊಡಬೇಡಿ, ನಿಮ್ಮೊಳಗಿನ ಪ್ರಜ್ಞೆಗೆ ಸದಾ ಜೀವಂತವಾಗಿಟ್ಟುಕೊಳ್ಳಿ, ಎಂದು ವಿದ್ಯಾರ್ಥಿಗಳಿಗೆ ತಮ್ಮ ಸ್ವತಂತ್ರ ಚಿಂತನೆಯನ್ನು ಕಳೆದುಕೊಳ್ಳದಂತೆ ಕರೆ ನೀಡಿದರು.

ನಿಮ್ಮ ಆತ್ಮಸಾಕ್ಷಿಯನ್ನು ಆಲಿಸಿ ಮತ್ತು ನಿಮ್ಮ ಸ್ವತಂತ್ರ ಚಿಂತನೆಯನ್ನು ಕಳೆದುಕೊಳ್ಳಬೇಡಿ. ಇದರ ಹೊರತಾಗಿ ನಿಮ್ಮ ವೈಫಲ್ಯವನ್ನು ಅನುಭವಿಸಿ, ಅದು ನಿಮ್ಮ ಜೀವನವನ್ನು ಕಲಿಸುತ್ತದೆ ಎಂದು ಡಾ. ಅಜಯ್ ಕುಮಾರ್ ಹೇಳಿದರು.

ಯುವಕರು ಯಾವುದೇ ವ್ಯಕ್ತಿಯ ಕುರುಡು ಅನುಯಾಯಿಗಳಾಗಬಾರದು ಎಂದು ಕರೆ ನೀಡಿದ ಅವರು, ವಿದ್ಯಾರ್ಥಿಗಳು ಸ್ವತಂತ್ರವಾಗಿ ಆಲೋಚನಾ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಕಲಿತ ವಿಷಯಗಳ ಬಗ್ಗೆ ಸಂದೇಶವನ್ನು ರವಾನಿಸುವಂತೆ ತಿಳಿ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮೈಸೂರು ವಿಶ್ವವಿದ್ಯಾನಿಲಯದ ಜೆನೆಟಿಕ್ಸ್ ಮತ್ತು ಜಿನೋಮಿಕ್ಸ್ ವಿಭಾಗದ ಪ್ರಾಧ್ಯಾಪಕಿ ಮತ್ತು ಮುಖ್ಯಸ್ಥೆ ಸುತ್ತೂರು ಮಾಲಿನಿ ಅವರು, ತಮ್ಮ ಸ್ವಂತ ಹೋರಾಟ ಮತ್ತು ಅಡೆತಡೆಗಳಿಂದ ಎದ್ದುಬಂದ ಕಥೆಯನ್ನು ಉಲ್ಲೇಖಿಸಿದರು. ವಿದ್ಯಾರ್ಥಿಗಳು ಯಾವುದಕ್ಕೂ ಭಯಪಡಬೇಡಿ ಮತ್ತು ಅವರ ಸವಾಲುಗಳಿಗೆ ಹೋರಾಡುವಂತೆ ಅವರು ಕರೆ ನೀಡಿದರು. ವಿದ್ಯಾರ್ಥಿಗಳಿಗೆ ಜ್ಞಾನದ ಹಸಿವು ಇರಬೇಕು. ಜೊತೆಗೆ ಜೀವನದಲ್ಲಿ ಯಶಸ್ಸನ್ನು ಸಾಧಿಸುವ ಗುರಿಯನ್ನು ಹೊಂದಿರಬೇಕು ಎಂದು ಅವರು ಕರೆ ನೀಡಿದರು.




ಗ್ರಾಮೀಣ ನಾಯಕರ ಅಭಿವೃದ್ಧಿಗೆ ಶ್ರಮಿಸುತ್ತಿರುವ ಸ್ವತಂತ್ರ ಚಿಂತಕರ ಚಾವಡಿ ಅಂತರಧ್ವನಿಯಿಂದ ಮೈಸೂರಿನಲ್ಲಿ ನಡೆಯುತ್ತಿರುವ ಎರಡನೇ ನಾಯಕತ್ವ ಸಮಾವೇಶ ಇದಾಗಿದೆ. ಖಊಅಗಂ ಸಿಇಒ ಎನ್ ಮಧು ಗುಂಡ್ಲುಪೇಟೆ ಮತ್ತು ಸುತ್ತಮುತ್ತಲಿನ 100 ಕ್ಕೂ ಹೆಚ್ಚು ಹಳ್ಳಿಗಳಲ್ಲಿ ಖಊಅಗಂ ಮಾಡಿರುವ ಕೆಲಸವನ್ನು ಪ್ರದರ್ಶಿಸಿದರು. ಸೀತಾಲಕ್ಷ್ಮಿ ಮತ್ತು ಅಂತರಧ್ವನಿಯಿಂದ ರಾಹುಲ್ ಉಪಸ್ಥಿತರಿದ್ದರು.

# ರಾಜಕೀಯ ಜೀವನದ ಬಗ್ಗೆ ಪುಸ್ತಕ: ಶ್ರೀನಿವಾಸ ಪ್ರಸಾದ್

**ಮೈಸೂರು:** ನನ್ನ ರಾಜಕೀಯ ಜೀವನದ ಬಗ್ಗೆ ಪುಸ್ತಕ ಬರೆದಿದ್ದು, ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಚಾಮರಾಜನಗರ ಸಂಸದ ವಿ.ಶ್ರೀನಿವಾಸಪ್ರಸಾದ್ ತಿಳಿಸಿದರು. ಇಲ್ಲಿ ಪತ್ರಕರ್ತರೊಂದಿಗೆ ಶುಕ್ರವಾರ ಮಾತನಾಡಿದ ಅವರು, ನನ್ನದು ಹೋರಾಟದ ರಾಜಕಾರಣ. ಈ ಕ್ಷೇತ್ರಕ್ಕೆ ಬಂದು ಇದೇ ಮಾರ್ಚ್ 17ಕ್ಕೆ 50 ವರ್ಷವಾಗುತ್ತದೆ. ಈ ಪಯಣವನ್ನು ಕೃತಿಯಲ್ಲಿ ದಾಖಲಿಸಿದ್ದೇನೆ ಎಂದು ಹೇಳಿದರು. ಅಭಿನಂದನಾ ಗ್ರಂಥವೂ ಬಿಡುಗಡೆ ಆಗಲಿದೆ. ಚುನಾವಣೆ ರಾಜಕೀಯದ ನೆನಪುಗಳನ್ನು ಬರೆದಿದ್ದೇನೆ. ಅನೇಕರ ಲೇಖನಗಳೂ ಇವೆ.



ಪಾರ್ಲಿಮೆಂಟ್‌ನಲ್ಲಿ ನಾನು ಮಾತನಾಡಿರುವ ವಿಚಾರಗಳನ್ನೂ ದಾಖಲಿಸಲಾಗಿದೆ ಎಂದರು. ರಾಜಕಾರಣವೆಂದರೆ ಸುಮ್ಮನೆ ಅಲ್ಲ. ನನಗೂ ಸಾಕಾಗಿದೆ. ವಿಶ್ರಾಂತಿ ಅಗತ್ಯವಿದೆ. ಕೇಂದ್ರ ಮತ್ತು ರಾಜ್ಯದ ಸಚಿವನಾಗಿ ಕೆಲಸ ಮಾಡಿದ್ದೇನೆ. ಎಲ್ಲ ಪಕ್ಷಗಳಿಗೂ ದುಡಿದಿದ್ದೇನೆ. ಚಾಮರಾಜನಗರ ಜಿಲ್ಲೆಗೂ ನನಗೂ ಅವಿನಾಭಾವ ಸಂಬಂಧವಿದೆ. ಜನರು ಬೆಂಬಲಿಸಿದ್ದಾರೆ. ನಾನು ಯಾರನ್ನು ಬೆಂಬಲಿಸಿದೆನೋ ಅವರೆಲ್ಲರೂ ಚುನಾವಣೆಯಲ್ಲಿ ಗೆದ್ದಿದ್ದಾರೆ. ಧ್ರುವನಾರಾಯಣ ಅವರನ್ನು ಅಭ್ಯರ್ಥಿ ಮಾಡಿ ಗೆಲ್ಲಿಸಿದ್ದೆ ಎಂದು ತಿಳಿಸಿದರು. ಸಂಸದರಿಗೆ ಪ್ರತಿ ವರ್ಷ 5ಕೋಟಿ ಅನುದಾನ ನೀಡಲಾಗುತ್ತದೆ. ಕೋವಿಡ್ ಕಾರಣದಿಂದ ಎರಡು ವರ್ಷ ಅನುದಾನ ಬರಲಿಲ್ಲ. ನನ್ನ ಅವಧಿಯಲ್ಲಿ 17.50 ಕೋಟಿ ಬಿಡುಗಡೆಯಾಗಿದೆ. ಅದನ್ನು 137 ಕಾಮಗಾರಿಗಳಿಗೆ ನೀಡಿದ್ದೇನೆ, ಪ್ರಗತಿ ಬಗ್ಗೆ ಅಧಿಕಾರಿಗಳ ಸಭೆ ನಡೆಸಿ ಪರಿಶೀಲನೆ ನಡೆಸಿದ್ದೇನೆ ಎಂದರು. ಜಗದೀಶ ಶೆಟ್ಟರ್ ಮತ್ತೆ ಬಿಜೆಪಿ ಸೇರಿದ್ದು ಅವರ ವೈಯಕ್ತಿಕ ನಿರ್ಧಾರ. ಇದು ಪಕ್ಷಾಂತರ ಅಲ್ಲ. ಮಾಜಿ ಮುಖ್ಯಮಂತ್ರಿಯಾದ ಅವರು ಎಲ್ಲವನ್ನೂ ಯೋಚಿಸಬೇಕಿತ್ತು. ಪಕ್ಷದಲ್ಲಿ ಎಲ್ಲವನ್ನೂ ಅನುಭವಿಸಿ ಟಿಕೆಟ್ ಕೊಡಲಿಲ್ಲ ಎಂಬ ಕಾರಣದಿಂದ ಕಾಂಗ್ರೆಸ್ ಸೇರಿದ್ದರು. ಆ ಪಕ್ಷದವರು ಸ್ವಾಗತಿಸಿ ವಿಧಾನಸಭಾ ಚುನಾವಣೆಯಲ್ಲಿ ಟಿಕೆಟ್ ನೀಡಿದ್ದರು. ಸೋತರೂ ವಿಧಾನಪರಿಷತ್ ಸದಸ್ಯರನ್ನಾಗಿ ಮಾಡಿದ್ದರು. ಯಾರೂ ತೊಂದರೆ ಕೊಡಲಿಲ್ಲ, ರಾಷ್ಟ್ರ ನಿಷ್ಠೆಯಿಂದ ಮರಳಿದೆ ಎಂದು ಅವರೇ ಹೇಳಿದ್ದಾರೆ. ನಾನೇನೂ ಹೇಳಲಾಗುವುದಿಲ್ಲ ಎಂದು ಪ್ರತಿಕ್ರಿಯಿಸಿದರು.

# ದೇಶದ ಸಾರ್ವಭೌಮತೆ ರಕ್ಷಿಸಲು ಯುವ ಜನಾಂಗ ಪಣತೊಡಿ

**ಬೆಂಗಳೂರು:** ಭಾರತ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾಗಿದ್ದು, ಗಟ್ಟಿಯಾದ ಸಂವಿಧಾನ ಹೊಂದಿದೆ. ದೇಶದ ಸಾರ್ವಭೌಮತೆಯನ್ನು ರಕ್ಷಿಸಲು ಯುವ ಜನಾಂಗ ನೇತೃತ್ವವಹಿಸಬೇಕು ಎಂದು ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗಡೆ ಕರೆ ನೀಡಿದ್ದಾರೆ.

ಮೈಸೂರು ರಸ್ತೆಯ ಆರ್.ವಿ. ಕಾಲೇಜು ಸಮೀಪವಿರುವ ಜ್ಞಾನಬೋಧಿನಿ ಶಿಕ್ಷಣ ಸಂಸ್ಥೆಯಲ್ಲಿ ಈ ಬಾರಿ ಗಣರಾಜ್ಯೋತ್ಸವವನ್ನು ವಿಶೇಷವಾಗಿ ಆಚರಿಸಿದ್ದು, ಒಂದು ಸಾವಿರಕ್ಕೂ ಅಧಿಕ ಹಳೆಯ ವಿದ್ಯಾರ್ಥಿಗಳ ನೇತೃತ್ವದಲ್ಲಿ 75 ಮೀಟರ್ ಉದ್ದದ ತಿರಂಗಾ ಜಾಥಗೆ ಚಾಲನೆ ನೀಡಿ, ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ಉಳಿದು ಬೆಳೆಯಬೇಕಾದರೆ ಭ್ರಷ್ಟಾಚಾರ ಮುಕ್ತ ವಾತಾವರಣ ನಿರ್ಮಾಣ ಮಾಡಬೇಕು. ಯುವ ಜನಾಂಗ ನೊಂದವರ ಸಮಸ್ಯೆ ನಿವಾರಣೆಗೆ ಒತ್ತು ನೀಡಬೇಕು. ಸಂವಿಧಾನದ ಮೌಲ್ಯಗಳನ್ನು ಎತ್ತಿ ಹಿಡಿಯಬೇಕು ಎಂದು ಹೇಳಿದರು.

ಸಂವಿಧಾನದ ಮೌಲ್ಯಗಳ ಬಗ್ಗೆ ಹಳೆಯ ವಿದ್ಯಾರ್ಥಿಗಳು ಅರಿವು ಮೂಡಿಸಿದರು. ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಗಣರಾಜ್ಯೋತ್ಸವಕ್ಕೆ ಮೆರಗು ತಂದಿತು. ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ಗಮನ ಸೆಳೆಯಿತು. ದಿ ಅರ್ಸುಲೈನ್ ಫ್ರಾನ್ಸಿಸ್ಕಾನ್ ವಿದ್ಯಾಸಂಸ್ಥೆಯ ಮೈಸೂರು ಪ್ರಾಂತ್ಯದ ಪ್ರಾಂತ್ಯಾಧಿಕಾರಿ ಲಲ್ಲಿ ಫೆರ್ನಾಂಡೀಸ್, ಪ್ರಾಂಶುಪಾಲರಾದ ಜೆಸಿಂತ ಪಿರೇರಾ, ಪೋಷಕ ಶಿಕ್ಷಕ ಸಂಘದ ಉಪಾಧ್ಯಕ್ಷರಾದ ರೂಪ ವಿನಯ್ ಮತ್ತಿತರರು ಉಪಸ್ಥಿತರಿದ್ದರು.



## ಮಾನಸಗಂಗೋತ್ರಿಯ ಆವರಣದಲ್ಲಿ ಚಿತ್ರಸಂತೆ

# ಮೈಸೂರು ಉತ್ಸವಕ್ಕೆ ಚಿತ್ರಸಂತೆ ಮೆರುಗು

**ಮೈಸೂರು:** ಮಲೆನಾಡಿನ ಹಸೆ ಚಿತ್ತಾರಗಳು, ಅಡಿಕೆ ಮರದ ದಬ್ಬೆಯಲ್ಲಿ ಮೂಡಿದ ಅಮೆರಿಕನ್ ಟಾರ್ಟೂನ್ಸ್, ಮಹಾರಾಷ್ಟ್ರದ ವಾರ್ಲಿ ಪೇಂಟಿಂಗ್ಸ್, ಕಲಬುರಗಿಯ ಎಂಎಂಕೆ ವಿಶುವಲ್ ಆರ್ಟ್ಸ್ ಕಾಲೇಜು ಹುಡುಗರ ಪೆನ್ಸಿಲ್ ಸ್ಕೆಚ್, ಒಂದೇ ಎರಡೇ.. ಹೀಗೆಯೇ ಸಾಗುತ್ತದೆ ಚಿತ್ರದಂಗಡಿ ಸಾಲು...

ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯಿಂದ ಮಾನಸಗಂಗೋತ್ರಿಯ ಆವರಣದಲ್ಲಿ ಶುಕ್ರವಾರ ಆರಂಭವಾದ ಮೂರು ದಿನಗಳ ಮೈಸೂರು ಉತ್ಸವದ ಅಂಗವಾಗಿ ನಡೆದ ಚಿತ್ರ ಸಂತೆಯಲ್ಲಿ ಇವೆಲ್ಲ ಕಂಡುಬಂದವು. ಸಾಂಪ್ರದಾಯಿಕ ಮತ್ತು ಆಧುನಿಕ ಚಿತ್ರಕಲೆಗಳ ಮಿಶ್ರಣವನ್ನೆ ಜನರೆದುರು ಸಂತೆ ತೆರೆದಿಟ್ಟಿತು. ಅಕ್ರಿಲಿಕ್, ಆಯಿಲ್ ಪೇಂಟ್, ವಾಟರ್ ಪೇಂಟ್‌ನಲ್ಲಿ ಮೂಡಿಬಂಡ ಸ್ಟಿಲ್ ಲೈಫ್ ಚಿತ್ರಗಳು, ಅಮೂರ್ತ ಕಲೆಗಳು, ದೇವ? ದೇವತೆಯರು ಹಾಗೂ ಪ್ರಕೃತಿಯ ಅಪರಿಮಿತ ಸೌಂದರ್ಯದ ಚಿತ್ರಗಳು ನೋಡುಗರನ್ನು ಗಮನಸೆಳೆದವು. ಕೆಲವು ಕಲಾವಿದರು ಸ್ಥಳದಲ್ಲೇ ಚಿತ್ರ ಬರೆದುಕೊಡುವ ಆಹ್ವಾನವನ್ನು ನೀಡುತ್ತಿದ್ದರು.

ಒಟ್ಟು 114 ಮಳಿಗೆಗಳಲ್ಲಿ ಮೈಸೂರಿನ ಸಾಂಪ್ರದಾಯಿಕ ಚಿತ್ರಗಳು ಸೇರಿದಂತೆ ದೇಶದ ವಿವಿಧ ಭಾಗದ ಚಿತ್ರಕಲೆಗಳು ಪ್ರದರ್ಶನಗೊಂಡವು.

ಕರಕುಶಲ ವಸ್ತುಗಳಿಗೂ ವೇದಿಕೆ: ಆಕರ್ಷಕ ಚಿತ್ರಗಳನ್ನು ಬರೆದಿದ್ದ ಕೈಚೀಲಗಳು, ಶಾಲುಗಳು ಮಾರಾಟಕ್ಕಿದ್ದವು. ಮರದ ಅಲಂಕಾರಿಕ ವಸ್ತುಗಳು, ಮಣ್ಣಿನ ಕುಂಬಾರಿಕೆಯ ಉತ್ಪನ್ನಗಳು, ಕಬ್ಬಿಣದ ಪುಟಾಣಿ ಬೈಕ್‌ಗಳು ಗಮನಸೆಳೆದವು.

ಆಹಾರ ಮೇಳದ ಘಮ: ಚಿಕ್ಕಪೇಟೆ ದೊನ್ನೆ ಬಿರಿಯಾನಿ, ಮೇಲುಕೋಟೆ ಪುಳಿಯೋಗರೆ ಪರಿಮಳ ಗಂಗೋತ್ರಿಯ ಕ್ಲಾಕ್ ಟವರ್ ಬಳಿಯ ಮೈದಾನವನ್ನು ವ್ಯಾಪಿಸಿತ್ತು. ವಿವಿಧ ಹಣ್ಣಿನ ಕುಲ್ಫಿಗಳು, ಶೂನ್ಯ ತ್ಯಾಜ್ಯದ ಹಣ್ಣಿನ ರಸಗಳು, ಮಿಲ್ಲೆಟ್ಸ್ ಪಾಯಸ, ಪೇಯಗಳಿಗೆ ಜನರು ಮುಗಿಬಿದ್ದರು. ಬೆಳಿಗ್ಗೆ ಆರಂಭವಾಗಿದ್ದ ಕೆಲವೇ ಮಳಿಗೆಯಲ್ಲಿಯೇ ಜನದಟ್ಟಣೆ ಇತ್ತು. ಬಯಲು ರಂಗಮಂದಿರಕ್ಕೆ ತೆರಳುವ ರಸ್ತೆಯಲ್ಲಿ ನಿರ್ಮಿಸಿರುವ ಫ್ಲೀ ಮಾರುಕಟ್ಟೆಯ ವಿವಿಧ ಬಗೆಯ ವಸ್ತುಗಳಿಂದ ಜನರನ್ನು ಆಕರ್ಷಿಸಿತು. ಕರಕುಶಲ ಆಭರಣಗಳು, ಬ್ಯಾಗ್‌ಗಳು, ವಿನ್ಯಾಸಕಾರು ಸಿದ್ಧಪಡಿಸಿದ ಉಡುಪುಗಳು ಮಹಿಳೆಯರ ಗಮನಸೆಳೆದವು. 30 ಮಳಿಗೆಗಳಲ್ಲಿ ಆಹಾರ ಉತ್ಪನ್ನ, ಪೂಜಾ ಸಾಮಗ್ರಿ, ಲಿಡ್ಕರ್ ಉತ್ಪನ್ನ, ಚಿತ್ತಾರವುಳ್ಳ ಮರದ ಪೀಠೋಪಕರಣ, ಗಿಡ ಮೂಲಿಕೆ ವಸ್ತು ಸೇರಿದಂತೆ ಅನೇಕ ಉತ್ಪನ್ನಗಳು ಪ್ರದರ್ಶನ ಮತ್ತು ಮಾರಾಟಗೊಂಡವು. ದಸರಾದಲ್ಲಿದ್ದಂತೆಯೇ ಜನರಿಗೆ ಮಾಹಿತಿ ನೀಡಲು ರೇಡಿಯೊ ರೂಂ ಕೂಡ ಮಾಡಲಾಗಿದೆ.



### ಭಾವ ಗೀತೋತ್ಸವ

**ಕ್ಲಾಕ್ ಟವರ್ ಬಳಿಯ ವೇದಿಕೆಯಲ್ಲಿ ಚಲನಚಿತ್ರ ಸಂಗೀತ ನಿರ್ದೇಶಕ ನಾಗೇಶ್ ಕಂದೇಗಾಲ ಸಾರಥ್ಯದಲ್ಲಿ ಸಂಜೆ ಭಾವ ಗೀತೋತ್ಸವ ಕಾರ್ಯಕ್ರಮ ನಡೆಯಿತು. ನಿನ್ನ ಪ್ರೇಮದ ಪರಿಯ, ಇರಬೇಕು ಇರುವಂತೆ, ಕಾಣದ ಕಡಲಿಗೆ ಹಂಬಲಿಸಿದೆ ಮನ... ಮೊದಲಾದ ಹಾಡುಗಳು ಕೇಳುಗರನ್ನು ಭಾವಲೋಕದಲ್ಲಿ ತೇಲಿಸಿದವು. ಹೂವು ಹಣ್ಣು ಸಿನಿಮಾದ ನಿಂಗಿ ನಿಂಗಿ ಗೀತೆ ಪ್ರೇಕ್ಷಕರನ್ನು ರಂಜಿಸಿತು. ನಿತಿನ್ ರಾಜರಾಮ್‌ಶಾಸ್ತ್ರಿ ಮತ್ತು ಚಿಂತನ್ ವಿಕಾಸ್ ಅವರು ಹಾಡಿದ ?ಕುರಿಗಳು ಸಾರ್ ಕುರಿಗಳು ಗೀತೆಯು ಪ್ರೇಕ್ಷಕರಿಂದ ಜೋರು ಚಪ್ಪಾಳೆ ಗಿಟ್ಟಿಸಿತು. ಶ್ರುತಿ ತುಮಕೂರು ಅವರ ಅಮ್ಮ ನಾನು ದೇವರಾಣೆ ಬೆಣ್ಣೆ ಕದ್ದಿಲಮ್ಮ ಗೀತೆಯು ಭಾವಪೂರ್ಣವಾಗಿತ್ತು. ಋತ್ವಿಕ್ ಸಿ.ರಾಜ್. ಪ್ರಭು ಸೊನ್ನ ಮೊದಲಾದವರು ಹಾಡಿದರು.**

# ಜೀವನದಲ್ಲಿ ನೈತಿಕತೆ ಪ್ರಾಪ್ತಿಗೆ ಯೋಗ ಸಹಕಾರಿ

**ಮೈಸೂರು:** ಮೈಸೂರು ಅಕಾಡಮಿಯು ಆಫ್ ಯೋಗ,38 ನೇವಾರ್ಷಿಕೋತ್ಸವ ಸಮಾರಂಭ ಶನಿವಾರ ಸಂಜೆ ಹೊಸಕೇರಿಯಲ್ಲಿರುವ ಯೋಗ ಕೇಂದ್ರದಲ್ಲಿನಡೆಯಿತು. ವಾರ್ಷಿಕೋತ್ಸವ ಸಮಾರಂಭದಲ್ಲಿ ಯೋಗ ಪಟುಗಳು ಹಾಗೂ ಯೋಗ ಶಿಕ್ಷಕರು ಭಾಗಿಯಾಗಿದ್ದರು. ಕಾರ್ಯಕ್ರಮವನ್ನು ಆಯುರ್ವೇದ ತಜ್ಞ ಡಾ. ಎ ಎಸ್ ಚಂದ್ರಶೇಖರ್ಡಾ. ಚಂದ್ರ ಶೇಖರ್ ಉದ್ಘಾಟನೆ ಮಾಡಿದರು. ಬಳಿಕ ಮಾತನಾಡಿದ ಅವರು ಜೀವನದಲ್ಲಿ ನಾವು ನೈತಿಕತೆ ಗಳಿಸಿಕೊಳ್ಳಬೇಕಾದರೆ ಯೋಗ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಯೋಗ ಅಭಿಪ್ರಾಯಪಟ್ಟರು.ಪರೋಪ ಕಾರಕ್ಕಾಗಿ ಈ ಶರೀರ ಎಂಬಂತೆ ನಮ್ಮನ್ನು ಸಮಾಜಕ್ಕಾಗಿ ಅರ್ಪಿಸಿಕೊಳ್ಳಬೇಕು, ಪ್ರಕೃತಿಯನ್ನು ನಾವು ಅನುಸರಿಸಿದರೆ ಮಾನವತಾವಾದವನ್ನು ಪರಿಪಾಲಿಸಿದಂತಾಗುತ್ತದೆ ಎಂದರು. ಸಂಸ್ಥೆಯ ವಿದೇಶಿ ವಿದ್ಯಾರ್ಥಿಗಳಾದ ಶ್ರೀ ಡೇವಿಡ್, ಆರ್ಥರ್ ಹಾಗೂ ಸಮಾಜ ಸೇವಕ ರಘು ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಮೈಸೂರು ಯೋಗ ಒಕ್ಕೂಟದ ಅಧ್ಯಕ್ಷ ಟಿ. ಜಲೇಂದ್ರಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಮೈಸೂರು ಯೋಗ ಒಕ್ಕೂಟದ ಪದಾಧಿಕಾರಿಗಳಾದ ಎಂ ಎಸ್ ಶಿವಪ್ರಕಾಶ್, ಬಿ .ಪಿ. ಮೂರ್ತಿ, ಕೆ.ಜಿ. ದೇವರಾಜ್, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್ ಅನಂತ, ಉದ್ಯಮಿ ದಶರತ್ , ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎಂಎಸ್ ರಮೇಶ್ ಕುಮಾರ್ ಉಪಸ್ಥಿತರಿದ್ದರು.



# ಗೂಡ್ಸ್ ಆಟೋ ಬಸ್ ಡಿಕ್ಕಿ: ಓರ್ವ ಸ್ಥಳದಲ್ಲೇ ಸಾವು

**ಚಾಮರಾಜನಗರ:** ಚಿಕ್ಕಲ್ಲೂರು ಜಾತ್ರೆಗೆ ಭಕ್ತರನ್ನು ಕೊಂಡೊಯ್ಯುತ್ತಿದ್ದ ಗೂಡ್ಸ್ ಆಟೋ ಕೆ ಎಸ್ ಆರ್ ಟಿ.ಸಿ ಬಸ್ ಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಒಬ್ಬ ಸ್ಥಳದಲ್ಲೇ ಮೃತಪಟ್ಟು ಇಬ್ಬರು ತೀವ್ರ ತರ ಗಾಯಗಳಾಗಿ ಚಿಂತಾಜನಕ ಸ್ಥಿತಿಯಲ್ಲಿರುವ ಘಟನೆ ಚಾಮರಾಜನಗರ ಜಿಲ್ಲೆಯ ಲಕ್ಕೂರು ಬಳಿ ಶನಿವಾರ ಮದ್ಯಾಹ್ನ ನಡೆದಿದೆ. ಗುಂಡ್ಲುಪೇಟೆ ತಾಲ್ಲೂಕಿನ ಹಂಗಳ ಗ್ರಾಮದಿಂದ 4 ಗೂಡ್ಸ್ ಆಟೋದಲ್ಲಿ ಚಿಕ್ಕಲ್ಲೂರು ಜಾತ್ರೆಗೆ ಭಕ್ತರು ತೆರಳುವಾಗ ಮೂರನೇ ಆಟೋ ಅತಿಯಾದ ವೇಗದಿಂದಾಗಿ ಓವರ್ ಟೇಕ್ ಮಾಡಲು ಮುನ್ನುಗಿದಾಗ ಚಾಮರಾಜನಗರ ಕಡೆಯಿಂದ ಗುಂಡ್ಲುಪೇಟೆ ಕಡೆಗೆ ಬರುತ್ತಿದ್ದ ಕೆ ಎಸ್ ಆರ್ ಟಿ ಸಿ ಬಸ್ ಗೆ ಡಿಕ್ಕಿ ಹೊಡೆದ ಪರಿಣಾಮ ಸಿದ್ದರಾಜು ಕುಮಾರ ಬಿನ್ ಜವರಯ್ಯ (33) ಸ್ಥಳದಲ್ಲೇ ಸಾವನ್ನಪಿದರು. ಇನ್ನರಿಗೆ ತೀವ್ರತರ ಗಾಯಗಳಾಗಿದ್ದು ಚಾಮರಾಜನಗರ ಸಿಮ್ಸ್ ಆಸ್ಪತ್ರೆ ಗೆ ಸಾಗಿಸಲಾಗಿದೆ.

# ಗೊರಿಲ್ಲಾ ಕ್ವಿಂಬೋಗೆ ಹೊಸ ಆವರಣ




**ಮೈಸೂರು:** ಇಲ್ಲಿನ ಚಾಮರಾಜೇಂದ್ರ ಮೃಗಾಲಯದಲ್ಲಿ ಹೊಸದಾಗಿ ನಿರ್ಮಿಸಿರುವ ಕುಟುಂಬ ಗುಂಪಿನ ಗೊರಿಲ್ಲಾ ಪ್ರಾಣಿ ಆವರಣವನ್ನು ಉದ್ಘಾಟಿಸಲಾಯಿತು.

ಬೆಂಗಳೂರಿನ ಇನ್ಫೋಸಿಸ್ ಫೌಂಡೇಶನ್‌ವರು ಸಿಎಸ್‌ಆರ್ ನಿಧಿಯಡಿ ನೀಡಿದ ಆರ್ಥಿಕ ನೆರವಿನಿಂದ ಈ ಆವರಣ ನಿರ್ಮಿಸಲಾಗಿದೆ. ಒಟ್ಟು ವಿಸ್ತೀರ್ಣ 37ಸಾವಿರ ಚದರ ಅಡಿಯಾಗಿದೆ. ಇದಕ್ಕಾಗಿ ಒಟ್ಟು ? 5 ಕೋಟಿ ವೆಚ್ಚವಾಗಿದೆ. ಫೌಂಡೇಶನ್‌ನ ಶ್ರುತಿ ಖುರಾನ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಈ ಕೊಡುಗೆಯು ಅಳಿವಿನಂಚಿನಲ್ಲಿರುವ ಗೊರಿಲ್ಲಾದಂತಹ ದೊಡ್ಡವಾನರ ಪ್ರಾಣಿಯ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಜನರು ಗೊರಿಲ್ಲಾವನ್ನು ನಮ್ಮ ದೇಶದಲ್ಲಿಯೇ ವೀಕ್ಷಿಸಲು ಇದೊಂದು ಒಳ್ಳೆಯ ಅವಕಾಶವಾಗಲಿದೆ. ಇದನ್ನು ನೋಡಲು ಇತರ ಅಭಿವೃದ್ಧಿ ಹೊಂದಿದ ದೇಶಗಳಿಗೆ ಭೇಟಿ ನೀಡಲು ಸಾಧ್ಯವಾಗದವರಿಗೆ ಇಲ್ಲೇ ಸಾಧ್ಯವಾಗಲಿದೆ ಎಂದರು. ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ.ಮಹೇಶ್ ಕುಮಾರ್ ಮಾತನಾಡಿ, ಸದ್ಯಕ್ಕೆ ಇಡೀ ದೇಶದಲ್ಲಿ ಮೈಸೂರು ಮೃಗಾಲಯದಲ್ಲಿ ಮಾತ್ರವೇ ಗೊರಿಲ್ಲಾಗಳನ್ನು ಹೊಂದಿರುವುದು ಹೆಮ್ಮೆಯ ವಿಷಯವಾಗಿದೆ. ಅದಕ್ಕೆ ಆವರಣ ನಿರ್ಮಿಸಿಕೊಟ್ಟಿದ್ದಕ್ಕಾಗಿ ಇನ್ಫೋಸಿಸ್ ಫೌಂಡೇಶನ್‌ನ ಅಧ್ಯಕ್ಷೆ ಸುಧಾಮೂರ್ತಿ ಅವರಿಗೆ ಅಭಿನಂದನೆ ಸಲ್ಲಬೇಕು ಎಂದು ಹೇಳಿದರು. ಇತ್ತೀಚಿಗೆ ಜರ್ಮನಿ ದೇಶದ ಫ್ರಾಂಕ್‌ಫರ್ಟ್ ಮೃಗಾಲಯದಿಂದ ತರಿಸಲಾದ ಗಂಡು ಗೊರಿಲ್ಲಾವನ್ನು ಈಗ ಸಂದರ್ಶಕರ ವೀಕ್ಷಣೆಗೆ ಸಮರ್ಪಿಸಲಾಗಿದೆ ಎಂದರು. ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎ.ಕೆ. ಸಿಂಗ್ ಹಾಜರಿದ್ದರು.

# ಆಂಗ್ಲ ನಾಮಫಲಕಕ್ಕೆ ಮಸಿ ಬಳಿದು ಆಕ್ರೋಶ

**ಚಾಮರಾಜನಗರ:** ಕರ್ನಾಟಕ ಕಾವಲು ಪಡೆಯವತಿಯಿಂದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದ ರಾಷ್ಟ್ರೀಯ ಹೆದ್ದಾರಿಯ ಮೈಸೂರು ಊಟಿ ರಸ್ತೆಯಲ್ಲಿರುವ ಗುರುಭವನದ ಪಕ್ಕದಲ್ಲಿ ಕನ್ನಡವನ್ನು ಕಡೆಗಣಿಸಿ ಬರೀ ಆಂಗ್ಲ ಭಾಷೆಯಲ್ಲಿ ನಾಮಫಲಕ ಅಳವಡಿಸಿರುವುದನ್ನು ಖಂಡಿಸಿ ಆಂಗ್ಲನಾಮಫಲಕಕ್ಕೆ ಮಸಿ ಬಳಿದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾವಲು ಪಡೆಯ ಗುಂಡ್ಲುಪೇಟೆ ತಾ!!ಅಧ್ಯಕ್ಷರಾದ ಎ.ಅಬ್ದುಲ್ ಮಾಲಿಕ್.ಮಾತನಾಡಿ ಕನ್ನಡ ಕಡೆಗಣಿಸದಿರಿ ಸರ್ಕಾರದ ಆದೇಶ ಪ್ರಕಾರ ಮೊದಲು ಕನ್ನಡಕ್ಕೆ ಆದ್ಯತೆ ಕೊಡಬೇಕು ಎಂದು ಆಕ್ರೋಶ ಹೊರಹಾಕಿದರು.

ಇದೇ ವೇಳೆ ಕಸಬಾ ಹೋಬಳಿ ಘಟಕದ ಅಧ್ಯಕ್ಷರಾದ ಹೆಚ್. ರಾಜು.ಟೌನ್ ಸಂಚಾಲಕರಾದ ಮಿಮಿಕ್ರಿರಾಜು.ಅಬ್ದುಲ್ ಜಬ್ಬಾರ್. ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.




# ವಿವೇಕರ ಚಿಂತನೆ ಅನುಸರಿಸಿ

**ಹುಳಿಯಾರು:** ಸ್ವಾಮಿ ವಿವೇಕಾನಂದರ ಅದ್ಭುತ ಚಿಂತನೆಗಳು ನಿಮ್ಮ ಜೀವನ ಶೈಲಿ ಮತ್ತು ಬದುಕನ್ನೇ ಬದಲಿಸುತ್ತವೆ ಎಂದು ಉಪನ್ಯಾಸಕ ನರೇಂದ್ರಬಾಬು ಹೇಳಿದರು.

ಹುಳಿಯಾರಿನ ಕನಕದಾಸ ವಿದ್ಯಾಸಂಸ್ಥೆಯಲ್ಲಿ ಶನಿವಾರ ಹಿರಿಯ ವಿದ್ಯಾರ್ಥಿಗಳ ಸಂಘದಿಂದ ಏರ್ಪಡಿಸಿದ್ದ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಕಾರ್ಯಕ್ರಮದಲಿ ಭಾಗವಹಿಸಿ ಅವರು ಮಾತನಾಡಿ ಸ್ವಾಮಿ ವಿವೇಕಾನಂದರು ಜನವರಿ 12, 1863 ರಂದು ಕೋಲ್ಕತ್ತಾದಲ್ಲಿ ಜನಿಸಿದರು. ಇತರ ಸನ್ಯಾಸಿಗಳಂತೆ ಇರದ ಇವರು ರಾಷ್ಟ್ರ ನಿರ್ಮಾಣದ ಪ್ರಕ್ರಿಯೆಯಲ್ಲಿ ಯುವ ದನಿಯಾದರು. ರಾಮಕೃಷ್ಣ ಪರಮಹಂಸರ ಶಿಷ್ಯರಾಗಿದ್ದರು. 1893ರಲ್ಲಿ ಶಿಕಾಗೋದಲ್ಲಿ ವಿಶ್ವ ಧರ್ಮ ಸಂಸತ್ತಿನಲ್ಲಿ ನೀಡಿದ ಭಾಷಣ ಇನ್ನೂ ಕೂಡ ಪ್ರಸಿದ್ಧ ಭಾಷಣವಾಗಿ ಉಳಿದಿದೆ ಎಂದರು.

ಸ್ವಾಮಿ ವಿವೇಕಾನಂದರ ವಿಶ್ವಚೇತನದ ಆಶಯ, ಅವರ ತತ್ವ ಆದರ್ಶಗಳು ನಮಗೆ ಮಾದರಿ. ಯುವ ಸಮುದಾಯವನ್ನು ಸಶಕ್ತವಾಗಿಸುವುದು ಮತ್ತು ನಮ್ಮ ಸಂಸ್ಕೃತಿ, ಪರಂಪರೆಯನ್ನು ಅರಿಯುವಂತೆ ಮಾಡುವುದು ಅವರ ಉದಾತ್ತ ಉದ್ದೇಶವಾಗಿತ್ತು. ವಿವೇಕಾನಂದರ ಹೆಸರು ಕೇಳಿದೊಡನೆ ನಮ್ಮೊಳಗೆ ಶಕ್ತಿ, ಆತ್ಮ ವಿಶ್ವಾಸ ತುಂಬುತ್ತದೆ. ತ್ಯಾಗ, ಸೇವೆ, ಆಧ್ಯಾತ್ಮ ದೃಷ್ಟಿ ಅವರ ಜೀವನದ ಮೂಲತತ್ವವಾಗಿತ್ತು. ದೇಶದ ಕೀರ್ತಿಯನ್ನು ವಿಶ್ವದೆತ್ತರಕ್ಕೆ ಏರಿಸಿದ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ ಆದರ್ಶವನ್ನು ನಮ್ಮ ವ್ಯಕ್ತಿತ್ವವನ್ನು ಮೈಗೂಡಿಸಿಕೊಂಡಾಗಲೇ ಇಂತಹ ಕಾರ್ಯಕ್ರಮ ಸಾರ್ಥಕತೆ ಪಡೆಯುತ್ತದೆ ಎಂದರು. ಕನಕ ಬ್ಯಾಂಕ್ ಮಾಜಿ ಅಧ್ಯಕ್ಷ ಎಚ್.ಅಶೋಕ್ ಮಾತನಾಡಿ ಸ್ವಾಮಿ ವಿವೇಕಾನಂದರು ಶಿಕ್ಷಣ ಮತ್ತು ಮಾನವ ಸಬಲೀಕರಣವನ್ನು ಎತ್ತಿ ಹಿಡಿದರು. ನಿಸ್ವಾರ್ಥತೆ ಮತ್ತು ಮಾನವೀಯತೆಯ ಸೇವೆಯ ಮೂಲಕ ಮಾತ್ರ ನಿಜವಾಗಿಯೂ ಧರ್ಮ ಮತ್ತು ದೇವರನ್ನು ಕಂಡು ಕೊಳ್ಳಬಹುದು ಎಂದು ನಂಬಿದ್ದರು. ಅದನ್ನೇ ಜನತೆಗೂ ಮನನ ಮಾಡಿಸುತ್ತಿದ್ದರು. ಇಂದಿನ ಯುವಕರು ಆದರ್ಶಗಳನ್ನು ರೂಢಿಸಿಕೊಳ್ಳುವ ಅವಶ್ಯಕತೆಯಿದೆ. ಭ್ರಮೆಯ ಜಗತ್ತಿನಿಂದ ವಾಸ್ತವ ಪ್ರಜ್ಞೆಗೆ ಮರಳಬೇಕಾಗಿದೆ. ನಮ್ಮ ದೇಶದ ನಾಡಿನ ಮಹಾ ಪುರುಷರ ಜೀವನ ಸಿದ್ಧಾಂತಗಳನ್ನು ಅರ್ಥೈಸಿಕೊಂಡು ಬಾಳಬೇಕಾಗಿದೆ ಎಂದರು.

# ಒಡೆಯರ್ ಕೊಡುಗೆಗಳ ಬಗ್ಗೆ ಹಂಸಲೇಖ ರೂಪಕಕ್ಕೆ ರಾಜಮಾತೆ ಇಂಗಿತ

**ಬೆಂಗಳೂರು:** ಮುಂದಿನ ದಸರಾ ಸಂಭ್ರಮಾಚರಣೆಯ ಮೊದಲೇ, ಮೈಸೂರು ನಗರದ ವಿಶ್ವ ವಿಖ್ಯಾತ ಅರಮನೆ ಆವರಣ ಹೊಸ ಪ್ರಯತ್ನವೊಂದಕ್ಕೆ ಸಾಕ್ಷಿಯಾಗಲಿದೆ. ಜನಪರ ಆಡಳಿತಗಾರ, ಆಧುನಿಕ ಭಾರತದ ಕನಸುಗಾರ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜೀವನ-ಸಾಧನೆ- ಕೊಡುಗೆ ಬಗ್ಗೆ ನಾದ ಬ್ರಹ್ಮ ಶ್ರೀ ಹಂಸಲೇಖ ರಚಿಸಲಿರುವ ರೂಪಕವೊಂದು ಅಲ್ಲಿ ಪ್ರದರ್ಶನಗೊಳ್ಳಲಿದೆ.

ಈ ಘೋಷಣೆಗೆ ಸಾಕ್ಷಿಯಾಗಿದ್ದು, ನಗರದ ಬೆಂಗಳೂರು ಸಿಟಿ ಇನ್ಸಿಟ್ಯೂಟ್ ನಲ್ಲಿ ಶುಕ್ರವಾರ ನಡೆದ ನಾಲ್ವಡಿ ಕೃಷ್ಣರಾಜ ಒಡೆಯರ್ ಸಂಸ್ಮರಣೆ ಹಾಗು ನಾಲ್ವಡಿ ಕುರಿತ ಕಿರು ಚಿತ್ರ ಪ್ರದರ್ಶನ ಕಾರ್ಯಕ್ರಮ. ಬೆಂಗಳೂರು ಸಿಟಿ ಇನಸ್ಟಿಟ್ಯೂಟ್ ನೀಡಿರುವ ಗೌರವ ಸದಸ್ಯತ್ವವನ್ನು ಸ್ವೀಕರಿಸಿ ಮಾತನಾಡಿದ ರಾಜಮಾತೆ ಗೌರವಾನ್ವಿತ ಡಾ ಪ್ರಮೋದಾದೇವಿ ಒಡೆಯರ್ ಅವರು ಈ ಸಂಬಂಧ ಮುಂದಿಟ್ಟ ಕೋರಿಕೆಗೆ ಅಲ್ಲೆ ಒಪ್ಪಿಗೆ ಸೂಚಿಸಿದ ನಾದ ಬ್ರಹ್ಮ ಶ್ರೀ ಹಂಸಲೇಖ ಈ ರೂಪಕವನ್ನು ರಚಿಸಿ, ಕನ್ನಡಿಗರಿಗೆ ಅರ್ಪಿಸುದಾಗಿ ಪ್ರಕಟಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸಾಧನೆ, ಈ ನಾಡಿಗೆ ಅವರ ಕೊಡುಗೆ ಅದ್ವಿತೀಯ. ಕರ್ನಾಟಕದ ಮನೆ-ಮನಗಳಲ್ಲೂ ಪ್ರಾತಸ್ಮರಣೀಯರಾಗಿರುವ ನಾಲ್ವಡಿಯವರ ಸ್ಮರಿಸಿ ಮಾತನಾಡಿದ ರಾಜಮಾತೆ ಗೌರವಾನ್ವಿತ ಡಾ ಪ್ರಮೋದಾದೇವಿ ಒಡೆಯರ್ ಈ ದೇಶದ ಸ್ವಾತಂತ್ರ್ಯ, ಪ್ರಜಾಪ್ರಭುತ್ವ ವಿಶ್ವಕ್ಕೆ ಮಾದರಿ ಎಂದು ಬಣ್ಣಿಸಿದರು.

ನಾವೆಲ್ಲರೂ, ಈ ದೇಶ ಸೇವೆಗೆ ನಮ್ಮ ಬದುಕನ್ನು ಮುಡಿಪಾಗಿಡಬೇಕು, ಎಂದು ಅವರು ಈ ಸಂದರ್ಭದಲ್ಲಿ ಕರೆ ನೀಡಿದರು.

ಇದೆ ಸಂದರ್ಭದಲ್ಲಿ ರಾಜಮಾತೆ ಗೌರವಾನ್ವಿತ ಡಾ ಪ್ರಮೋದಾದೇವಿ ಒಡೆಯರ್ ಹಾಗು ಹಂಸಲೇಖ ಅವರಿಗೆ ಬೆಂಗಳೂರು ಸಿಟಿ ಇನ್ಸಿಟ್ಯೂಟ್ ಗೌರವ ಸದಸ್ಯತ್ವ ಪ್ರದಾನ ಮಾಡಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಹಂಸಲೇಖ ನಾಲ್ವಡಿ ಅವರ ಸಾಧನೆ ನಮಗೆಲ್ಲರಿಗೂ ಆದರ್ಶಪ್ರಾಯ ಎಂದು ಬಣ್ಣಿಸಿದರು.

ಕನ್ನಡ ಭಾಷೆ-ಆಡಳಿತದ ಬಗ್ಗೆ ಮಾತನಾಡಿದ ಅವರು, ಕನ್ನಡವನ್ನು ಕೇವಲ ಭಾಷೆಯೆಂದು ಪರಿಗಣಿಸದೆ ಅದನ್ನು ನಮ್ಮ ಹಕ್ಕಿನ ಪತ್ರ ಎಂದು

ತಿಳಿದುಕೊಳ್ಳಬೇಕು. ಈ ಹಕ್ಕು ನಮ್ಮೆಲ್ಲರಿಗೂ ದಕ್ಕುವಂತೆ ಆಗಬೇಕು ಎಂದು ತಿಳಿಸಿದರು. ಈ ಬಗ್ಗೆ ನಾವು ಸದಾ ಎಚ್ಚರದಿಂದಿರಬೇಕು, ಎಂದು ಅವರು ತಿಳಿಸಿದರು ಬೆಂಗಳೂರಿನಲ್ಲಿ ಕನ್ನಡ -ಕನ್ನಡಿಗರ ಕುಸಿತದ ಬಗ್ಗೆ ಅವರು ಈ ಸಂದರ್ಭದಲ್ಲಿ ಕಳವಳ ವ್ಯಕ್ತಪಡಿಸಿದರು.

ಸಿಟಿ ಇನ್ಸಿಟ್ಯೂಟ್ ಅಧ್ಯಕ್ಷ ಶ್ರೀ ಕೆ ಸುಕುಮಾರ್, ಉಪಾಧ್ಯಕ್ಷ ಎಸ್ ಸಿ ಚಂದ್ರಶೇಖರ್, ಗೌರವ ಕಾರ್ಯದರ್ಶಿ ಲಕ್ಷ್ಮೀಶ ಚಂದ್ರ, ಗೌರವ ಖಜಾಂಚಿ ವಿರೂಪಾಕ್ಷ ಬಿ ಪಿ, ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸಭಾ ಕಾರ್ಯಕ್ರಮದ ಬಳಿಕ, ಸಂಗೀತ ಮತ್ತು ನೃತ್ಯ ಕಾರ್ಯಕ್ರಮಗಳ ಭರಪೂರ ಮನೋರಂಜನೆ ಕಾರ್ಯಕ್ರಮ ನೋಡುಗರನ್ನು ಮುದಗೊಳಿಸಿತು. ಮುಂಬೈ, ಕೋಲ್ಕೊತಾ, ಚೆನ್ನೈನ ಖ್ಯಾತ ನೃತ್ಯ ತಂಡಗಳ ಪ್ರದರ್ಶನ, ಕನ್ನಡದ ಹೆಮ್ಮೆಯ ಬಾಲ ಕಲಾವಿದ ಅರ್ಜುನ್ ಇಟಗಿ ಹಾಡು, ನೋಡುಗರನ್ನು ಮನೋರಂಜನಾ ಲೋಕದಲ್ಲಿ ತೇಲಾಡಿಸಿತು.

# ಕೊಳ್ಳೇಗಾಲ ವ್ಯಾಪ್ತಿಯ ಕೆರೆಗಳ ಅಭಿವೃದ್ಧಿಗೆ ಅಗತ್ಯಬಿದ್ದರೆ ಹೆಚ್ಚುವರಿ ಅನುದಾನ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ವ್ಯಾಪ್ತಿಯ ಕೆರೆಗಳ ಅಭಿವೃದ್ಧಿಗೆ ಅಗತ್ಯಬಿದ್ದರೆ ಹೆಚ್ಚುವರಿ ಅನುದಾನ ನೀಡಲಾಗುವುದು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಸ್.ಎನ್ ಭೋಸರಾಜು ಹೇಳಿದರು.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದ ಮುಡಿಗುಂಡದ ತಟ್ಟೆಕೆರೆ ಹಾಗೂ ಕೊಂಗಳ ಕೆರೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ‘ಚಳಿಗಾಲದ ಅಧಿವೇಶನದಲ್ಲಿ ಶಾಸಕ ಎಆರ್ ಕೃಷ್ಣಮೂರ್ತಿ ಅವರು ಕೆರೆಗಳ ಅಭಿವೃದ್ಧಿ ಬಗ್ಗೆ ಪ್ರಸ್ತಾವ ಮಾಡಿದ್ದರು. ಕೆರೆಗಳ ಅಭಿವೃದ್ಧಿಗೆ ಹಣ ಮಂಜೂರು ಮಾಡುವ ಭರವಸೆ ನೀಡಿದ್ದೆ. ಈಗ ಕೆರೆಗಳನ್ನು ವೀಕ್ಷಣೆ ಮಾಡುತ್ತಿದ್ದೇನೆ. ಕೆರೆಗಳ ಅಭಿವೃದ್ಧಿಗೆ ಹಿಂದಿನ ಸರ್ಕಾರ ?10 ಕೋಟಿ ಅನುದಾನ ನೀಡಿದೆ. ಅದರಲ್ಲಿ 3.5 ಕೋಟಿ ಕಾಮಗಾರಿಗೆ ಬಳಸಿಕೊಂಡಿದ್ದಾರೆ. ಉಳಿದ ಹಣದಲ್ಲಿ ಕೆರೆ ಅಭಿವೃದ್ಧಿ ಮಾಡಲಾಗುವುದು’ ಎಂದರು.

ಉನ್ನತ ಮಟ್ಟದ ತನಿಖೆ: ಕೆರೆ ಒತ್ತುವರಿಯ ಬಗ್ಗೆ ದೂರುಗಳು ಬಂದಿದೆ. ಈ ಬಗ್ಗೆ ಉನ್ನತ ಮಟ್ಟದಲ್ಲಿ ತನಿಖೆ ನಡೆಸಲಾಗುವುದು. ಜಿಲ್ಲಾಧಿಕಾರಿ ಹಾಗೂ ವಿವಿಧ ಇಲಾಖೆಗಳೊಂದಿಗೆ ಸಭೆ ನಡೆಸಿ ಜಂಟಿ ಸರ್ವೆ ನಡೆಸಲು ಸೂಚಿಸಲಾಗುವುದು. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು’ ಎಂದು ಸಚಿವರು ಹೇಳಿದರು.

ಕೆರೆಗಳು ಮಾಯ: ಕೆರೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಕೆರೆ ಒತ್ತುವರಿ ಬಗ್ಗೆ ಸಾಮಾಜಿಕ ಕಾರ್ಯಕರ್ತ, ಮುಖಂಡ ದಶರಥ್ ಸಚಿವರ ಗಮನ ಸೆಳೆದರು.



‘ತಾಲ್ಲೂಕಿನಲ್ಲಿ ಅನೇಕ ಕೆರೆಗಳು ಮಾಯವಾಗುತ್ತಿವೆ. ತಾಲ್ಲೂಕು ಮಟ್ಟದ ಅಧಿಕಾರಿಗಳೇ ಇದಕ್ಕೆ ಹೊಣೆ. ಹಣದ ಆಸೆಗೆ ಕೆರೆಗಳ್ಳರ ಜೊತೆ ಶಾಮೀಲಾಗುತ್ತಿದ್ದಾರೆ’ ಎಂದು ದೂರಿದರು.

‘ಯಾವ ಕೆರೆ ಮಾಯವಾಗಿದೆ ಎಂಬುದು ನನಗೆ ತಿಳಿಸಿ. ಅದನ್ನು ಪರಿಶೀಲಿಸಿ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುವುದು. ‘ಕೆರೆಗಳಿಗೆ ಕೊಳಚೆ ನೀರನ್ನು ಬಿಡಲಾಗುತ್ತಿದೆ. ಇದರಿಂದ ಕೆರೆಗಳು ಹಾಳಾಗುತ್ತಿವೆ. ಪ್ರಾಣಿ ಪಕ್ಷಿಗಳು ಸಾಯುತ್ತಿವೆ’ ಎಂದು ಸಾರ್ವಜನಿಕರು ದೂರು ನೀಡಿದ್ದಾರೆ. ಕೊಳಚೆ ನೀರು ಕೆರೆಗೆ ಸೇರದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು’ ಎಂದು ಸೂಚನೆ ನೀಡಿದರು.

ಇದಕ್ಕೂ ಮೊದಲು ಸಚಿವರು ಯಳಂದೂರು ತಾಲ್ಲೂಕಿನ ಹೊಂಗನೂರು ಹಿರೆಕೆರೆಗೆ ಭೇಟಿ ಪರಿಶೀಲನೆ ನಡೆಸಿದರು.

## ಸಂಜೆ ಟಿಪ್ಸ್



## ಫಲವತ್ತತೆ ಮತ್ತು ಆಂಡ್ರಾಲಜಿ ಕ್ಲಿನಿಕ್

ಬೆಲೆನಸ್ ಚಾಂಪಿಯನ್ಸ್ ಹಾಸ್ಪಿಟಲ್, ಮಿಲನ್ ಫರ್ಟಿಲಿಟಿ ಸ್ಪೆಷಲಿಸ್ಟ್ಸ್ ಸಹಯೋಗದೊಂದಿಗೆ ಅತ್ಯಾಧುನಿಕವಾದ ಫಲವತ್ತತೆ(ಫರ್ಟಿಲಿಟಿ) ಮತ್ತು ಆಂಡ್ರಾಲಜಿ ಕ್ಲಿನಿಕ್ ಪ್ರಾರಂಭಿಸಿದ್ದು, ಪುರುಷರು ಮತ್ತು ಮಹಿಳೆಯರಿಗೆ ಒಂದೇ ಸೂರಿನಲ್ಲಿ ಸಮಗ್ರ ಫಲವತ್ತತೆಯ ಆರೈಕೆಯನ್ನು ಒದಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನು ಇಟ್ಟಿದೆ. ಫಲವತ್ತತೆ ಮತ್ತು ಆಂಡ್ರಾಲಜಿ ಕ್ಲಿನಿಕ್ನ ಉದ್ಘಾಟನೆಯಲ್ಲಿ ಮಿಲನ್ನ ನಿರ್ದೇಶಕರು ಮತ್ತು ಎಚ್ಜಿಐಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿರುವ ಅಂಜಲಿ ಅಜಯ್ ಕುಮಾರ್, ಸೊಸೈಟಿ ಫಾರ್ ಕ್ಯಾನ್ಸರ್ ಪ್ರಿವೆನ್ಷನ್ನ ಸಂಸ್ಥಾಪಕರು ಮತ್ತು ಅಧ್ಯಕ್ಷರಾದ ಡಾ. ನಂದಾ ರಜನೀಶ್, ವರ್ತೂರು ಕ್ಷೇತ್ರದ ಮಾಜಿ ಕಾರ್ಪೊರೇಟರ್ ಆದ ಪುಷ್ಪಾ ಮಂಜುನಾಥ್, ಬೆಲೆನಸ್ ಚಾಂಪಿಯನ್ಸ್ ಆಸ್ಪತ್ರೆಯ ಸಂಸ್ಥಾಪಕರಾದ ಡಾ. ಮಂಜುನಾಥ್, ಬೆಲೆನಸ್ ಚಾಂಪಿಯನ್ಸ್ ಆಸ್ಪತ್ರೆಯ ಸಹಸಂಸ್ಥಾಪಕರಾದ ಡಾ. ಕಿಶೋರ್, ಮೂತ್ರಶಾಸ್ತ್ರಜ್ಞರಾಧ ಡಾ. ಪ್ರತೀಕ್, ಪ್ರಸೂತಿ ತಜ್ಞರಾದ ಡಾ. ಕಾರ್ತಿಕಾ ಮತ್ತು ಬೆಲೆನಸ್ ಚಾಂಪಿಯನ್ಸ್ ಆಸ್ಪತ್ರೆಯ ಸಿಓಓ ಆಗಿರುವ ಡಾ. ಶಶಿಧರ್ ಈ ಸಂದರ್ಭದಲ್ಲಿ ಹಾಜರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಮಿಲನ್ನ ನಿರ್ದೇಶಕರು ಮತ್ತು ಎಚ್ಜಿಐಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿರುವ ಅಂಜಲಿ ಅಜಯ್ ಕುಮಾರ್, 'ಬೆಲೆನಸ್ ಚಾಂಪಿಯನ್ಸ್ ಹಾಸ್ಪಿಟಲ್ ಮತ್ತು ಮಿಲನ್ ನಡುವಿನ ಈ ಸಹಯೋಗದೊಂದಿಗೆ ಫಲವತ್ತತೆ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಒಂದು ದೊಡ್ಡ ವರದಾನವಾಗಿದೆ. ನಮ್ಮ ಜಂಟಿ ಪರಿಣಿತಿಯಿಂದ ಫಲವತ್ತತೆಗೆ ಪರಿಹಾರ ಹುಡುಕುತ್ತಿರುವವರಿಗೆ ದೊಡ್ಡ ರೀತಿಯಲ್ಲಿ ಸಹಾಯವಾಗಲಿದೆ' ಎಂದು ಹೇಳಿದರು.ಫಲವತ್ತತೆಯ ಪ್ರಾಮುಖ್ಯತೆಯ ಕುರಿತು ಮಾತನಾಡಿದ ಸೊಸೈಟಿ ಫಾರ್ ಕ್ಯಾನ್ಸರ್ ಪ್ರಿವೆನ್ಷನ್ನ ಸಂಸ್ಥಾಪಕರು ಮತ್ತು ಅಧ್ಯಕ್ಷರಾದ ಡಾ. ನಂದಾ ರಜನೀಶ್, 'ಸಮಾಜ ಎದುರಿಸುತ್ತಿರುವ ಒಂದು ದೊಡ್ಡ ಸಮಸ್ಯೆಗೆ ಪರಿಹಾರವಾಗಿ ಈ ಫಲವತ್ತತೆ ಮತ್ತುಆಂಡ್ರಾಲಜಿ ಕ್ಲಿನಿಕ್ ರೂಪುಗೊಂಡಿದೆ. ಫಲಕತ್ತತೆಯಿಂದ ಬಳಲುತ್ತಿರುವ ದಂಪತಿಗಳಿಗೆ ವಿಶೇಷ ಪರಿಹಾರ ಸಿಗಲಿದೆ' ಎಂದರು. ವರ್ತೂರು ಕ್ಷೇತ್ರದ ಮಾಜಿ ಕಾರ್ಪೊರೇಟರ್ ಆದ ಪುಷ್ಪಾ ಮಂಜುನಾಥ್ ಮಾತನಾಡಿ, 'ಸಮುದಾಯಕ್ಕೆ ಬಹಳ ಅಗತ್ಯವಿರುವ ಅತ್ಯಾಧುನಿಕ ಫಲವತ್ತತೆ ಚಿಕಿತ್ಸೆಯನ್ನು ನೀಡುವಲ್ಲಿ ಫಲವತ್ತತೆ ಮತ್ತುಆಂಡ್ರಾಲಜಿ ಕ್ಲಿನಿಕ್ ಗಮನಾರ್ಹ ಹೆಜ್ಜೆ ಇಟ್ಟಿದೆ. ಸ್ಥಳೀಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಈ ಕ್ಲಿನಿಕ್ ಸೇವೆ ಒದಗಿಸಲಿ' ಎಂದರು. 080-69366936 ನಂಬರ್ ಸಂಪರ್ಕಿಸಬಹುದು.

## ಪಾಕ ಶಾಲೆ

000



### ಬೇಕಾಗಿರುವ ಪದಾರ್ಥ

ಹಾಲು - 2 ಕಪ್, ಹಾಲಿನ ಪುಡಿ - 4 ಕಪ್, ಸಕ್ಕರೆ ಪುಡಿ - 1 ಕಪ್, ಏಲಕ್ಕಿ ಪುಡಿ ? 1 ಚಮಚ, ತುಪ್ಪ 1 ಚಮಚ, ಒಣ ಹಣ್ಣುಗಳು 1 ಬೌಲ್

### ಮಾಡುವ ವಿಧಾನ

ಬಾಣಲೆಗೆ ತುಪ್ಪವನ್ನು ಹಾಕಿ ಅದಕ್ಕೆ ಹಾಲನ್ನು ಹಾಕಿ ಬಿಸಿ ಮಾಡಿ. ಹಾಲು ಬಿಸಿಯಾಗ್ತಿದ್ದಂತೆ ಹಾಲಿನ ಪುಡಿಯನ್ನು ಹಾಕಿ ಮಿಕ್ಸ್ ಮಾಡಿ. ಮಿಶ್ರಣ ದಪ್ಪವಾಗುವವರೆಗೆ ಬೇಯಿಸಿ. ಇದಕ್ಕೆ ಸಕ್ಕರೆ ಮತ್ತು ಒಣ ಹಣ್ಣುಗಳನ್ನು ಸೇರಿಸಿ. ಇನ್ನೊಂದು ಪಾತ್ರೆಗೆ ತುಪ್ಪವನ್ನು ಹಾಕಿ ಸವರಿ. ಮಿಶ್ರಣವನ್ನು ಹಾಕಿ 20 ನಿಮಿಷ ಬಿಡಿ. ನಂತ್ರ ಬರ್ಫಿ ಆಕಾರಕ್ಕೆ ಕತ್ತರಿಸಿ.

## ಬಿಳಿ ಕೂದಲ ಸಮಸ್ಯೆಯೇ..?

### ಹೆಲ್ತ್ ಟಿಪ್ಸ್



ಕೂದಲು ಬೆಳ್ಳಗಾದ್ರೆ ವಯಸ್ಸಾಯ್ತು ಎಂಬ ನಂಬಿಕೆ ಹಿಂದಿನ ಕಾಲದಲ್ಲಿತ್ತು. ಆದ್ರೆ ಇತ್ತೀಚಿನ ದಿನಗಳಲ್ಲಿ ಚಿಕ್ಕ ಮಕ್ಕಳ ಕೂದಲು ಕೂಡ ಬೆಳ್ಳಗಾಗ್ತಿದೆ. ಬಿಳಿ ಕೂದಲು ಮುಜುಗರಕ್ಕೆ ಕಾರಣವಾಗುತ್ತದೆ. ಅನಾರೋಗ್ಯಕರ ಜೀವನಶೈಲಿ, ಕಲುಷಿತ ಆಹಾರ, ರಾಸಾಯನಿಕ ಶ್ಯಾಂಪೂಗಳ ಬಳಕೆ ಕೂದಲು ಬಿಳಿಯಾಗಲು ಕಾರಣವಾಗುತ್ತದೆ.

ಈ ಸಮಸ್ಯೆಗೆ ಕೆಲ ಎಣ್ಣೆ ಪ್ರಯೋಜನಕಾರಿ. ಕೂದಲು ಬಿಳಿಯಾಗುವುದನ್ನು ತಡೆಯಲು ತೆಂಗಿನ ಎಣ್ಣೆ ಮತ್ತು ಗೋರಂಟಿ ಬಹಳ ಪರಿಣಾಮಕಾರಿ. ಗೋರಂಟಿ ಕಂದು ಬಣ್ಣವು ಕೂದಲಿನ ಬೇರುಗಳನ್ನು ತಲುಪುತ್ತದೆ. ಇದು ಕೂದಲಿನ ಬಣ್ಣವನ್ನು ಬದಲಿಸುತ್ತದೆ. ತೆಂಗಿನ ಎಣ್ಣೆ, ಗೋರಂಟಿ ಕೂದಲ ಬೇರುಗಳನ್ನು ತಲುಪಲು ಸಹಾಯ ಮಾಡುತ್ತದೆ. 3-4 ಚಮಚ ತೆಂಗಿನ ಎಣ್ಣೆಯನ್ನು ಕುದಿಸಿ ಮತ್ತು ಅದರಲ್ಲಿ ಗೋರಂಟಿ ಎಲೆಗಳನ್ನು ಹಾಕಿ. ಎಣ್ಣೆ ಕಂದು ಬಣ್ಣ ಬರುವವರೆಗೆ ಕುದಿಸಿ ನಂತರ ಎಣ್ಣೆಯನ್ನು ತಣ್ಣಗಾಗಿಸಿ ಕೂದಲಿನ ಬೇರುಗಳಿಗೆ ಹಚ್ಚಿ. ಕನಿಷ್ಠ 40 ನಿಮಿಷಗಳ ಕಾಲ ಬಿಡಿ. ನಂತರ ತೊಳೆಯಿರಿ. ಕ್ಯಾಸ್ಟರ್ ಆಯಿಲ್ ಉತ್ತಮ ಪ್ರಮಾಣದ ಪ್ರೋಟೀನ್ ಹೊಂದಿರುತ್ತದೆ. ಇದು ಕೂದಲು ಒಡೆಯುವುದನ್ನು ತಡೆಯುತ್ತದೆ. ಸಾಸಿವೆ ಎಣ್ಣೆಯಲ್ಲಿ ಕಬ್ಬಿಣ, ಮೆಗ್ನೀಸಿಯಮ್, ಸತು ಮತ್ತು ಕ್ಯಾಲ್ಸಿಯಂ ಇದ್ದು, ಇದು ಕೂದಲನ್ನು ಆರೋಗ್ಯಕರಗೊಳಿಸುತ್ತದೆ. 1 ಚಮಚ ಕ್ಯಾಸ್ಟರ್ ಆಯಿಲ್ ಗೆ 2 ಟೀ ಚಮಚ ಸಾಸಿವೆ ಎಣ್ಣೆ ಬೆರೆಸಿ ಕೆಲವು ಸೆಕೆಂಡುಗಳ ಕಾಲ ಬಿಸಿ ಮಾಡಿ. ಎಣ್ಣೆ ತಣ್ಣಗಾದ ನಂತರ ಕೂದಲಿನ ಬೇರುಗಳಿಗೆ ಹಚ್ಚಿ 10 ನಿಮಿಷಗಳ ಕಾಲ ಮಸಾಜ್ ಮಾಡಿ. ಕನಿಷ್ಠ 45 ನಿಮಿಷಗಳ ಕಾಲ ಬಿಟ್ಟು ನಂತ್ರ ತೊಳೆಯಿರಿ.

## ಆರೋಗ್ಯಕಾರಿ ಸಲಹೆ

### ಬ್ಯೂಟಿ ಟಿಪ್ಸ್




ಹವಾಮಾನ ಬದಲಾದಾಗ, ನಾವು ತಿನ್ನುವ ಆಹಾರ, ಜೀವನಶೈಲಿ, ಧೂಳು ಹೀಗೆ ಅನೇಕ ಕಾರಣಗಳಿಂದ ದಿನನಿತ್ಯ ಏನಾದರೊಂದು ಆರೋಗ್ಯದ ಸಮಸ್ಯೆಯನ್ನು ಎದುರಿಸುತ್ತೇವೆ.

ಅದರ ಬದಲು ಮೊದಲೇ ಜಾಗ್ರತೆ ವಹಿಸಿ ನಮ್ಮ ಆರೋಗ್ಯವನ್ನು ಕಾಪಡಿಕೊಳ್ಳುವ ಜಾಣತನ ಮಾಡಿದರೆ ದುಡ್ಡು ಉಳಿತಾಯವಾಗುತ್ತದೆ ಜತೆಗೆ ಆರೋಗ್ಯ ದಿಂದಲೂ ಇರಬಹುದು.

ನಿಂಬೆಹಣ್ಣಿನಲ್ಲಿ ಸಾಕಷ್ಟು ಒಳ್ಳೆಯ ಅಂಶಗಳಿವೆ. ಅದು ಅಲ್ಲದೇ, ಇದೇನೂ ದುಬಾರಿ ಕೂಡ ಅಲ್ಲ. ದಿನಾ ನಿಂಬೆಹಣ್ಣಿನ ಜ್ಯೂಸ್ ಕುಡಿಯುವುದು ಅಥವಾ ಬಿಸಿ ನೀರಿಗೆ ನಿಂಬೆ ಹಣ್ಣಿನ ರಸ ಸೇರಿಸಿ ಕುಡಿಯುವುದರಿಂದ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಿಕೊಳ್ಳಬಹುದು. ಆದರೆ ಜ್ಯೂಸ್ ಮಾಡುವಾಗ ಸಕ್ಕರೆ ಬದಲು ಕಲ್ಲು ಸಕ್ಕರೆ ಅಥವಾ ಜೇನುತುಪ್ಪ ಸೇರಿಸಿ ಕುಡಿಯಿರಿ.

ಇನ್ನು ಮನೆ ಮಂದೆ ತುಳಸಿ ಗಿಡ ಅಂತೂ ಎಲ್ಲರ ಮನೆಯಲ್ಲೂ ಇರುತ್ತದೆ. ತುಳಸಿ ಎಲೆಯಲ್ಲಿ ಆಯಂಟಿ ಆಕ್ಸಿಡೆಂಟ್ ಹೆಚ್ಚಿರುತ್ತದೆ. ಪ್ರತಿದಿನ ಬೆಳಿಗ್ಗೆ 2 ತುಳಸಿ ಎಲೆ ಜಗಿದು ತಿಂದರೆ ಆರೋಗ್ಯಕ್ಕೆ ಸಾಕಷ್ಟು ಲಾಭವಿದೆ. ಸಾಮಾನ್ಯ ಶೀತ, ಕೆಮ್ಮುವನ್ನು ಇದು ನಿವಾರಿಸುತ್ತದೆ. ಮಕ್ಕಳಿಗೂ ಇದರ ರಸವನ್ನು ಕುಡಿಸಿದರೆ ಒಳ್ಳೆಯದು.

ಹಾಲಿನಲ್ಲಿ ಕ್ಯಾಲ್ಸಿಯಂ ಅಂಶವಿರುತ್ತದೆ. ಇವಾಗ ಎಲ್ಲರೂ ಮೂಳೆಯ ಸಮಸ್ಯೆಯಿಂದ ಬಳಲುತ್ತಾರೆ. ಹಾಗಾಗಿ ಪ್ರತಿದಿನ ರಾತ್ರಿ ಅಥವಾ ಬೆಳಿಗ್ಗೆ ಒಂದು ಲೋಟ ಹಾಲು ಕುಡಿಯುವ ಅಭ್ಯಾಸ ಇಟ್ಟುಕೊಂಡರೆ ಆರೋಗ್ಯವು ಚೆನ್ನಾಗಿರುತ್ತದೆ.

ಇನ್ನು ನೆಲ್ಲಿಕಾಯಿ ಕಣ್ಣು, ಚರ್ಮ ಕೂದಲಿನ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಏನಾದರು ಕೆಲಸ ಮಾಡುವಾಗ ಒಂದು ನೆಲ್ಲಿಕಾಯಿಯನ್ನು ಹತ್ತಿರದಲ್ಲಿಟ್ಟುಕೊಂಡು ತಿನ್ನುತ್ತಾ ಇರಿ. ಇದರಿಂದ ನಿಮ್ಮ ಚರ್ಮಕ್ಕೆ ಸಂಬಂಧಪಟ್ಟ ಅನೇಕ ಸಮಸ್ಯೆಗಳು ದೂರವಾಗುತ್ತದೆ. ಇದನ್ನು ಪೇಸ್ಟ್ ಮಾಡಿ ಮೊಸರಿನೊಂದಿಗೆ ಸೇರಿಸಿ ಕೂದಲಿಗೆ ಹಚ್ಚಿದರೆ ಕೂದಲು ನಳನಳಿಸುತ್ತದೆ.



## ಶ್ರೀಮಂತ ನಟಿ ಅನುಷ್ಕಾ ಶೆಟ್ಟಿ



ಅನುಷ್ಕಾ ಶೆಟ್ಟಿಗೆ ತಮಿಳು, ತೆಲುಗು ಮಾತ್ರವಲ್ಲದೆ ಭಾರತದಲ್ಲೂ ಅಪಾರ ಅಭಿಮಾನಿಗಳಿದ್ದಾರೆ. 42 ವರ್ಷ ವಯಸ್ಸಿನಲ್ಲೂ ಶ್ರೀಮಂತ ನಟಿಯರ ಪಟ್ಟಿಯಲ್ಲಿ ಒಬ್ಬರಾಗಿದ್ದಾರೆ. ಅನುಷ್ಕಾ ಅವರ ನಿಜವಾದ ಹೆಸರು ಸ್ವೀಟಿ. ಸಿನಿಮಾಗಾಗಿ ತಮ್ಮ ಹೆಸರನ್ನು ಅನುಷ್ಕಾ ಎಂದು ಬದಲಾಯಿಸಿಕೊಂಡರು.

ಅನುಷ್ಕಾ ಶೆಟ್ಟಿ ಅವರ ಮೊದಲ ತಮಿಳು ಚಿತ್ರ 2006 ರಲ್ಲಿ ಬಿಡುಗಡೆಯಾದ ರೆಂಡು. ಇದರಲ್ಲಿ ಮಾಧವನ್ ಜೊತೆ ನಟಿಸಿದ್ದರು. ಆ ಚಿತ್ರದಲ್ಲಿ ಎರಡನೇ ನಾಯಕಿ ಆಗಿದ್ದರಿಂದ ಅಷ್ಟಾಗಿ ಜನಪ್ರಿಯತೆ ಗಳಿಸಿರಲಿಲ್ಲ. ಬಳಿಕ 2009 ರಲ್ಲಿ ಅರುಂಧತಿ ಚಿತ್ರ ಬಿಡುಗಡೆಯಾಯಿತು. ಈ ಚಿತ್ರದ ಮೂಲಕ ಖ್ಯಾತಿ ಗಳಿಸಿದರು. ಬಾಹುಬಲಿ 1 ಮತ್ತು ಬಾಹುಬಲಿ 2 ವಿಶ್ವಾದ್ಯಂತ ಹಿಟ್ ಆದವು. ಈ ಸಿನಿಮಾ ಮೂಲಕ ಅನುಷ್ಕಾ ಶೆಟ್ಟಿ ಫುಲ್ ಫೇಮಸ್ ಆದರು.

ದಕ್ಷಿಣ ಭಾರತದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯರಲ್ಲಿ ಅನುಷ್ಕಾ ಶೆಟ್ಟಿ ಕೂಡ ಒಬ್ಬರು. ಆರಂಭದಲ್ಲಿ ಕೆಲವು ಸಾವಿರ ಸಂಪಾದಿಸುತ್ತಿದ್ದ ಅನುಷ್ಕಾ ಶೆಟ್ಟಿ ನಂತರ ಲಕ್ಷಗಳಲ್ಲಿ ಸಂಪಾದಿಸತೊಡಗಿದರು. ಕೆಲವೇ ಚಿತ್ರಗಳ ನಂತರ ಕೋಟಿಗಟ್ಟಲೆ ಸಂಭಾವನೆ ಪಡೆಯಲಿ ಆರಂಭಿಸಿದ ಅನುಷ್ಕಾ ಕೊನೆಯದಾಗಿ ನಟಿಸಿದ್ದು 'ಮಿಸ್ ಶೆಟ್ಟಿ ಮಿಸ್ಟರ್ ಪೋಲಿಶೆಟ್ಟಿ' ಚಿತ್ರ. ಈ ಚಿತ್ರಕ್ಕೆ 6 ರಿಂದ 8 ಕೋಟಿ ಸಂಭಾವನೆ ಪಡೆದಿದ್ದಾರೆ ಎನ್ನಲಾಗಿದೆ.

### ಅನುಷ್ಕಾ ಶೆಟ್ಟಿ ಒಟ್ಟು ಆಸ್ತಿ ಮೌಲ್ಯ

ಅನುಷ್ಕಾ ಶೆಟ್ಟಿ ಭಾರತದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯರಲ್ಲಿ ಒಬ್ಬರು ಎಂದು ಹೇಳಲಾಗುತ್ತದೆ. ಅದರಂತೆ ಇವರ ಒಟ್ಟು ಆಸ್ತಿ ಮೌಲ್ಯ 130 ಕೋಟಿ ರೂ.ವರೆಗೆ ಇದೆ ಎನ್ನಲಾಗಿದೆ. ಜಾಹೀರಾತು ರಾಯಭಾರಿಯಾಗಲು 12 ಕೋಟಿಯವರೆಗೂ ಸಂಭಾವನೆ ಪಡೆಯುತ್ತಿದ್ದಾರೆ ಎನ್ನಲಾಗಿದೆ. ಅನುಷ್ಕಾ ದುಬಾರಿ ಕಾರುಗಳನ್ನು ಹೊಂದಿದ್ದಾರೆ, ಹೈದರಾಬಾದ್ನಲ್ಲಿ ದೊಡ್ಡ ಬಂಗಲೆ ಮತ್ತು ಇತರ ಚರಾಸ್ತಿಗಳನ್ನು ಹೊಂದಿದ್ದಾರೆ. ಇದೆಲ್ಲವನ್ನೂ ಸೇರಿಸಿ 130 ಕೋಟಿ ರೂ ವರೆಗೂ ಅನುಷ್ಕಾ ಶೆಟ್ಟಿ ಆಸ್ತಿ ಹೊಂದಿದ್ದಾರೆ.



## ವಿಶ್ವ ಕುಷ್ಠರೋಗ ದಿನ




ವಾರ್ಷಿಕವಾಗಿ ಜನವರಿಯ ಕೊನೆಯ ಭಾನುವಾರದಂದು ವಿಶ್ವ ಕುಷ್ಠರೋಗ ದಿನವನ್ನು ಆಚರಿಸಲಾಗುತ್ತದೆ, ವಿಶೇಷವಾಗಿ ಅಭಿವೃದ್ಧಿ ಹೊಂದಿದ ದೇಶಗಳಲ್ಲಿ ಅಳಿವಿನಂಚಿನಲ್ಲಿರುವ ಅನೇಕ ಜನರು ನಂಬಿರುವ ರೋಗದ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಕುಷ್ಠರೋಗವನ್ನು ಹ್ಯಾನ್ಸೆನ್ಸ್ ಕಾಯಿಲೆ ಎಂದೂ ಕರೆಯುತ್ತಾರೆ, ಇದು ಮಾನವ ದೇಹದ ನರಮಂಡಲವನ್ನು ಗುರಿಯಾಗಿಸುವ ನಿರ್ದಿಷ್ಟ ರೀತಿಯ ಬ್ಯಾಕ್ಟೀರಿಯಾದಿಂದ ಉಂಟಾಗುವ ಸಾಂಕ್ರಾಮಿಕ ಕಾಯಿಲೆಯಾಗಿದೆ. ಇದು ಸಾಮಾನ್ಯವಾಗಿ ಕೈಗಳು, ಕಾಲುಗಳು ಮತ್ತು ಮುಖದ ಮೇಲೆ ಪರಿಣಾಮ ಬೀರುತ್ತದೆ. ಇದು ಕಾರಣವಾಗುವ ಬ್ಯಾಕ್ಟೀರಿಯಾಕ್ಕೆ ವ್ಯಾಪಕವಾದ ಒಡ್ಡುವಿಕೆಯ ಮೂಲಕ ಹರಡುತ್ತದೆ ಎಂದು ನಂಬಲಾಗಿದೆ. ಈ ದಿನವು ರೋಗದ ಬಗ್ಗೆ ಜನರಿಗೆ ಶಿಕ್ಷಣ ನೀಡುವುದಲ್ಲದೆ, ಅದರಿಂದ ಪೀಡಿತರ ಗಮನವನ್ನು ಸೆಳೆಯುವ ಗುರಿಯನ್ನು ಹೊಂದಿದೆ.

ಕುಷ್ಠರೋಗವು ದೀರ್ಘಕಾಲದ ಬ್ಯಾಕ್ಟೀರಿಯಾದ ಸೋಂಕಾಗಿದ್ದು, ಇದು ನರಗಳು, ಉಸಿರಾಟದ ಪ್ರದೇಶ, ಚರ್ಮ ಮತ್ತು ಕಣ್ಣುಗಳಿಗೆ ಶಾಶ್ವತ ಮತ್ತು ಸರಿಪಡಿಸಲಾಗದ ಹಾನಿಗೆ ಕಾರಣವಾಗಬಹುದು. ಈ ಸ್ಥಿತಿಯು ಪೀಡಿತ ಪ್ರದೇಶಗಳಲ್ಲಿ ಸಂವೇದನೆಯ ನಷ್ಟವನ್ನು ಉಂಟುಮಾಡುತ್ತದೆ. ಆಗಾಗ್ಗೆ, ಪೀಡಿತ ವ್ಯಕ್ತಿಯು ಪೀಡಿತ ಪ್ರದೇಶದಲ್ಲಿ ನೋವನ್ನು ಗ್ರಹಿಸಲು ಸಾಧ್ಯವಿಲ್ಲ, ಇದು ಗಾಯಗಳು ಅಥವಾ ಗಮನಿಸದ ಗಾಯಗಳ ಕಡೆಗೆ ನಿರ್ಲಕ್ಷ್ಯಕ್ಕೆ ಕಾರಣವಾಗುತ್ತದೆ ಮತ್ತು ಕೈಕಾಲುಗಳ ನಷ್ಟಕ್ಕೆ ಕಾರಣವಾಗುತ್ತದೆ. ಸೋಂಕಿತ ವ್ಯಕ್ತಿಯು ಸ್ನಾಯು ದೌರ್ಬಲ್ಯ ಮತ್ತು ಕಳಪೆ ದೃಷ್ಟಿಯಂತಹ ಇತರ ಸೂಚನೆಗಳನ್ನು ಅನುಭವಿಸಬಹುದು.ಈ ರೋಗವನ್ನು ಹ್ಯಾನ್ಸೆನ್ಸ್ ಕಾಯಿಲೆ ಎಂದೂ ಕರೆಯುತ್ತಾರೆ, ನಾರ್ವೇಜಿಯನ್ ವೈದ್ಯ ಗೆರ್ಹಾರ್ಡ್ ಹೆನ್ರಿಕ್ ಅರ್ಮೌರ್ ಹ್ಯಾನ್ಸೆನ್ ಅವರ ಹೆಸರನ್ನು ಇಡಲಾಗಿದೆ, ಅವರು ಕುಷ್ಠರೋಗವನ್ನು ಉಂಟುಮಾಡುವ ಬ್ಯಾಕ್ಟೀರಿಯಾವನ್ನು ಗುರುತಿಸಲು ಹೆಸರುವಾಸಿಯಾಗಿದ್ದಾರೆ.ರೋಗದ ಬಗ್ಗೆ, ವಿಶೇಷವಾಗಿ ಅದರ ಸಾಮಾಜಿಕ-ಆರ್ಥಿಕ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು, ಫ್ರೆಂಚ್ ಲೋಕೋಪಕಾರಿ ರೌಲ್ ಫೋಲೆರೊ ಅವರು 1954 ರಲ್ಲಿ ವಿಶ್ವ ಕುಷ್ಠರೋಗ ದಿನವನ್ನು ಸ್ಥಾಪಿಸಿದರು. ಭಾರತದಲ್ಲಿ, ಈ ದಿನವನ್ನು ಜನವರಿ 30 ರಂದು ಆಚರಿಸಲಾಗುತ್ತದೆ - ವಿಶ್ವ ಶಾಂತಿಯ ಅಪೊಸ್ತಲ ಮಹಾತ್ಮ ಗಾಂಧಿಯವರ ಮರಣ ವಾರ್ಷಿಕೋತ್ಸವ. ರೋಗದಿಂದ ಬಳಲುತ್ತಿರುವ ಜನರ ಬಗ್ಗೆ ಅವರ ಅಚಲ ಸಹಾನುಭೂತಿಯನ್ನು ಗೌರವಿಸಿ.ಇಂದು ಸುಲಭವಾಗಿ ಗುಣಪಡಿಸಬಹುದಾದರೂ ಮತ್ತು ಗ.ಖ. ನಂತಹ ಅಭಿವೃದ್ಧಿ ಹೊಂದಿದ ದೇಶಗಳಲ್ಲಿ ಅಪರೂಪವಾಗಿದ್ದರೂ, ರೋಗವು ಕಳಂಕದಿಂದ ಸುತ್ತುವರಿದಿದೆ. ಗರಿಷ್ಠ ಸಂಖ್ಯೆಯ ಪ್ರಕರಣಗಳು ಕಂಡುಬರುವ ಭಾರತ, ಬ್ರೆಜಿಲ್ ಮತ್ತು ಇಂಡೋನೇಷ್ಯಾದಲ್ಲಿ ಇದು ವಿಶೇಷವಾಗಿ ಸತ್ಯವಾಗಿದೆ. ಸೋಂಕಿತ ಜನರು ಸಾಮಾನ್ಯವಾಗಿ ತಾರತಮ್ಯ ಮತ್ತು ಬಹಿಷ್ಕಾರಕ್ಕೆ ಒಳಗಾಗುತ್ತಾರೆ, ಇದು ಸರಿಯಾದ ವೈದ್ಯಕೀಯ ಆರೈಕೆ, ಚಿಕಿತ್ಸೆ ಮತ್ತು ಮೂಲಭೂತ ಮಾನವ ಹಕ್ಕುಗಳ ನಿರಾಕರಣೆಯ ಪ್ರವೇಶದ ಕೊರತೆಗೆ ಕಾರಣವಾಗುತ್ತದೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆಸೆ ಮತ್ತು ಭಾವನೆಗಳು ಈಡೇರುವುದು, ತಂದೆಯ ಬಂಧುಗಳಿಂದ ನಷ್ಟ,

**ವೃಷಭ:** ಹತ್ತಿರದ ಪ್ರಯಾಣ, ರಾಜಕೀಯ ವ್ಯಕ್ತಿಗಳ ಭೇಟಿ, ಆಸ್ತಿಯಿಂದ ಲಾಭ. ಸಹಕಾರ, ಅನಿರೀಕ್ಷಿತ ಧನಾಗಮನ.

**ಮಿಥುನ:** ಧನ ಮತ್ತು ಉದ್ಯೋಗ ನಷ್ಟ, ಕುಟುಂಬದಲ್ಲಿ ವಾಗ್ವಾದಗಳು, ಪತ್ರ ವ್ಯವಹಾರಗಳಿಗೆ ಅನುಕೂಲ.

**ಕಟಕ:** ಸ್ವಂತ ಉದ್ಯಮದವರಿಗೆ ಅನುಕೂಲ, ಧಾರ್ಮಿಕ ಚಿಂತನೆ, ಸರ್ಕಾರಿ ಅಧಿಕಾರಿಗಳಿಂದ ನಷ್ಟ,

**ಸಿಂಹ:** ನಷ್ಟದ ಪ್ರಮಾಣ ಅಧಿಕ, ಬಡ್ತಿ ಮತ್ತು ಪ್ರಶಂಸೆ, ತಂದೆಯಿಂದ ಅನುಕೂಲ.

**ಕನ್ಯಾ:** ಆಸ್ತಿ ನಷ್ಟ, ಉನ್ನತ ಅಧಿಕಾರಿಗಳಿಗೆ ನಷ್ಟ, ದಾಂಪತ್ಯ ಸಮಸ್ಯೆ ಅಧಿಕ. ಉಪಟಳ, ಆರೋಗ್ಯದಲ್ಲಿ ಚೇತರಿಕೆ.

**ತುಲಾ:** ಉದ್ಯೋಗ ಲಾಭ, ಕೆಲಸ ಕಾರ್ಯಗಳಲ್ಲಿ ಜಯ, ಶತ್ರು ದಮನ, ಋಣ ರೋಗ ಬಾಧೆಗಳಿಂದ ಮುಕ್ತಿ. ದಾಂಪತ್ಯದಲ್ಲಿ ಕಿರಿಕಿರಿ.

**ವೃಶ್ಚಿಕ:** ಪ್ರಯಾಣ ಮಾಡುವ ಸಂದರ್ಭ, ದೂರ ಪ್ರದೇಶಕ್ಕೆ ತೆರಳುವಿರಿ, ರಾಜಕೀಯ ವ್ಯಕ್ತಿಗಳಿಂದ ಅನುಕೂಲ. ವ್ಯಾಪಾರ ವ್ಯವಹಾರದಲ್ಲಿ ಪ್ರಗತಿ,

**ಧನಸ್ಸು:** ಹಣ ದೊರಕುವುದು, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ಮನೆ ವಾತಾವರಣದಲ್ಲಿ ಆತಂಕ, ಆರೋಗ್ಯ ವ್ಯತ್ಯಾಸ.

**ಮಕರ:** ಶುಭಕಾರ್ಯ ರದ್ದಾಗುವ ಸಂಭವ, ಸ್ನೇಹಿತರು ದೂರ, ಉನ್ನತ ಅಧಿಕಾರಿಗಳಿಂದ ಅಂತರ.

**ಕುಂಭ:** ಪಾಲುದಾರಿಕೆ ವ್ಯವಹಾರಕ್ಕಾಗಿ ಸಾಲ, ದಾಂಪತ್ಯ ಸಮಸ್ಯೆ ಉಲ್ಬಣ, ಮಾತಿನಿಂದ ತೊಂದರೆ.

**ಮೀನ:** ಗರ್ಭಿಣಿಯರು ಎಚ್ಚರಿಕೆ, ಮನೋರೋಗಗಳ ಅಧಿಕ, ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ. ಅಪವಾದ, ದೂರ ಪ್ರಯಾಣದಲ್ಲಿ ನಷ್ಟ.

## ಪುಟ್ಟರಂಗಶೆಟ್ಟಿಗೆ ಒಲಿದ ಎಂಎಸ್ಐಎಲ್ ಅಧ್ಯಕ್ಷ ಸ್ಥಾನ



**ಚಾಮರಾಜನಗರ:** ರಾಜ್ಯ ಸರ್ಕಾರವು ಶುಕ್ರವಾರ 34 ನಿಗಮ ಮಂಡಳಿಗಳ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವ ಶಾಸಕರ ಪೈಕಿ ಚಾಮರಾಜನಗರದ ಶಾಸಕ ಸಿ.ಪುಟ್ಟರಂಗಶೆಟ್ಟಿ ಕೂಡ ಇದ್ದಾರೆ.

ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (ಎಂಎಸ್ಐಎಲ್) ಅಧ್ಯಕ್ಷರನ್ನಾಗಿ ಅವರನ್ನು ಸರ್ಕಾರ ನೇಮಿಸಿದೆ.

ಪಾನೀಯ, ಮುದ್ರಣ ಕಾಗದ, ಚಿಟ್ ಫಂಡ್, ಮರಳು, ಕೈಗಾರಿಕಾ ಉತ್ಪನ್ನಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತೊಡಗಿಕೊಂಡಿರುವ ಈ ಸಂಸ್ಥೆಯು ಸರ್ಕಾರಕ್ಕೆ ಉತ್ತಮ ಆದಾಯ ತರುವ ನಿಗಮಗಳಲ್ಲಿ ಒಂದಾಗಿದೆ. ಪ್ರಮುಖ ನಿಗಮದ ಅಧ್ಯಕ್ಷ ಸ್ಥಾನವನ್ನು ಪಡೆಯುವಲ್ಲಿ ಪುಟ್ಟರಂಗಶೆಟ್ಟಿಯವರು ಯಶಸ್ಸು ಕಂಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಪುಟ್ಟರಂಗಶೆಟ್ಟಿ ಅವರಿಗೆ ಸರ್ಕಾರ ರಚನೆಯಾದ ಸಂದರ್ಭದಲ್ಲಿ ಕೊನೆ ಕ್ಷಣದಲ್ಲಿ ಸಚಿವ ಸ್ಥಾನ ತಪ್ಪಿತ್ತು. ಆ ಬಳಿಕ ಅವರಿಗೆ ಉಪ ಸಭಾಧ್ಯಕ್ಷರ ಹುದ್ದೆ ವಹಿಸುವಂತೆ ಸೂಚಿಸಲಾಗಿತ್ತು. ಆದರೆ, ಕ್ಷೇತ್ರದವರೊಂದಿಗೆ ಒಡನಾಟ ಕಡಿಮೆಯಾಗುತ್ತದೆ ಎಂಬ ಕಾರಣ ಹೇಳಿ, ಉಪಸಭಾಧ್ಯಕ್ಷ ಸ್ಥಾನವನ್ನು ಅವರು ಒಪ್ಪಿರಲಿಲ್ಲ.

ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ಸಿಗಲಿದೆ ಎಂದು ಹೇಳಲಾಗಿತ್ತು. ಆದರೆ, ಈಗ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ಅವರಿಗೆ ದೊರಕಿದೆ. ಸಂಪುಟ ದರ್ಜೆಯ ಸ್ಥಾನಮಾನವೇ ಅವರಿಗೆ ಸಿಗಲಿದೆ.

ಲಾಬಿ ಮಾಡಿದ್ದರು: ನಿಗಮ ಮಂಡಳಿ ಅಧ್ಯಕ್ಷ ಸ್ಥಾನದ ಬಗ್ಗೆ ಪುಟ್ಟರಂಗಶೆಟ್ಟಿ ಒಲವು ಹೊಂದಿಲ್ಲ. ಹಾಗಾಗಿ, ಸಂಪುಟ ವಿಸ್ತರಣೆ ಅಥವಾ ಪುನರ್ ರಚನೆ ಸಂದರ್ಭದಲ್ಲಿ ಅವರನ್ನು ಸಿದ್ದರಾಮಯ್ಯ ಪರಿಗಣಿಸಲಿದ್ದಾರೆ ಎಂದು ಹೇಳಲಾಗಿತ್ತು.

ಆದರೆ, ನಿಗಮ ಮಂಡಳಿ ಕೊಟ್ಟರೆ ಪ್ರಮುಖ ನಿಗಮದ ಹೊಣೆಯನ್ನೇ ವಹಿಸಬೇಕು ಎಂದು ಪುಟ್ಟರಂಗಶೆಟ್ಟಿ ಸಿದ್ದರಾಮಯ್ಯ ಅವರಿಗೆ ತಿಳಿಸಿದ್ದರು. ಸಣ್ಣ ಪುಟ್ಟ ನಿಗಮಗಳಿಗೆ ನೇಮಕ ಮಾಡದಂತೆ ಮನವಿ ಮಾಡಿದ್ದರು ಎಂದು ಅವರ ಆಪ್ತ ಮೂಲಗಳು ತಿಳಿಸಿವೆ.

ಸಿದ್ದರಾಮಯ್ಯ ಅವರು ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಪುಟ್ಟರಂಗಶೆಟ್ಟಿ ಅವರು ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿದ್ದರು. ಕಾಂಗ್ರೆಸ್ ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಅವರು ಸಚಿವರೂ ಆಗಿದ್ದರು.

2008ರಿಂದ ಸತತ ನಾಲ್ಕು ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಅವರು ಉಪ್ಪಾರ ಸಮುದಾಯದ ಏಕೈಕ ಶಾಸಕರು. ಈಗ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ದೊರೆತಿರುವುದರಿಂದ ಅವರಿಗೆ ಮುಂದೆ ಸಚಿವ ಸ್ಥಾನ ಸಿಗುವುದು ಅನುಮಾನ ಎಂದು ಹೇಳುತ್ತಾರೆ ಕಾಂಗ್ರೆಸ್ ಮುಖಂಡರು.

ಸಂಜೆ ಮುಗಿಲು
ಭಾನುವಾರ
28.1.2024



# ವಿಶ್ವಸಂಸ್ಥೆಯಲ್ಲಿ ಅಯೋಧ್ಯೆ ರಾಮ ಮಂದಿರ ವಿಷಯ ಪ್ರಸ್ತಾಪಿಸಿ ಪಾಕ್ ಕಿರಿಕ್



ಅಯೋಧ್ಯೆಯಲ್ಲಿ ಅದ್ದೂರಿಯಾಗಿ ರಾಮ ಮಂದಿರದಲ್ಲಿ ಬಾಲರಾಮ ದೇವರ ಪ್ರಾಣ ಪ್ರತಿಷ್ಠಾಪನೆಯಾಗಿದ್ದು,ಇಡೀ ವಿಶ್ವವೇ ಸಂಭ್ರಮಿಸಿದೆ. ಆದರೆ ಪಾಕಿಸ್ತಾನ ಆಕ್ರೋಶದಿಂದ ಕುದಿಯುತ್ತಿದೆ.

ಶ್ರೀರಾಮ ಮಂದಿರ ವಿಚಾರವನ್ನು ವಿಶ್ವಸಂಸ್ಥೆಯಲ್ಲಿ ಪ್ರಸ್ತಾಪಿಸಿ ಕಿರಿಕ್ ಮಾಡಲು ಪ್ರಯತ್ನಿಸಿದೆ.ನ್ಯೂಯಾರ್ಕ್ನಲ್ಲಿ ನಡೆದ ವಿಶ್ವಸಂಸ್ಥೆ ನಾಗರಿಕತೆಯ ಒಕ್ಕೂಟ (ಯುಎನ್ ಅಲೈಯೆನ್ಸ್ ಆಫ್ ಸಿವಿಲೈಸೇಷನ್ಸ್) ರಾಯಭಾರಿಗಳ ಸಭೆಯಲ್ಲಿ ಪಾಕಿಸ್ತಾನದ ವಿಶ್ವಸಂಸ್ಥೆಯ ರಾಯಭಾರಿ ಮುನೀರ್ ಅಕ್ರಮ್, ಅಯೋಧ್ಯೆಯಲ್ಲಿ ರಾಮ ಮಂದಿರದ ಪ್ರತಿಷ್ಠಾಪನೆಯ ವಿಷಯವನ್ನು ಪ್ರಸ್ತಾಪಿಸಿದ್ದು, ಭಾರತದಲ್ಲಿನ ಮುಸ್ಲಿಮರ ಜೀವಕ್ಕೆ ಆತಂಕವಿದ್ದು, ವಿಶ್ವಸಂಸ್ಥೆ ಮಧ್ಯೆ ಪ್ರವೇಶಿಸಬೇಕು ಎಂದು ಮನವಿ ಮಾಡಿದರು. ಎಓಸಿಯ ಅಧಿಕಾರಿ ಮಿಗುಯೆಲ್ ಏಂಜೆಲ್ ಮೊರಾಟಿನೋಸ್ ಅವರಿಗೆ ಬರೆದ ಪತ್ರದಲ್ಲಿ ಅಕ್ರಮ್, ರಾಮ ಮಂದಿರದ ನಿರ್ಮಾಣ ಮತ್ತು ಪ್ರತಿಷ್ಠೆಯನ್ನು ಖಂಡಿಸಿದ್ದಾರೆ.ಈ ಪ್ರವೃತ್ತಿಯು ಭಾರತೀಯ ಮುಸ್ಲಿಮರ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಯೋಗಕ್ಷೇಮಕ್ಕೆ, ಸಾಮರಸ್ಯ ಮತ್ತು ಶಾಂತಿಗೆ ಗಮನಾರ್ಹ ಅಪಾಯವನ್ನುಂಟುಮಾಡುತ್ತದೆ ಎಂದು ಅವರು ಇಸ್ಲಾಮಿಕ್ ಸಹಕಾರ ಸಂಘಟನೆಯ ಸಭೆಯಲ್ಲಿ ಹಂಚಿಕೊಂಡ ಪತ್ರದಲ್ಲಿ ಆರೋಪಿಸಿದ್ದಾರೆ

ಭಾರತದ ಆಂತರಿಕ ವ್ಯವಹಾರಗಳಲ್ಲಿ ಪಾಕಿಸ್ತಾನವು ಹಸ್ತಕ್ಷೇಪ ನಡೆಸುತ್ತಿರುವುದು ಇದು ಮೊದಲಲ್ಲ. ಈ ಹಿಂದೆ ವಿಶ್ವಸಂಸ್ಥೆಯ ವೇದಿಕೆಯಲ್ಲಿ ಕಾಶ್ಮೀರ ಸಮಸ್ಯೆಯನ್ನು ಅಂತರಾಷ್ಟ್ರೀಯಗೊಳಿಸುವ ಅದರ ಪ್ರಯತ್ನ ವಿಫಲವಾಗಿತ್ತು.

## ಜ್ಞಾನವಾಪಿ ಮಸೀದಿಯನ್ನು ಹಿಂದೂಗಳಿಗೆ ಒಪ್ಪಿಸಿ

**ನವದೆಹಲಿ :** ಜ್ಞಾನವಾಪಿ ಮಸೀದಿ ಸ್ಥಳವನ್ನು ಹಿಂದೂಗಳಿಗೆ ಒಪ್ಪಿಸಿ ಎಂದು ಮುಸ್ಲಿಂ ಸಮಿತಿಗೆ ವಿಶ್ವಹಿಂದೂ ಪರಿಷತ್ ಅಧ್ಯಕ್ಷ ಅಲೋಕ್ ಕುಮಾರ್ ಮನವಿ ಮಾಡಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ, ಕಾಶಿ ವಿಶ್ವನಾಥ ಮಂದಿರದ ಆವರಣದಲ್ಲಿರುವ ಜ್ಞಾನವಪಿ ಮಸೀದಿ ಹಿಂದೂ ದೇವಾಲಯವಾಗಿತ್ತು ಅನ್ನೋದಕ್ಕೆ ಭಾರತೀಯ ಪುರಾತತ್ವ ಇಲಾಖೆ ಸಮೀಕ್ಷಾ ವರದಿಯಲ್ಲಿ ಸಾಬೀತಾಗಿದೆ ಎಂದು ಹೇಳಿದ್ದಾರೆ. ಜ್ಞಾನವಪಿ ಮಸೀದಿ ಪರವಾಗಿ ಕೋರ್ಟ್ನಲ್ಲಿ ಕಾನೂನು ಹೋರಾಟ ಮಾಡುತ್ತಿರುವ ಇಂತೆಜಮಿಯಾ ಮುಸ್ಲಿಮ್ ಸಮಿತಿ ಗೌರವಯುತವಾಗಿ ಮಸೀದಿಯನ್ನು ಬೇರೆಡೆಗೆ ಸ್ಥಳಾಂತರ ಮಾಡಬೇಕು. ಮೂಲ ಸ್ಥಳವನ್ನು ಹಿಂದೂಗಳಿಗೆ ನೀಡಬೇಕು ಎಂದು ತಿಳಿಸಿದ್ದಾರೆ. ಕಾಶಿ ವಿಶ್ವನಾಥನ ಭವ್ಯ ಮಂದಿರನ್ನು ಒಡೆದು ಅದರ ಗೋಡೆಗಳ ಮೇಲೆ ಮಸೀದಿಯನ್ನು ನಿರ್ಮಿಸಲಾಗಿದೆ. ಭಾರತೀಯ ಪುರಾತತ್ವ ಇಲಾಖೆ ಸಮೀಕ್ಷೆ ನಡೆಸಿ ಹಿಂದೂ ದೇವಲಾಯದ ಲಿಂಗ, ಮೂರ್ತಿ, ಕಂಬಗಳು ಹಾಗೂ ಶಾಸನಗಳನ್ನು ಪತ್ತೆ ಹಚ್ಚಿದೆ. ಹೀಗಾಗಿ ಹಿಂದೂ ದೇವಾಲಯದ ಮೇಲೆ ಮಸೀದಿ ನಿಂತಿದೆ ಅನ್ನೋದು ಸ್ಪಷ್ಟವಾಗಿದೆ ಎಂದು ಅವರು ಹೇಳಿದ್ದಾರೆ.



## ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಗೆ ಝೆಡ್+ ಭದ್ರತೆ

**ನವದೆಹಲಿ:** ಎಸ್ಎಫ್ಐ ವಿದ್ಯಾರ್ಥಿ ಸಂಘಟನೆಯ ಕಾರ್ಯಕರ್ತರು ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ವಿರುದ್ದ ಕಪ್ಪು ಬಾವುಟ ಪ್ರದರ್ಶಿಸಿ ಪ್ರತಿಭಟಿಸಿದ್ದಕ್ಕೆ ಖಾನ್, ರಸ್ತೆಯಲ್ಲಿ ಕುಳಿತು ರಾಜ್ಯ ಸರ್ಕಾರ, ಪೊಲೀಸ್ ವ್ಯವಸ್ಥೆ ವಿರುದ್ಧ ಪ್ರತಿಭಟಿಸಿದ್ದರು.



ಈ ಹಿನ್ನಲೆಯಲ್ಲಿ ಆರಿಫ್ ಮೊಹಮ್ಮದ್ ಖಾನ್ ಮತ್ತು ಅವರ ನಿವಾಸಕ್ಕೆ ಸಿಆರ್ಪಿಎಫ್ ಪಡೆಗಳ ಝಡ್ + ಭದ್ರತೆಯನ್ನು ಒದಗಿಸಲು ನಿರ್ಧರಿಸಿದೆ ಎಂದು ಕೇಂದ್ರ ಗೃಹ ಸಚಿವಾಲಯವು ಕೇರಳ ರಾಜಭವನಕ್ಕೆ ತಿಳಿಸಿದೆ.

ಇದಕ್ಕೂ ಮುನ್ನ ಶನಿವಾರ, ರಾಜ್ಯಪಾಲ ಖಾನ್ ತಮ್ಮ ವಾಹನದಿಂದ ಇಳಿದು ರಸ್ತೆ ಬದಿಯ ಅಂಗಡಿಯ ಮುಂದೆ ಕುಳಿತು ಕೊಲ್ಲಂ ಜಿಲ್ಲೆಯ ನೀಲಮೇಲ್ನಲ್ಲಿ ತಮ್ಮ ವಿರುದ್ಧ ಪ್ರತಿಭಟನೆ ನಡೆಸಿದ ಎಸ್ ಎಫ್ಐ ಕಾರ್ಯಕರ್ತರನ್ನ ಬಂಧಿಸುವಂತೆ ಒತ್ತಾಯಿಸಿದರು.

ಆಡಳಿತಾರೂಢ ಸಿಪಿಐ (ಎಂ) ನ ವಿದ್ಯಾರ್ಥಿ ಘಟಕ ಸ್ಟೂಡೆಂಟ್ ಫೆಡರೇಶನ್ ಆಫ್ ಇಂಡಿಯಾದ ಹಲವಾರು ಕಾರ್ಯಕರ್ತರು ರಾಜ್ಯಪಾಲರು ಸಮಾರಂಭಕ್ಕಾಗಿ ಹತ್ತಿರದ ಕೊಟ್ಟಾರಕ್ಕರಕ್ಕೆ ತೆರಳುತ್ತಿದ್ದಾಗ ಅವರ ವಿರುದ್ಧ ಕಪ್ಪು ಬಾವುಟ ಪ್ರತಿಭಟನೆ ನಡೆಸಿದರು.

## ಮೋದಿ ಫ್ಯಾಕ್ಟರ್‌ನಿಂದ ಲೋಕಸಭೆ ಚುನಾವಣೆಗೂ ಮುನ್ನವೇ INDIA ಮೈತ್ರಿಕೂಟ ವಿಧ್ವ

**ಬೆಂಗಳೂರು:** ಲೋಕಸಭೆ ಚುನಾವಣೆ ಘೋಷಣೆಯಾಗುವ ಕಾಂಗ್ರೆಸ್ ನೇತೃತ್ವದ ವಿಪಕ್ಷ ಮೈತ್ರಿಕೂಟ ಐಎನ್‌ಡಿಐಎ ಬಣ ವಿಧ್ವಗೊಳ್ಳಲು ಆರಂಭಿಸಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಟೀಕಿಸಿದ್ದಾರೆ.



ನಗರದಲ್ಲಿ ಶನಿವಾರ ನಡೆದ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಾಂಗ್ರೆಸ್ ತನ್ನ ವೋಟ್ ಬ್ಯಾಂಕ್ ಉಳಿಸಿಕೊಳ್ಳಲು ಹಲವು ವರ್ಷಗಳಿಂದ ಅಲ್ಪಸಂಖ್ಯಾತರ ಓಲೈಕೆಯನ್ನು ಮುಂದುವರೆಸಿದೆ. ಪ್ರಧಾನಿ ನರೇಂದ್ರ ಮೋದಿ ಕಳೆದ 10 ವರ್ಷಗಳಿಂದ ತುಷ್ಟೀಕರಣ ರಾಜಕಾರಣ ಮಾಡದೆ ಉತ್ತಮ ಆಡಳಿತ ನಡೆಸಿರುವುದು ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟದಿಂದ ಪಕ್ಷಗಳು ದೂರವಾಗಲು ಕಾರಣವಾಗಿದೆ ಎಂದರು.

ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಕಾಂಗ್ರೆಸ್ ಗೆ ಬಾಗಿಲು ಮುಚ್ಚಿದ್ದಾರೆ. ಮೈತ್ರಿ ಪಾಲುದಾರ ಜೆಡಿಯು ಬಿಹಾರದಲ್ಲಿ ಅದರಿಂದ ಓಡಿಹೋಗುತ್ತಿದೆ ಮತ್ತು ಕೇರಳದಲ್ಲಿ ಕಮ್ಯುನಿಸ್ಟರು ಬೇರ್ಪಡುತ್ತಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ 400 ಸ್ಥಾನ ಗೆಲ್ಲುವ ಮೂಲಕ ಮೂರನೇ ಬಾರಿಗೆ ಮೋದಿ ಪ್ರಧಾನಿಯಾಗಲಿದ್ದಾರೆ ಎಂದು ಭವಿಷ್ಯ ನುಡಿದರು.

ಕರ್ನಾಟಕಕ್ಕೆ ನೀಡಬೇಕಿರುವ ಜಿಎಸ್‌ಟಿ ಪರಿಹಾರವನ್ನು ಕೇಂದ್ರ ಬಿಡುಗಡೆ ಮಾಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ನೀಡಿದ ಅವರು, 2014 ರವರೆಗೆ ರಾಜ್ಯಕ್ಕೆ 11 ಸಾವಿರ ಕೋಟಿ ರೂ. ಮತ್ತು 2023 ರಲ್ಲಿ ಮೋದಿ ಸರ್ಕಾರ 30,000 ಕೋಟಿ ರೂ.ಗಳನ್ನು ಮಂಜೂರು ಮಾಡಿತು, ಆದರೆ ರಾಜ್ಯ ಸರ್ಕಾರ ಅದನ್ನು ಬಳಸಿಕೊಂಡಿಲ್ಲ ಎಂದು ಆರೋಪಿಸಿದರು.

ಮಧ್ಯಪ್ರದೇಶ, ಛತ್ತೀಸ್‌ಗಢ ಮತ್ತು ರಾಜಸ್ಥಾನ ವಿಧಾನಸಭಾ ಚುನಾವಣೆಯಲ್ಲಿ ತಿರಸ್ಕರಿಸಿದಂತೆಯೇ ಕರ್ನಾಟಕದಲ್ಲಿ ಕಾಂಗ್ರೆಸ್ ನ್ನು ಬೇರುಸಹಿತ ಕಿತ್ತುಹಾಕಲು ಮತ್ತು ಲೋಕಸಭೆ ಚುನಾವಣೆಗೆ ಮುಂಚಿತವಾಗಿ ಅದರ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಗ್ಯಾರಂಟಿ ವಿಫಲತೆ ಕುರಿತು ಜಾಗೃತಿ ಮೂಡಿಸಲು ಅವರು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

## ಇರಾನ್–ಪಾಕ್ ಗಡಿಭಾಗದ ಬಳಿ 9 ವಿದೇಶೀಯರ ಹತ್ಯೆ

**ಟೆಹ್ರಾನ್:** ಆಗ್ನೇಯ ಇರಾನ್ನಲ್ಲಿ ಪಾಕಿಸ್ತಾನದ ಗಡಿಯ ಸನಿಹ ಗುರುತಿಸಲಾಗದ ಬಂದೂಕುಧಾರಿಗಳು 9 ವಿದೇಶಿ ಪ್ರಜೆಗಳನ್ನು ಹತ್ಯೆ ಮಾಡಿದ್ದಾರೆ ಎಂದು ಇರಾನ್ನ ಮಾಧ್ಯಮಗಳು ವರದಿ ಮಾಡಿವೆ. ಉಭಯ ದೇಶಗಳ ನಡುವೆ ಮಾರಣಾಂತಿಕ ಗಡಿಯಾಚೆಗಿನ ದಾಳಿ ಪ್ರಕರಣದ ಒಂದು ವಾರದ ಬಳಿಕ ಈ ದುರಂತ ನಡೆದಿದೆ. 'ಪ್ರತ್ಯಕ್ಷದರ್ಶಿಗಳ ಪ್ರಕಾರ, ಸಿಸ್ತಾನ್–ಬಲೂಚಿಸ್ತಾನ್ ಪ್ರಾಂತದ ನೆರೆಯ ಸಿರ್ಖಾನ್ ನಗರದ ಮನೆಯೊಂದಕ್ಕೆ ನುಗ್ಗಿದ ಅಪರಿಚಿತ ಸಶಸ್ತ್ರ ವ್ಯಕ್ತಿಗಳು ಮನೆಯಲ್ಲಿದ್ದ 9 ವಿದೇಶೀಯರನ್ನು ಹತ್ಯೆ ಮಾಡಿ ಪರಾರಿಯಾಗಿದ್ದಾರೆ. ಇದುವರೆಗೆ ಯಾವುದೇ ಸಂಘಟನೆ ಹತ್ಯೆಯ ಹೊಣೆ ವಹಿಸಿಕೊಂಡಿಲ್ಲ' ಎಂದು ಮೆಹರ್ ಸುದ್ದಿಸಂಸ್ಥೆ ವರದಿ ಮಾಡಿದೆ.

## 6ನೇ ಬಜೆಟ್ ಮಂಡಿಸಲಿರುವ ವಿತ್ತಸಚಿವೆ ಸೀತಾರಾಮನ್

ನವದೆಹಲಿ: ಫೆಬ್ರವರಿ 1 ರಂದು ವಿತ್ತಸಚಿವೆ ನಿರ್ಮಲಾ ಸೀತಾರಾಮನ್ ಮಧ್ಯಂತರ ಬಜೆಟ್ ಮಂಡಿಸಲಿದ್ದು, ಆ ಮೂಲಕ ಈ ಮುಂಚೆ ಹಣಕಾಸು ಸಚಿವರಾಗಿದ್ದು ಸತತ ಐದು ಬಜೆಟ್ ಮಂಡಿಸಿದ ಮನಮೋಹನ್ ಸಿಂಗ್, ಅರುಣ್ ಜೇಟ್ಲಿ, ಪಿ ಚಿದಂಬರಂ ಮತ್ತು ಯಶವಂತ್ ಸಿನ್ಹಾರ ದಾಖಲೆಗಳನ್ನು ಹಿಂದಿಕ್ಕಲಿದ್ದಾರೆ. ಸೀತಾರಾಮನ್ ಮಂಡಿಸಲಿರುವ 2024–25 ಹಣಕಾಸು ವರ್ಷದ ಮಧ್ಯಂತರ ಬಜೆಟ್ ಅನ್ನು ಲೋಕಸಭಾ ಚುನಾವಣೆಯ ನಂತರ ಸರ್ಕಾರ ರಚನೆಯಾಗುವವರೆಗೆ ಪಾಲಿಸಲಾಗುತ್ತದೆ. ಲೋಕಸಭೆಯ ಚುನಾವಣೆ ಹತ್ತಿರದಲ್ಲಿರುವ ಸಂದರ್ಭದಲ್ಲಿ ಪ್ರಮುಖ ನೀತಿ ಬದಲಾವಣೆ, ಪ್ರಮುಖ ಯೋಜನೆಗಳ ಘೋಷಣೆ ಸಾಧ್ಯತೆ ಕಡಿಮೆಯಿದ್ದು, ಕಳೆದ ತಿಂಗಳಲ್ಲಿ ಸೀತಾರಾಮನ್ ಇದರ ಸ್ಪಷ್ಟ ಸೂಚನೆ ನೀಡಿದ್ದರು. ಚುನಾವಣಾನಂತರ ರಚನೆಯಾಗುವ ಸರ್ಕಾರ 2024–25ರ ಪೂರ್ಣ ಬಜೆಟ್ ಮಂಡಿಸಲಿರುವುದರಿಂದ ಮಧ್ಯಂತರ ಬಜೆಟ್ ಪ್ರಮುಖ ನೀತಿ ಘೋಷಣೆಗಳನ್ನು ಒಳಗೊಂಡಿರುವುದಿಲ್ಲ. 2019ರ ಸಾರ್ವತ್ರಿಕ ಚುನಾವಣೆಯ ನಂತರ ಹಣಕಾಸು ಸಚಿವೆಯಾದ ನಿರ್ಮಲಾ ಸೀತಾರಾಮನ್, ಇಂದಿರಾ ಗಾಂಧಿಯ ನಂತರ ಬಜೆಟ್ ಮಂಡಿಸಿದ ಎರಡನೇ ಮಹಿಳೆ.



## ಮಂಗಳ ಗ್ರಹದಲ್ಲಿ ಹಾರಾಟ ಸ್ಥಗಿತಗೊಳಿಸಿದ ನಾಸಾದ 'ಇಂಜೆನ್ಯುಯಿಟಿ' ನೌಕೆ

**ವಾಷಿಂಗ್ಟನ್:** ಮಂಗಳ ಗ್ರಹದ ಅಧ್ಯಯನಕ್ಕೆ ತೆರಳಿದ್ದ ಅಮೆರಿಕದ ಬಾಹ್ಯಾಕಾಶ ಸಂಸ್ಥೆ ನಾಸಾದ ಬಾಹ್ಯಾಕಾಶ ನೌಕೆ 'ಇಂಜೆನ್ಯುಯಿಟಿ' ತನ್ನ ಹಾರಾಟವನ್ನು ನಿಲ್ಲಿಸಿದೆ. ಹೌದು.. 'ನಾಸಾ'ದ ಪುಟ್ಟ ಹೆಲಿಕಾಪ್ಟರ್ 'ಇಂಜೆನ್ಯುಯಿಟಿ' ಮಂಗಳ ಗ್ರಹದಲ್ಲಿ ತನ್ನ ಕಡೆಯ ಹಾರಾಟವನ್ನು ನಡೆಸಿ ಹಾರಾಟ ಸ್ಥಗಿತಗೊಳಿಸಿದೆ. ಈ ಬಗ್ಗೆ ಮಾಹಿತಿ ನೀಡಿರುವ ನಾಸಾ, 1.8 ಕೆ.ಜಿ ತೂಕದ 'ಇಂಜೆನ್ಯುಯಿಟಿ' ಮತ್ತೆಂದೂ ಹಾರಾಟ ನಡೆಸುವುದಿಲ್ಲ, ನೌಕೆಯ ರೆಕ್ಕೆಗಳು ಜಖಂಗೊಂಡಿದ್ದು, ಹೀಗಾಗಿ ಇದರ ಕಾರ್ಯಸ್ಥಗಿತವಾಗಿದೆ. ಪ್ರಸ್ತುತ ಬಿದ್ದಿರುವ ನೌಕೆ ಮಂಗಳ ಗ್ರಹದಲ್ಲಿಯೇ ಇರಲಿದ್ದು, ನಿಯಂತ್ರಣ ಕೊಠಡಿ ಜೊತೆ ಸಂಪರ್ಕದಲ್ಲಿರಲಿದೆ. ಈ ಮೂಲಕ 706 ಕೋಟಿ ರೂ ವೆಚ್ಚದ (85 ಮಿಲಿಯನ್ ಡಾಲರ್) ಯೋಜನೆ ಅಂತ್ಯಗೊಂಡಿದೆ ಎಂದು ನಾಸಾ ಅಧಿಕಾರಿಗಳು ತಿಳಿಸಿದ್ದಾರೆ. 'ಅಲ್ಪಾವಧಿಯ ತಾಂತ್ರಿಕ ಪ್ರಾತ್ಯಕ್ಷಿಕೆ ಉದ್ದೇಶದ 'ಇಂಜೆನ್ಯುಯಿಟಿ', ಸಣ್ಣ ಗಾತ್ರದ ರೊಬೊಟಿಕ್ ಹೆಲಿಕಾಪ್ಟರ್ 2021ರಲ್ಲಿ ಮಂಗಳ ಗ್ರಹಕ್ಕೆ ಕಾಲಿಟ್ಟಿತ್ತು. ಮೂರು ವರ್ಷಗಳಲ್ಲಿ 72 ಬಾರಿ ಹಾರಾಟ ನಡೆಸಿದ್ದು, 19 ಕಿ.ಮೀ. ಕ್ರಮಿಸಿದೆ. ಇದು, ಉದ್ದೇಶಿತ ಯೋಜನೆಗಿಂತಲೂ 14 ಪಟ್ಟು ಅಧಿಕ. 24 ಮೀಟರ್ ಎತ್ತರದಲ್ಲಿ ಗಂಟೆಗೆ 36 ಕಿ.ಮೀ ವೇಗದಲ್ಲಿ ಈ ಹೆಲಿಕಾಪ್ಟರ್ ಕ್ರಮಿಸಿದೆ. ಈ ಅಸಾಧಾರಣ ಹೆಲಿಕಾಪ್ಟರ್ ನಿರೀಕ್ಷಿಸಿದ್ದಕ್ಕಿಂತಲೂ ಎತ್ತರದಲ್ಲಿ ಹಾರಾಟ ನಡೆಸಿದ್ದು, ಭಿನ್ನ ವಾತಾವರಣದಲ್ಲಿಯೂ ತನ್ನ ಸಾಮರ್ಥ್ಯ ನಿರೂಪಿಸಿತ್ತು' ಎಂದು ನಾಸಾದ ಆಡಳಿತಾಧಿಕಾರಿ ಬಿಲ್ ನೆಲ್ಸನ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## 64 ಕೆಜಿ ಗಾಂಜಾದೊಂದಿಗೆ ಮೂವರ ಬಂಧನ

**ಹೈದರಾಬಾದ್**: ಆಂಧ್ರಪ್ರದೇಶದಿಂದ ಬೆಂಗಳೂರಿಗೆ ಗಾಂಜಾ ಸಾಗಾಟ ಮಾಡುತ್ತಿದ್ದ ಜಾಲವನ್ನು ಚೌಟುಪ್ಪಲ್ ಪೊಲೀಸರೊಂದಿಗೆ ಮಲ್ಕಾಜ್‌ಗಿರಿ ವಿಶೇಷ ಕಾರ್ಯಾಚರಣೆ ತಂಡ ಭೇದಿಸಿದ್ದು, ಮೂವರನ್ನು ಬಂಧಿಸಿದ್ದು, ಅವರಿಂದ 64 ಕೆಜಿ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ.



ಫಯಾಸ್ (29) ಅನಂತ ಮೋಹನ್ (25) ಸೈಯದ್ (39) ಬಂಧಿತ ಆರೋಪಿಗಳು. ಇವರೆಲ್ಲರೂ ಕೇರಳದ ವಿವಿಧ ಜಿಲ್ಲೆಗಳಿಂದ ಬಂದವರಾಗಿದ್ದಾರೆ. ಅವರಲ್ಲಿ ಒಬ್ಬರು ಬೆಂಗಳೂರು ಮೂಲದ ಪೆಡ್ಲರ್‌ನ ಸಂಪರ್ಕಕ್ಕೆ ಬಂದು ಉಳಿದವರನ್ನು ಪರಿಚಯಿಸಿದರು ಎನ್ನಲಾಗಿದೆ.

ಆಂಧ್ರಪ್ರದೇಶದ ವಿಶಾಖಪಟ್ಟಣಂ ಜಿಲ್ಲೆಯ ಅರಕುವಿನಿಂದ ಬೆಂಗಳೂರಿಗೆ ಗಾಂಜಾ ಸಾಗಿಸುವ ವೇಳೆ ಬೆಂಗಳೂರಿನ ಪೆಡ್ಲರ್ ಮೂವರು ಸಾಗಣೆದಾರರಿಗೆ ಭಾರಿ ಹಣ ನೀಡುವುದಾಗಿ ಭರವಸೆ ನೀಡಿದ್ದರು. ಇದಕ್ಕಾಗಿ ಯೋಜನೆ ರೂಪಿಸಿ, ಡ್ರಗ್ಸ್ ಇರುವ ಕಾರನ್ನು ಸೈಯದ್ ಚಾಲನೆ ಮಾಡಲು ಮತ್ತು ಫಯಾಸ್, ಮೋಹನ್ ಎರಡನೇ ಕಾರಿನಲ್ಲಿ ತೆರಳಲು ಸೂಚನೆ ನೀಡಲಾಗಿತ್ತು.

ಅದರಂತೆ ಮೂವರು ಆರೋಪಿಗಳು ಜನವರಿ 24ರಂದು ಅರಕುವಿಗೆ ತೆರಳಿ ಗಾಂಜಾ ತುಂಬಿಕೊಂಡು, ಹೈದರಾಬಾದ್ ಮೂಲಕ ಬೆಂಗಳೂರಿಗೆ ತೆರಳುತ್ತಿದ್ದಾಗ ಮಲ್ಕಾಜ್ ಗಿರಿ ಎಸ್‌ಒಟಿ ಮತ್ತು ಚೌಟುಪ್ಪಲ್ ಪೊಲೀಸರು ಅವರ ವಾಹನಗಳನ್ನು ತಡೆದು ತಪಾಸಣೆ ನಡೆಸಿದಾಗ ಗಾಂಜಾ ಪತ್ತೆಯಾಗಿದೆ. ಆರೋಪಿಗಳನ್ನು ಬಂಧಿಸಿ, ಅಕ್ರಮ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

## ಗಾಝಾದಲ್ಲಿ ಯುದ್ಧ ಮುಂದುವರಿಯುತ್ತದೆ? : ನೆತನ್ಯಾಹು

ಗಾಝಾ ಹತ್ಯಾಕಾಂಡಕ್ಕೆ ಸಂಬಂಧಿಸಿದಂತೆ ಅಂತಾರಾಷ್ಟ್ರೀಯ ನ್ಯಾಯಾಲಯದ ಆದೇಶವನ್ನು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ತೀವ್ರವಾಗಿ ಟೀಕಿಸಿದ್ದಾರೆ. ಅವರು ಐಸಿಜೆ ಆದೇಶವನ್ನು ಖಂಡಿಸಿದರು ಮತ್ತು ಅದನ್ನು ಅತಿರೇಕ ಎಂದು ತಳ್ಳಿಹಾಕಿದರು.



ಕೋರ್ಟ್ ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ನಮ್ಮ ದೇಶ ಮತ್ತು ನಮ್ಮ ಜನರನ್ನು ರಕ್ಷಿಸಲು ಅಗತ್ಯವಿರುವ ಯಾವುದೇ ಕ್ರಮವನ್ನು ನಾವು ತೆಗೆದುಕೊಳ್ಳುವುದನ್ನು ಮುಂದುವರಿಸುತ್ತೇವೆ.

''ಇಸ್ರೇಲ್, ಎಲ್ಲಾ ದೇಶಗಳಂತೆ, ತನ್ನನ್ನು ರಕ್ಷಿಸಿಕೊಳ್ಳುವ ಮೂಲಭೂತ ಹಕ್ಕನ್ನು ಹೊಂದಿದೆ. ಅಂತರರಾಷ್ಟ್ರೀಯ ನ್ಯಾಯಾಲಯವು ಈ ಹಕ್ಕನ್ನು ಕಸಿದುಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಇಸ್ರೇಲ್ ತನ್ನ ಪಡೆಗಳು ಗಾಝಾದಲ್ಲಿ ನರಮೇಧ ನಡೆಸದಂತೆ ನೋಡಿಕೊಳ್ಳಬೇಕು ಮತ್ತು ಮಾನವೀಯ ಪರಿಸ್ಥಿತಿಯನ್ನು ಸುಧಾರಿಸಲು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಐಸಿಜೆ ತೀರ್ಪು ನೀಡಿತು. ಆದೇಶವನ್ನು ಎತ್ತಿಹಿಡಿಯುವ ಕ್ರಮಗಳ ಬಗ್ಗೆ ಒಂದು ತಿಂಗಳೊಳಗೆ ವರದಿ ಸಲ್ಲಿಸುವಂತೆ ಐಸಿಜೆ ಇಸ್ರೇಲ್ ಗೆ ಸೂಚಿಸಿದೆ. ಗಾಝಾದಲ್ಲಿ ನಡೆದ ಮಾನವ ದುರಂತದ ಬಗ್ಗೆ ನ್ಯಾಯಾಲಯಕ್ಕೆ ಸಂಪೂರ್ಣ ಅರಿವಿದೆ ಮತ್ತು ನರಮೇಧದ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದೆ ಎಂದು ಐಸಿಜೆ ಅಧ್ಯಕ್ಷ ಜಾನ್ ಡೊನೊಗ್ ಹೇಳಿದ್ದಾರೆ.

## ನೈಟ್ರೋಜನ್ ಗ್ಯಾಸ್ ಬಳಸಿ ಮರಣದಂಡನೆ

ಅಮೆರಿಕ : ಇದೇ ಮೊದಲ ಬಾರಿಗೆ ವ್ಯಕ್ತಿಯೊಬ್ಬನಿಗೆ ನೈಟ್ರೋಜನ್ ಅನಿಲ ಬಳಸಿ ಮರಣ ದಂಡನೆ ನೀಡಿರುವ ಘಟನೆ ಅಮೆರಿಕದ ಅಲ್ಬಾಮಾ ಪ್ರಾಂತ್ಯದಲ್ಲಿ ನಡೆದಿದೆ. ಕೆನೆತ್ ಯುಜಿನಿ ಸ್ಮಿತ್ ಎಂಬ ವ್ಯಕ್ತಿಗೆ ಕೊಲೆ ಆರೋಪದಡಿಯಲ್ಲಿ ಮರಣದಂಡನೆ ವಿಧಿಸಲಾಗಿತ್ತು.

ಈ ರೀತಿಯ ಮರಣ ದಂಡನೆ ಇದೇ ಮೊದಲ ಬಾರಿಗೆ ನಡೆಸಲಾಗುತ್ತಿದ್ದು, ಈ ನಡೆಗೆ ಮಾನವ ಹಕ್ಕು ಹೋರಾಟಗಾರರು ಹಾಗೂ ಮರಣದಂಡನೆ ವಿರೋಧಿ ಸಂಘಟನೆಗಳಿಂದ ಭಾರೀ ಪ್ರತಿರೋಧ ವ್ಯಕ್ತವಾಗಿದೆ. ವಿಶ್ವಸಂಸ್ಥೆ ಕೂಡ ಈ ಕ್ರಿಯೆಯನ್ನು ಅಮಾನವೀಯ ಎಂದು ಕರೆದಿದೆ.

ಜ.25 ಗುರುವಾರದಂದು ಸ್ಮಿತ್ ಗೆ ಮರಣ ದಂಡನೆ ನೀಡಲಾಗಿತ್ತು. 22 ನಿಮಿಷಗಳ ಕಾಲ ಆತನಿಗೆ ನೈಟ್ರೋಜನ್ ಹೈಪೊಕ್ಸಿಯಾ ಎಂಬ ಅನಿಲವನ್ನು ಮಾಸ್ಕ್ ಮೂಲಕ ಊಡಿಸಲಾಗಿತ್ತು. 1982 ರಿಂದ ಇದುವರೆಗೂ ಯುಎಸ್ ಸರ್ಕಾರವು ಅಪರಾಧಿಗಳನ್ನು ಕೊಲ್ಲಲು ಲೀಥಲ್ ಇಂಜೆಕ್ಷನ್ ಬಳಕೆ ಮಾಡುತ್ತಿತ್ತು.

## ಪಾಕಿಸ್ತಾನದಲ್ಲಿ ನ್ಯುಮೋನಿಯಾ: 200ಕ್ಕೂ ಹೆಚ್ಚು ಮಕ್ಕಳು ಬಲಿ

**ಲಾಹೋರ್:** ಕಳೆದ ಮೂರು ವಾರಗಳಲ್ಲಿ ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ನ್ಯುಮೋನಿಯಾದಿಂದ 200ಕ್ಕೂ ಹೆಚ್ಚು ಮಕ್ಕಳು ಸಾವನ್ನಪ್ಪಿದ್ದಾರೆ. ತೀವ್ರ ಚಳಿಯ ವಾತಾವರಣದಿಂದಾಗಿ ಈ ಸಾವು ಸಂಭವಿಸಿವೆ ಎಂದು ಸರ್ಕಾರ ಶುಕ್ರವಾರ ಮಾಹಿತಿ ನೀಡಿದೆ.



ಮೃತಪಟ್ಟ ಹೆಚ್ಚಿನ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದರು ಹಾಗೂ ನ್ಯುಮೋನಿಯಾ ಲಸಿಕೆ ಪಡೆದಿರಲಿಲ್ಲ ಎಂದು ತಿಳಿದು ಬಂದಿದೆ.

ಹವಾಮಾನ ವೈಪರೀತ್ಯದ ಕಾರಣ ಈ ಪ್ರಾಂತ್ಯದಲ್ಲಿ ಜನವರಿ 31ರವರೆಗೆ ಬೆಳಿಗ್ಗೆ ತರಗತಿ ನಡೆಸದಂತೆ ಸರ್ಕಾರ ಈಗಾಗಲೇ ಶಾಲೆಗಳಿಗೆ ಸೂಚಿಸಿದೆ. ಪಂಜಾಬ್ನ ಪ್ರಾಂತೀಯ ರಾಜಧಾನಿ ಲಾಹೋರ್ನಲ್ಲಿ 47 ಮಕ್ಕಳು ಮೃತಪಟ್ಟಿವೆ. ಮಕ್ಕಳಲ್ಲಿ ನ್ಯುಮೋನಿಯಾ ಪ್ರಕರಣಗಳ ಹೆಚ್ಚಳದ ಬಗ್ಗೆ ಅಲ್ಲಿನ ಸರ್ಕಾರ ತೀವ್ರ ಕಳವಳ ವ್ಯಕ್ತಪಡಿಸಿದೆ. ಮಕ್ಕಳಿಗೆ ನ್ಯುಮೋನಿಯಾ ಬಾರದಂತೆ ತಡೆಯಲು ಮಾಸ್ಕ್ ಧರಿಸಿ, ಸ್ವಚ್ಛವಾಗಿ ಕೈತೊಳೆದುಕೊಳ್ಳುವಂತೆ ಹಾಗೂ ಬೆಚ್ಚಗಿನ ಬಟ್ಟೆ ಧರಿಸುವಂತೆ ಸೂಚಿಸಿದೆ.

## ಪಾಕಿಸ್ತಾನದ ಪ್ರಧಾನಿ ಅಭ್ಯರ್ಥಿಯಾಗಿ ನವಾಜ್ ಷರೀಫ್ ಮರು ಆಯ್ಕೆ

**ನವದೆಹಲಿ:** ಪಾಕಿಸ್ತಾನ ಮುಸ್ಲಿಂ ಲೀಗ್–ನವಾಜ್ (ಪಿಎಂಎಲ್–ಎನ್) ಮುಖಂಡ ಮತ್ತು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್ ತಮ್ಮ ಬಹುನಿರೀಕ್ಷಿತ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದಾರೆ. ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಪಿಎಂಎಲ್–ಎನ್ ಮುಖ್ಯಸ್ಥರು ತಮ್ಮ ಪಕ್ಷವು ಪ್ರಣಾಳಿಕೆಯ ಅನುಷ್ಠಾನವನ್ನು ಖಚಿತಪಡಿಸುತ್ತದೆ ಮತ್ತು ದೇಶದ ಅತಿದೊಡ್ಡ ಸಮಸ್ಯೆ ಅದರ ಆರ್ಥಿಕತೆಯ ಸ್ಥಿತಿಯಾಗಿದೆ ಎಂದು ಒತ್ತಿ ಹೇಳಿದರು. ಅದೇ ಸಮಯದಲ್ಲಿ, 2018 ರ ಚುನಾವಣೆಯ ನಂತರ ಸರ್ಕಾರ ರಚಿಸಿದ ಇಮ್ರಾನ್ ಖಾನ್ ಅವರನ್ನು ಟೀಕಿಸಿದ ನವಾಜ್ ಷರೀಫ್, ''ಹಣದುಬ್ಬರವನ್ನು ತರುವ ಮೂಲಕ ನೀವು ಬಡವರ ಬೆನ್ನು ಮುರಿದಿದ್ದೀರಿ. ನೀವು ವಿದ್ಯುತ್ ಕಡಿತಗೊಳಿಸಿದ್ದೀರಿ, ಆದರೆ ನನ್ನ ಕಾಲದಲ್ಲಿ ಎಂದಿಗೂ ವಿದ್ಯುತ್ ಕಡಿತವಾಗಿರಲಿಲ್ಲ. ಇಮ್ರಾನ್ ಖಾನ್ ಅವರನ್ನು ಈ ಬಾರಿ ಚುನಾವಣೆಯಲ್ಲಿ ಸ್ಪರ್ಧಿಸದಂತೆ ನಿಷೇಧಿಸಲಾಗಿದೆ. ಅವರು ಎರಡು ಸ್ಥಳಗಳಿಂದ ನಾಮಪತ್ರಗಳನ್ನು ಸಲ್ಲಿಸಿದ್ದರು, ಆದರೆ ಎರಡೂ ಸ್ಥಳಗಳಿಂದ ಅವರ ನಾಮಪತ್ರವನ್ನು ಪಾಕಿಸ್ತಾನದ ಚುನಾವಣಾ ಆಯೋಗ ತಿರಸ್ಕರಿಸಿತು.

## ಕ್ಯಾಲಿಫೋರ್ನಿಯಾದ ಸೊನೊಮಾ ಕೌಂಟಿಯಲ್ಲಿ ಸರಣಿ ಭೂಕಂಪ

ಕ್ಯಾಲಿಫೋರ್ನಿಯಾದ ಸೊನೊಮಾ ಕೌಂಟಿಯ ಸಾಂಟಾ ರೋಸಾ ಬಳಿ ಕನಿಷ್ಠ ನಾಲ್ಕು ಭೂಕಂಪಗಳು ವರದಿಯಾಗಿವೆ. ಈ ಭೂಕಂಪಗಳು ಶುಕ್ರವಾರ ಬೆಳಗ್ಗೆ 8:42 ಕ್ಕೆ ಗೀಸರ್ಸ್ ವಾಯುವ್ಯದಲ್ಲಿ 3.1 ತೀವ್ರತೆಯ ಭೂಕಂಪದೊಂದಿಗೆ ಪ್ರಾರಂಭವಾಯಿತು, ನಂತರ 1:28 ಕ್ಕೆ 4.2 ಭೂಕಂಪನ, 1:32 ಕ್ಕೆ 2.5 ರ ತೀವ್ರತೆಯ ಭೂಕಂಪನವು 1:32 ಕ್ಕೆ ಅಂತಿಮವಾಗಿ ಮಧ್ಯಾಹ್ನ 2:23 ಕ್ಕೆ 3.0 ಭೂಕಂಪನ ಸಂಭವಿಸಿದೆ. ಭೂಕಂಪವು ಹೀಲ್ಡ್ಬರ್ಗ್ನ ಈಶಾನ್ಯಕ್ಕೆ 32 ಮೈಲಿ ದೂರದಲ್ಲಿ ಸಂಭವಿಸಿದೆ. ಭೂಕಂಪದ ಕೇಂದ್ರವು ಸೊನೊಮಾ ಮತ್ತು ಲೇಕ್ ಕೌಂಟಿಗಳ ನಡುವಿನ ಗಡಿಯ ಸಮೀಪದಲ್ಲಿದೆ.




## 5ಜಿ ತಂತ್ರಜ್ಞಾನದ ಅನುಭವ ಹೆಚ್ಚಿಸಲು ರಿಲಯನ್ಸ್ ಜಿಯೋ– ಒನ್‌ಪ್ಲಸ್ ಇಂಡಿಯಾ ಪಾಲುದಾರಿಕೆ

**ಬೆಂಗಳೂರು:** ಭಾರತದ ಅತಿದೊಡ್ಡ ಡಿಜಿಟಲ್ ಸೇವಾ ಸಂಸ್ಥೆ ರಿಲಯನ್ಸ್ ಜಿಯೋ ಹಾಗೂ ಜಾಗತಿಕ ತಂತ್ರಜ್ಞಾನ ಬ್ರಾಂಡ್ ಆದ ಒನ್ ಪ್ಲಸ್ ಪಾಲುದಾರಿಕೆ ಘೋಷಣೆ ಮಾಡಿವೆ. ಎರಡೂ ಸಂಸ್ಥೆಗಳು ತಂತ್ರಜ್ಞಾನ ಅಳವಡಿಕೆಯಲ್ಲಿ ಮುಂಚೂಣಿಯಲ್ಲಿದ್ದು, ಭಾರತದಲ್ಲಿ 5ಜಿ ತಂತ್ರಜ್ಞಾನದ ಸಂಪೂರ್ಣ ಸಾಮರ್ಥ್ಯವನ್ನು ದೊರಕಿಸುವ ಗುರಿಯನ್ನು ಹೊಂದಿರುವ ಕಾರ್ಯತಂತ್ರದ ಪಾಲುದಾರಿಕೆಯನ್ನು ಹೆಮ್ಮೆಯಿಂದ ಘೋಷಿಸಿವೆ. ಈ ಸಹಯೋಗವು ಬಳಕೆದಾರರಿಗೆ ಹೊಸ ಅನುಭವಗಳನ್ನು ನೀಡಲಿದ್ದು, ಜಿಯೋದ ಮೂಲಸೌಕರ್ಯ ಮತ್ತು ಒನ್ ಪ್ಲಸ್ ತಾಂತ್ರಿಕ ನಾವೀನ್ಯತೆಯನ್ನು ಒಟ್ಟುಗೂಡಿಸುತ್ತದೆ.

ಈ ಮೈತ್ರಿಯು ಒನ್ ಪ್ಲಸ್ ಮತ್ತು ಜಿಯೋ ಟ್ರೂ 5ಜಿ ಬಳಕೆದಾರರಿಗೆ ವಿಭಿನ್ನ ವೈಶಿಷ್ಟ್ಯಗಳನ್ನು ಮತ್ತು ಅದ್ಭುತವಾದ ನೆಟ್‌ವರ್ಕ್ ಅನುಭವವನ್ನು ಒದಗಿಸುವ ಗುರಿ ಹೊಂದಿದೆ. ಈ ಉಪಕ್ರಮಗಳನ್ನು ಮತ್ತೂ ಹೆಚ್ಚಿಸಲು ಎರಡೂ ಬ್ರ್ಯಾಂಡ್‌ಗಳು ಅತ್ಯಾಧುನಿಕ 5ಜಿ ಇನ್ನೋವೇಶನ್ ಲ್ಯಾಬ್ ಸ್ಥಾಪನೆಯನ್ನು ಘೋಷಿಸಿವೆ. ಈ ಸ್ಥಳವು ಹೊಸ ತಂತ್ರಜ್ಞಾನಗಳನ್ನು ಪರೀಕ್ಷಿಸುವ ಮತ್ತು ಅಭಿವೃದ್ಧಿಪಡಿಸುವ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ, ಅದೇ ವೇಳೆ ಒನ್ ಪ್ಲಸ್ ಮತ್ತು ಜಿಯೋ ಟ್ರೂ 5ಜಿ ಬಳಕೆದಾರರು ಅದ್ಭುತವಾದ ಭವಿಷ್ಯದ ಅನುಭವವನ್ನು ಆನಂದಿಸುತ್ತಾರೆ ಎಂದು ಖಚಿತಪಡಿಸುತ್ತದೆ.

''ಯಾವುದು ಸಾಧ್ಯವಿದೆಯೋ ಆ ಗಡಿಗಳನ್ನು ಮೀರುವುದರಲ್ಲಿ ನಾವು ನಂಬಿಕೆ ಇರಿಸಿದ್ದೇವೆ ಮತ್ತು ಜಿಯೋ ಜೊತೆಗಿನ ಈ ಪಾಲುದಾರಿಕೆಯು ಆ ಬದ್ಧತೆಗೆ ಸಾಕ್ಷಿಯಾಗಿದೆ. ಈ ಪಾಲುದಾರಿಕೆಯು ಭವಿಷ್ಯದ ಸಂಪರ್ಕದ ಕಡೆಗೆ ದಿಟ್ಟ ಹೆಜ್ಜೆಯನ್ನು ಸೂಚಿಸುತ್ತದೆ. ಅಲ್ಲಿ ನಾವೀನ್ಯತೆಗೆ ಯಾವುದೇ ಮಿತಿಯಿಲ್ಲ. ಒಟ್ಟಾಗಿ, ಜಿಯೋ ಮತ್ತು ಒನ್ ಪ್ಲಸ್ ದೇಶದಲ್ಲಿ 5ಜಿ ರೂಪು–ರೇಖೆಗಳನ್ನು ಮರುವ್ಯಾಖ್ಯಾನಿಸಲು, ಮುಂದೆ ಇರುವ ಮಿತಿಯಿಲ್ಲದ ಸಾಧ್ಯತೆಗಳ ಬಗ್ಗೆ ಬಳಕೆದಾರರಿಗೆ ನೋಟವನ್ನು ನೀಡುತ್ತವೆ,'' ಎಂದು ಒನ್‌ಪ್ಲಸ್ ವಕ್ತಾರರು ಹೇಳಿದ್ದಾರೆ.

''ಜಿಯೋ ಟ್ರೂ 5ಜಿ ಭಾರತದಲ್ಲಿ ಅತ್ಯುತ್ತಮ 5ಜಿ ನೆಟ್‌ವರ್ಕ್ ಆಗಿದೆ. ಇಂದು ಜಿಯೋ ಟ್ರೂ 5ಜಿ ದೃಢವಾದ ಟ್ರೂ 5ಜಿ ನೆಟ್‌ವರ್ಕ್‌ನೊಂದಿಗೆ ಇಡೀ ದೇಶವನ್ನು ಆವರಿಸಿದೆ. ಭಾರತದಲ್ಲಿ ಸಂಪೂರ್ಣ 5ಜಿ ನಿಯೋಜನೆಯ ಶೇ 85ರಷ್ಟು ಜಿಯೋದಿಂದ ಆಗಿದೆ. ನಮ್ಮ ಬಳಕೆದಾರರಿಗೆ 5ಜಿ ಮಾಂತ್ರಿಕ ಅನುಭವಗಳನ್ನು ತೆರೆದಿಡುವ ಸಮಯ ಬಂದಿದೆ ಮತ್ತು ಒನ್ ಪ್ಲಸ್ ಜೊತೆಗಿನ ಈ ಪಾಲುದಾರಿಕೆಯು ಆ ದಿಕ್ಕಿನಲ್ಲಿ ಮುಖ್ಯ ಹೆಜ್ಜೆಯಾಗಿದೆ. ಮುಂದಿನ ಕೆಲವು ತಿಂಗಳಲ್ಲಿ ನಮ್ಮ ಬಳಕೆದಾರರು ಅತ್ಯುತ್ಕೃಷ್ಟ ಮತ್ತು ವರ್ಧಿತ ಗೇಮಿಂಗ್, ಸ್ಟ್ರೀಮಿಂಗ್ ಮತ್ತು 5ಜಿ ಉತ್ತಮ ಬಳಕೆಯ ಅನುಭವವನ್ನು ಪಡೆಯುತ್ತಾರೆ,'' ಎಂದು ಜಿಯೋ ವಕ್ತಾರರು ಹೇಳಿದ್ದಾರೆ.

## ಬಿಜೆಪಿ ಸೇರಲು ಆಮ್ ಆದ್ಮಿ ಪಕ್ಷದ 7 ಶಾಸಕರಿಗೆ ಆಫರ್

**ದೆಹಲಿ:** ಇತ್ತೀಚೆಗೆ ಬಿಜೆಪಿ ಸೇರಲು ಆಮ್ ಆದ್ಮಿ ಪಕ್ಷದ ಏಳು ಶಾಸಕರಿಗೆ ? 25 ಕೋಟಿ ಆಫರ್ ಮಾಡಿತ್ತು ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹೇಳಿದರು.

ಅರವಿಂದ್ ಕೇಜ್ರಿವಾಲ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಈ ಬಗ್ಗೆ ತಿಳಿಸಿದ್ದು, ಇತ್ತೀಚೆಗೆ ಅವರು ದೆಹಲಿಯಲ್ಲಿರುವ ನಮ್ಮ 7 ಶಾಸಕರನ್ನು ಸಂಪರ್ಕಿಸಿ, 'ಕೆಲವು ದಿನಗಳ ನಂತರ ನಾವು ಕೇಜ್ರಿವಾಲ್ ಅವರನ್ನು ಬಂಧಿಸುತ್ತೇವೆ.



ಆ ಬಳಿಕ ಶಾಸಕರನ್ನು ವಿಭಜನೆ ಮಾಡುತ್ತೇವೆ. 21 ಶಾಸಕರ ಜತೆ ಮಾತುಕತೆ ನಡೆಸಲಾಗಿದೆ. ಇತರರೊಂದಿಗೆ ಸಹ ಮಾತನಾಡುತ್ತೇವೆ. ಆ ನಂತರ ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಸರ್ಕಾರವನ್ನು ಉರುಳಿಸುತ್ತೇವೆ. ನೀವು ಕೂಡ ಬರಬಹುದು. ನಾವು 25 ಕೋಟಿ ನೀಡುತ್ತೇವೆ, ನೀವು ಬಿಜೆಪಿ ಟಿಕೆಟ್ನಲ್ಲಿ ಚುನಾವಣೆಗೆ ಸ್ಪರ್ಧಿಸಬಹುದು ಎಂದು ಬಿಜೆಪಿ ಹೇಳಿರುವುದಾಗಿ ಬರೆದುಕೊಂಡಿದ್ದಾರೆ.

ಮಾಹಿತಿಯ ಪ್ರಕಾರ, ಅವರು ಇದುವರೆಗೆ ಏಳು ಶಾಸಕರನ್ನು ಮಾತ್ರ ಸಂಪರ್ಕಿಸಿದ್ದಾರೆ. ಅವರೆಲ್ಲರೂ (ಬಿಜೆಪಿ ಸೇರಲು) ನಿರಾಕರಿಸಿದ್ದಾರೆ. ಇದರರ್ಥ ಯಾವುದೇ ಮದ್ಯ ಹಗರಣದ ತನಿಖೆಗಾಗಿ ನನ್ನನ್ನು ಬಂಧಿಸಲಾಗುತ್ತಿಲ್ಲ. ಆದರೆ ಅವರು ದೆಹಲಿಯಲ್ಲಿ ಆಮ್ ಆದ್ಮಿ ಪಕ್ಷದ ಸರ್ಕಾರವನ್ನು ಉರುಳಿಸಲು ಪಿತೂರಿ ಮಾಡುತ್ತಿದ್ದಾರೆ. ಕಳೆದ ಒಂಬತ್ತು ವರ್ಷಗಳಲ್ಲಿ, ಅವರು ನಮ್ಮ ಸರ್ಕಾರವನ್ನು ಉರುಳಿಸಲು ಅನೇಕ ಪಿತೂರಿಗಳನ್ನು ರೂಪಿಸಿದರು. ಆದರೆ ಅವರಿಗೆ ಯಶಸ್ಸು ಸಿಗಲಿಲ್ಲ. ದೇವರು ಮತ್ತು ಜನರು ಯಾವಾಗಲೂ ನಮ್ಮನ್ನು ಬೆಂಬಲಿಸಿದರು. ನಮ್ಮ ಎಲ್ಲಾ ಶಾಸಕರು ಕೂಡ ಬಲವಾಗಿ ಜೊತೆಯಾಗಿದ್ದಾರೆ. ಈ ಬಾರಿಯೂ ಈ ಜನರು ತಮ್ಮ ಕೆಟ್ಟ ಉದ್ದೇಶಗಳಲ್ಲಿ ವಿಫಲರಾಗುತ್ತಾರೆ ಎಂದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಗುಟ್ಟು-ರಟ್ಟು ಮಾಡಿದ ಸುದೀಪ್, ವರ್ತೂರು ಭಾವುಕ, ಮನೆಯರಿಗೆ ಶಾಕ್



ಯಾರೂ ಊಹಿಸದ ರೀತಿಯಲ್ಲಿ ವರ್ತೂರು ಸಂತೋಷ್ ಬಿಗ್ ಬಾಸ್ ಕನ್ನಡ ಸೀಸನ್ 10ರ ಫಿನಾಲೆಗೆ ತಲುಪಿದ್ದಾರೆ. ವರ್ತೂರು ಸಂತೋಷ್ ಬಿಗ್ ಬಾಸ್ ಮನೆಗೆ ಬಂದ ಹೊಸದರಲ್ಲಿ ಇವರು ಫಿನಾಲೆಗೆ ತಲುಪುತ್ತಾರೆ ಎಂಬ ನಿರೀಕ್ಷೆ ಮನೆಯಲ್ಲಿದ್ದವರಿಗೂ ಇರಲಿಲ್ಲ, ಪ್ರೇಕ್ಷಕರಲ್ಲೂ ಬಹುಸಂಖ್ಯೆಯ ಜನರಿಗೆ ವರ್ತೂರು ಫಿನಾಲೆಗೆ ಬರುತ್ತಾರೆಂಬ ನಿರೀಕ್ಷೆ ಇರಲಿಲ್ಲ. ಮನೆಯಲ್ಲಿ, ಹೊರಗಡೆ ಹಲವು ಸವಾಲುಗಳನ್ನು ಎದುರಿಸಿ ಕೊನೆಗೂ ವರ್ತೂರು ಸಂತೋಷ್ ಫಿನಾಲೆ ತಲುಪಿದ್ದಾರೆ. ಗೆಲುವಿಗೆ ಹತ್ತಿರದಲ್ಲಿದ್ದಾರೆ.

ಇದೀಗ ಫಿನಾಲೆ ಪ್ರಾರಂಭವಾಗಿದ್ದು, ಫಿನಾಲೆಯ ಮೊದಲ ದಿನ ಕಾರ್ಯಕ್ರಮ ಆರಂಭವಾದ ಕೆಲವೇ ಸಮಯದಲ್ಲಿ ಸುದೀಪ್ ಅವರು ವರ್ತೂರು ಸಂತೋಷ್ ಅವರ ಬಗ್ಗೆ ವಿಷಯವೊಂದನ್ನು ಮನೆಯ ಸದಸ್ಯರಿಗೆ ತಿಳಿಸಿದರು. ಸುದೀಪ್ ಹೇಳಿದ ಸುದ್ದಿ ಕೇಳಿ ಮನೆಯ ಸದಸ್ಯರು ಗಾಬರಿಯಾದರೆ, ವರ್ತೂರು ಸಂತೋಷ್ ಭಾವುಕರಾಗಿ ಕಣ್ಣೀರು ಹಾಕಿದರು. ಸುದೀಪ್ ಹೇಳಿದ ವಿಷಯ, ವರ್ತೂರು ಸಂತು ಜೈಲಿಗೆ ಹೋದ ವಿಷಯ.

ಮನೆಯ ಸದಸ್ಯರಿಗೆಲ್ಲ ಒಂದು ವಿಷಯ ನಾನು ಹೇಳಲೇ ಬೇಕು. ವರ್ತೂರು ಸಂತೋಷ್ ಅವರು ಒಂದು ವಾರ ಹೊರಗೆ ಹೋಗಿ ಬಂದರು. ಅವರು ಸಾಕಷ್ಟು ನೋವನ್ನು ಹೊರಗೆ ಅನುಭವಿಸಿದರು. ಅವರು ಅನುಭವಿಸಿರುವ ನೋವು ಊಹಿಸಲು ಸಾಧ್ಯವಿಲ್ಲ. ವರ್ತೂರು ಇಲ್ಲಿಗೆ ಬಂದಾಗ ಅವರು ಒಂದು ಚೈನ್ ಹಾಕಿಕೊಂಡು ಬಂದಿದ್ದರು. ಆ ಚೈನ್‌ನಲ್ಲಿ ಒಂದು ಪೆಂಡೆಂಟ್ ಇತ್ತು, ಆ ಪೆಂಡೆಂಟ್ ಧರಿಸುವುದು ಕಾನೂನು ಪ್ರಕಾರ ತಪ್ಪಾಗಿತ್ತು. ಅದು ಅವರಿಗೆ ಸಹ ಗೊತ್ತಿರಲಿಲ್ಲ. ಆ ಕಾರಣಕ್ಕೆ ಅವರಿಗೆ ಒಂದು ಬುಲಾವ್ ಬಂತು ಅದರಂತೆ ಅವರು ಹೊರಗೆ ಹೋಗಬೇಕಾಯ್ತು. ಅವರು ಒಂದು ವಾರ ಜೈಲು ವಾಸ ಮುಗಿಸಿ ಹೊರಗೆ ಬಂದರು' ಎಂದರು.

ಸುದೀಪ್ ಅವರ ಮಾತು ಕೇಳಿ ಮನೆಯ ಸದಸ್ಯರೆಲ್ಲ ಶಾಕ್ ಆದರು. ಮಾತು ಮುಂದುವರೆಸಿದ ಸುದೀಪ್, 'ಅವರು ಯಾರನ್ನೂ ಭೇಟಿಯಾಗದೆ ಮತ್ತೆ ಬಿಗ್ ಬಾಸ್ ಮನೆಗೆ ಬಂದರು. ನಾವು ಸಹ ಷರತ್ತು ಹಾಕಿದ್ದೆವು, ಹೊರಗೆ ನಡೆದ ಘಟನೆಯನ್ನು ಒಳಗೆ ಹೇಳಬಾರದು ಎಂದು. ಅಂತೆಯೇ ಅವರು ಇಷ್ಟು ದಿನಗಳ ವರೆಗೆ ಆ ವಿಷಯವನ್ನು ಯಾರೊಟ್ಟಿಗೆ ಹೇಳಿಕೊಳ್ಳದೆ ಇಲ್ಲಿವರೆಗೆ ಬಂದಿದ್ದಾರೆ. ಅವರು ಮರಳಿ ಮನೆಗೆ ಬಂದಾಗಲೇ ಅವರ ಸಹಿಷ್ಣುತೆ, ಅವರ ಮನೋಭಾವದ ಬಗ್ಗೆ ನಮಗೆ ಹೆಮ್ಮೆಯಾಗಿತ್ತು. ಅದೇ ಕಾರಣಕ್ಕೆ ಅವರು ಮನೆಯಿಂದ ಹೋಗುವೆ ಎಂದಾಗ ನಾನು ಅಷ್ಟು ಬಲವಂತ ಮಾಡಿ ಅವರನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡಿದ್ದು' ಎಂದರು.

ಸುದೀಪ್ ಅವರ ಮಾತುಗಳನ್ನು ಕೇಳಿ ವರ್ತೂರು ಸಂತೋಷ್ ಕಣ್ಣೀರು ಹಾಕಿದರು. ಹೊರಗೆ ಕೂತಿದ್ದ ಅವರ ತಾಯಿಯೂ ಸಹ ಕಣ್ಣೀರು ಹಾಕಿದರು. ವರ್ತೂರು ಸಂತೋಷ್ ಮಾತನಾಡಿ, ನಾನು ಇಲ್ಲಿಯವರೆಗೆ ಬರತ್ತೀನಿ ಎಂದುಕೊಂಡಿರಲಿಲ್ಲ, ನನಗೆ ಜನಗಳ ಪ್ರೀತಿ ಇಷ್ಟು ದೊಡ್ಡ ಮಟ್ಟದಲ್ಲಿ ದೊರಕುತ್ತದೆ ಎಂಬ ನಿರೀಕ್ಷೆಯೂ ಇರಲಿಲ್ಲ. ಇದೆಲ್ಲ ಸಾಧ್ಯವಾಗಿದ್ದು ನಿಮ್ಮಿಂದ, ಬಿಗ್ ಬಾಸ್ ವೇದಿಕೆಯಿಂದ. ಇದಕ್ಕೆ ನಾನು ಸದಾ ಚಿರಋಣಿ ಎಂದರು ವರ್ತೂರು ಸಂತೋಷ್.

# ಪುಷ್ಪ2 ರಿಲೀಸ್‌ನಲ್ಲಿ ಯಾವುದೇ ಬದಲಾವಣೆ ಇಲ್ಲ ಅಂತಿದೆ ಟೀಮ್







ಅಲ್ಲು ಅರ್ಜುನ್ ನಟನೆಯ ಪುಷ್ಪ-2 ಬಿಡುಗಡೆ ದಿನಾಂಕ ಈ ಹಿಂದೆಯೇ ಫಿಕ್ಸ್ ಆಗಿತ್ತು. ಸ್ವಾತಂತ್ರ್ಯ ದಿನದಂದು ಅಂದರೆ ಆಗಸ್ಟ್ 15ರಂದು ವಿಶ್ವಾದ್ಯಂತ ಚಿತ್ರ ತೆರೆಗೆ ಬರಲಿದೆ ಎಂದು ಸ್ಪೆಷಲ್ ಪೋಸ್ಟರ್ ಮೂಲಕ ಚಿತ್ರತಂಡ ರಿಲೀಸ್ ಡೇಟ್ ಘೋಷಿಸಿತ್ತು. ಫ್ಯಾನ್ಸ್ ಪುಷ್ಪ ಸೀಕ್ವೆಲ್ ನೋಡೋದಿಕ್ಕೆ ಎಕ್ಸೈಟ್ ಆಗಿದ್ದರು. ಇದೀಗ ರಿಲೀಸ್ ಡೇಟ್ ಮುಂದೆ ಹೋಗಿದೆ ಎಂದು ಸುದ್ದಿಯನ್ನು ಹರಿಬಿಡಲಾಗಿದೆ. ಅಂದು ಜ್ಯೂನಿಯರ್ ಎನ್.ಟಿ.ಆರ್ ನಟನೆಯ ದೇವರ ಸಿನಿಮಾ ಬರಲಿರುವ ಕಾರಣ ಸಿನಿಮಾ ಬಿಡುಗಡೆ ಮುಂದಕ್ಕೆ ಹೋಗಿದೆ ಅಂತ ಸುದ್ದಿ ಆಗಿತ್ತು.

ಇಂಥದ್ದೊಂದು ಸುದ್ದಿ ಆದ ಬೆನ್ನಲ್ಲೇ ಸಿನಿಮಾ ತಂಡದಿಂದ ಸ್ಪಷ್ಟನೆ ಬಂದಿದೆ. ಯಾವುದೇ ಕಾರಣಕ್ಕೂ ರಿಲೀಸ್ ಡೇಟ್ ಮುಂದಕ್ಕೆ ಹಾಕಲ್ಲ ಅಂದಿದ್ದಾರೆ ನಿರ್ದೇಶಕರು. ಘೋಷಣೆ ಮಾಡಿದ ದಿನದಂದೇ ಚಿತ್ರವನ್ನು ರಿಲೀಸ್ ಮಾಡುವುದಾಗಿ ಹೇಳಿದ್ದಾರೆ.

ಅಲ್ಲು ಅರ್ಜುನ್ ಹುಟ್ಟುಹಬ್ಬದ ಸ್ಪೆಷಲ್ ಆಗಿ ಹೊರಬಿದ್ದಿದ್ದ ಪುಷ್ಪ-2 ಟೀಸರ್ ಝುಲಕ್ ಹಲ್ ಚಲ್ ಎಬ್ಬಿಸಿತ್ತು. ಪುಷ್ಪ 2 ಟೀಸರ್ ಜೊತೆ ಹೊರಬಿದ್ದಿದ್ದ ಪುಷ್ಪರಾಜನ ಹೊಸ ಫೋಟೋವಂತೂ ಟಾಕ್ ಆಫ್ ದಿ ಟಾಲಿವುಡ್ ಆಗಿತ್ತು. ಸೀರೆ ಉಂಟು ಬಳೆ ತೊಟ್ಟು ಮೂಗುತಿ ಧರಿಸಿ ಕೈಯಲ್ಲಿ ಪಿಸ್ತೂಲ್ ಹಿಡಿದು ದರ್ಶನ ಕೊಟ್ಟಿದ್ದ ಸ್ಟೈಲೀಶ್ ಸ್ಟಾರ್ ಅಲ್ಲು ಅರ್ಜುನ್ ಅವತಾರಕ್ಕೆ ಫ್ಯಾನ್ಸ್ ಉಫೇ ಉಫೇ ಎಂದಿದ್ದರು. ಶೂಟಿಂಗ್ ಹಂತದಲ್ಲಿರುವ ಪುಷ್ಪ ಸೀಕ್ವೆಲ್ ಕ್ರೇಜ್‌ಗೆ ಬಾಲಿವುಡ್ ಮಂದಿ ಥಂಡಾ ಹೊಡೆದಿದ್ದಾರೆ.

ನಿರ್ದೇಶಕ ಸುಕುಮಾರ್- ಐಕಾನ್ ಸ್ಟಾರ್ ಅಲ್ಲು ಅರ್ಜುನ್ ಮತ್ತೊಮ್ಮೆ ಬಾಕ್ಸಾಫೀಸ್ ಬ್ಯಾಂಗ್ ಮಾಡೋದಿಕ್ಕೆ ಭರ್ಜರಿಯಾಗಿ ಸಜ್ಜಾಗ್ತಿದ್ದಾರೆ. ಪುಷ್ಪ ಮೂಲಕ ದಕ್ಷಿಣ ಧ್ರುವದಿಂದ ಉತ್ತರ ಧ್ರುವದವರೆಗೂ ಧಮಾಕ ಎಬ್ಬಿಸಿದ್ದ ಈ ಜೋಡಿ ಸೀಕ್ವೆಲ್ ಮೂಲಕ ಬೆಳ್ಳಿತೆರೆಯಲ್ಲಿ ಕಮಾಲ್ ಮಾಡಲು ಹೊರಟಿದೆ. ಪುಷ್ಪ 2 ಸಣ್ಣ ಟೀಸರ್ ಹಂಗಾಮ ಕ್ರಿಯೇಟ್ ಮಾಡಿದೆ. ಕಾಣೆಯಾಗಿದ್ದ ಪುಷ್ಪ ಹೊಸ ಅವತಾರದಲ್ಲಿ ಪ್ರತ್ಯಕ್ಷನಾಗುವ ಮೂಲಕ ಇನ್ಮುಂದೆ ನನ್ನಂದೇ ರೂಲ್ ಎಂಬ ಸಂದೇಶ ರವಾನಿಸಿದ್ದಾನೆ.

'ಪುಷ್ಪ 2' ದಿ ರೂಲ್ಸ್ ಶೂಟಿಂಗ್ ಭರದಿಂದ ಸಾಗ್ತಿದೆ. ಈ ನಡುವೆಯೇ ಸೀಕ್ವೆಲ್ ರೈಟ್ಸ್ ಭಾರೀ ಮೊತ್ತಕ್ಕೆ ಸೇಲ್ ಆಗಿರುವ ಖಬರ್ ಹೊರಬಿದ್ದಿದೆ. ಹಿಂದಿ ಬೆಲ್ಟ್ ನಲ್ಲಿ ಅತಿ ಹೆಚ್ಚು ಮೊತ್ತಕ್ಕೆ ಹಕ್ಕು ಮಾರಾಟವಾಗಿದೆಯಂತೆ. ಪುಷ್ಪ ಮೊದಲ ಭಾಗ ಬಾಲಿವುಡ್ ಅಂಗಳದಲ್ಲಿ ಬಡಾ ಹಿಟ್ ಕಂಡಿತ್ತು. ಅಲ್ಲು ಆಕ್ಟಿಂಗ್ , ಸುಕುಮಾರ್ ಟೇಕಿಂಗ್‌ಗೆ ಹಿಂದಿ ಮಂದಿ ಫಿದಾ ಆಗಿದ್ದರು.

ಬಾಲಿವುಡ್ ಚಿತ್ರಗಳಿಗೆ ಟಕ್ಕರ್ ಕೊಟ್ಟಿದ್ದ ಪುಷ್ಪ 2ಗಾಗಿ ಬಂಗಾರದ ಬೇಡಿಕೆ ಬಂದಿದೆ. 200 ಕೋಟಿ ಮೊತ್ತಕ್ಕೆ ಹಿಂದಿ ರೈಟ್ಸ್ ಮಾರಾಟವಾಗಿದ್ದು, 75 ಕೋಟಿಗೆ ಆಡಿಯೋ ರೈಟ್ಸ್ ಸೇಲ್ ಆಗಿರುವ ಬಗ್ಗೆ ಸಿನಿ ಜಜಾರ್‌ನಲ್ಲಿ ಹೊಸ ಬಜ್ ಓಡಾಡ್ತಿದೆ. ಮೈತ್ರಿ ಮೂವೀ ಮೇಕರ್ಸ್ ನಿರ್ಮಾಣದಲ್ಲಿ ಅದ್ದೂರಿಯಾಗಿ ತಯಾರಾಗ್ತಿರುವ ಪುಷ್ಪ-2 ಸಿನಿಮಾಗೆ ದೇವಿಶ್ರೀ ಪ್ರಸಾದ್ ಸಂಗೀತ ಒದಗಿಸಿದ್ದಾರೆ.

# ಕಿರುತೆರೆಗೆ ಎಂಟ್ರಿ ಕೊಟ್ಟ 'ಕಾಂತಾರ' ಬೆಡಗಿ ಸಪ್ತಮಿ



'ಕಾಂತಾರ' ಬ್ಯೂಟಿ ಸಪ್ತಮಿ ಗೌಡ ಅವರು ಟಿವಿ ಪ್ರೇಕ್ಷಕರಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಸಪ್ತಮಿ ಇದೀಗ ಕಿರುತೆರೆಗೆ ಎಂಟ್ರಿ ಕೊಟ್ಟಿದ್ದಾರೆ. ಹಾಗಾದ್ರೆ ಸಿನಿಮಾ ಬಿಟ್ಟು ಸೀರಿಯಲ್‌ಗೆ ಎಂಟ್ರಿ ಕೊಟ್ರಾ? ಅಂತ ನೀವು ಅಂದುಕೊಂಡಿರಬಹುದು. ಆದರೆ ಅಸಲಿ ವಿಚಾರ ಬೇರೆ ಇದೆ.

ರಿಷಬ್ ಶೆಟ್ಟಿ ಅವರಿಗೆ ನಾಯಕಿಯಾಗಿ 'ಕಾಂತಾರ' ಮೂಲಕ ಸಕ್ಸಸ್ ಕಂಡ ನಟಿ ಸಪ್ತಮಿ ಇದೀಗ ಬಹುಭಾಷೆಗಳಲ್ಲಿ ಮಿಂಚುತ್ತಿದ್ದಾರೆ. ಇದರ ನಡುವೆ ಕಿರುತೆರೆಗೆ ಸಪ್ತಮಿ ಹಾಜರಿ ಹಾಕಿದ್ದಾರೆ. 'ಶ್ರೀರಸ್ತು ಶುಭಮಸ್ತು' ಸೀರಿಯಲ್ ಇದೀಗ ಮಹಾ ಸಂಚಿಕೆ ನಡೆಯುತ್ತಿದೆ. ಇದರಲ್ಲಿ ವಿಶೇಷ ಪಾತ್ರದಲ್ಲಿ ನಟಿಸುವ ಮೂಲಕ ಸಪ್ತಮಿ ತಂಡಕ್ಕೆ ಸಾಥ್ ನೀಡಿದ್ದಾರೆ.

ಸೀರಿಯಲ್ ಪ್ರಚಾರಕ್ಕೆ ಸಪ್ತಮಿ ಬಂದಿದ್ದಾರೆ. 'ಶ್ರೀರಸ್ತು ಶುಭಮಸ್ತು' ಧಾರಾವಾಹಿಯ ಪಾತ್ರಗಳ ನಿರೂಪಣೆ ಮಾಡಿದ್ದಾರೆ. ಸೀರಿಯಲ್‌ನ ನಾಯಕಿ ತುಳಸಿ ಪಾತ್ರಧಾರಿ ಅಂದರೆ ಸುಧಾರಾಣಿ ಅವರು ಮಕ್ಕಳ ಖುಷಿಗಾಗಿ ಎದುರಾಳಿಗಳ ಕುತಂತ್ರಕ್ಕೆ ಮಣಿದು ಮನೆಯಿಂದ ಹೊರಹೋಗುತ್ತಾರೆ. ಮುಂದೇನು ಆಗುತ್ತೆ? ನಾಯಕಿ ಮತ್ತೆ ಮರಳಿ ಮನೆಗೆ ಬರುತ್ತಾರಾ ಎಂಬುದು ಸದ್ಯದ ಟ್ವಿಸ್ಟ್. ಇದನ್ನು ಸಪ್ತಮಿ ನಿರೂಪಣೆ ಮಾಡುವ ಮೂಲಕ ಸೀರಿಯಲ್ ಕುರಿತು ಮತ್ತಷ್ಟು ಕುತೂಹಲ ಮೂಡುವಂತೆ ಮಾಡಿದ್ದಾರೆ. ಸದ್ಯ ರಿವೀಲ್ ಆಗಿರೋ ಸಪ್ತಮಿ ಪ್ರೋಮೋ ಸದ್ದು ಮಾಡುತ್ತಿದೆ.

'ಕಾಂತಾರ' ಚಿತ್ರದ ಸಕ್ಸಸ್ ಅನ್ನು ನಟಿ ಸದುಪಯೋಗಪಡಿಸಿಕೊಂಡಿದ್ದಾರೆ. ಕನ್ನಡದ ಜೊತೆ ಜೊತೆಗೆ ಬಾಲಿವುಡ್ ಸಿನಿಮಾಗಳಲ್ಲಿ ಸಪ್ತಮಿ ಬ್ಯುಸಿಯಾಗಿದ್ದಾರೆ. ಟಾಲಿವುಡ್ ನಲ್ಲಿಯೂ ಕನ್ನಡದ ಬೆಡಗಿಗೆ ಸಖತ್ ಬೇಡಿಕೆಯಿದೆ. ಇದನ್ನೂ ಓದಿ:ಗಣರಾಜ್ಯೋತ್ಸವ ದಿನದಂದು ನಟ ದೀಕ್ಷಿತ್ ಶೆಟ್ಟಿ ಸಂಕಲ್ಪ

ತೆಲುಗು ಅಂಗಳದಲ್ಲಿ ಮೊದಲೇ ಕನ್ನಡತಿಯರ ದರ್ಬಾರ್ ಜಾಸ್ತಿಯಾಗಿದೆ. ರಶ್ಮಿಕಾ ಮಂದಣ್ಣ, ಶ್ರೀಲೀಲಾ, ರುಕ್ಮಿಣಿ ವಸಂತ್ ಮಧ್ಯೆ ಸಪ್ತಮಿ ಕೂಡ ತಮ್ಮ ಚಾರ್ಮ್ ಉಳಿಸಿಕೊಂಡಿದ್ದಾರೆ. ಅಳಿದು ತೂಗಿ ಸಿನಿಮಾ ಒಪ್ಪಿಕೊಳ್ತಿದ್ದಾರೆ.

# 2 ಹಂತಗಳಲ್ಲಿ ಈ ಬಾರಿಯ ಐಪಿಎಲ್



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ಎರಡು ಹಂತಗಳಲ್ಲಿ ನಡೆಯುವ ಸಾಧ್ಯತೆಯಿದೆ. ಅಂದರೆ ಮೊದಲಾರ್ಧವು ಭಾರತದಲ್ಲಿ ನಡೆದರೆ, ದ್ವಿತೀಯಾರ್ಧವು ವಿದೇಶಕ್ಕೆ ಶಿಫ್ಟ್ ಆಗುವ ಸಾಧ್ಯತೆಗಳಿವೆ ಎಂದು ವರದಿಯಾಗಿದೆ.

ಇದಕ್ಕೆ ಮುಖ್ಯ ಕಾರಣ ಮುಂಬರುವ ಲೋಕಸಭಾ ಚುನಾವಣೆ. ಭಾರತದಲ್ಲಿ ಸಾರ್ವತ್ರಿಕ ಚುನಾವಣೆ ನಡೆಯಬೇಕಿರುವುದರಿಂದ ಒಂದೇ ಹಂತದಲ್ಲಿ ಐಪಿಎಲ್ ಅನ್ನು ಆಯೋಜಿಸಲಾಗುವುದಿಲ್ಲ. ಹೀಗಾಗಿ ಲೋಕಸಭಾ ಚುಣಾವಣೆಯ ದಿನಾಂಕವನ್ನು ಬಿಸಿಸಿಐ ಎದುರು ನೋಡುತ್ತಿದೆ.

ಒಂದು ವೇಳೆ ಐಪಿಎಲ್ ಅವಧಿಯಲ್ಲೇ ಚುನಾವಣೆ ನಡೆಯುತ್ತಿದ್ದರೆ ಎರಡು ಹಂತಗಳಲ್ಲಿ ಟೂರ್ನಿಯನ್ನು ಆಯೋಜಿಸಲು ಬಿಸಿಸಿಐ ಪ್ಲ್ಯಾನ್ ರೂಪಿಸಿದೆ. ಇದೇ ಕಾರಣದಿಂದಾಗಿ ಐಪಿಎಲ್ ವೇಳಾಪಟ್ಟಿಯನ್ನು ಪ್ರಕಟಿಸಲು ಬಿಸಿಸಿಐ ವಿಳಂಬ ಮಾಡುತ್ತಿದೆ. ಅತ್ತ ಚುನಾವಣಾ ದಿನಾಂಕ ನಿಗದಿಯಾದರೆ, ಇತ್ತ ಐಪಿಎಲ್ ವೇಳಾಪಟ್ಟಿ ಘೋಷಣೆಯಾಗಲಿದೆ.

ಈ ಬಗ್ಗೆ ಈಗಾಗಲೇ ಭಾರತ ಸರ್ಕಾರದೊಂದಿಗೆ ಬಿಸಿಸಿಐ ಚರ್ಚೆ ನಡೆಸಿದೆ. ಅಲ್ಲದೆ ಶೀಘ್ರದಲ್ಲೇ ಐಪಿಎಲ್ ಆರಂಭದ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ತಿಳಿಸಿದ್ದಾರೆ. ಹೀಗಾಗಿ ಫೆಬ್ರವರಿಯಲ್ಲಿ ಐಪಿಎಲ್ ದಿನಾಂಕ ಘೋಷಣೆಯಾಗುವ ಸಾಧ್ಯತೆಯಿದೆ.

ಭಾರತೀಯ ಚುನಾವಣಾ ಆಯೋಗದ (ಇಸಿಐ) ಇತ್ತೀಚಿನ ಅಪ್‌ಡೇಟ್ ಪ್ರಕಾರ, ಸಾರ್ವತ್ರಿಕ ಚುನಾವಣೆಗಳು ಏಪ್ರಿಲ್ ಮಧ್ಯದಲ್ಲಿ ಪ್ರಾರಂಭವಾಗುವ ಸಾಧ್ಯತೆಯಿದೆ. ದೆಹಲಿಯ ಮುಖ್ಯ ಚುನಾವಣಾ ಅಧಿಕಾರಿ ಏಪ್ರಿಲ್ 16 ರ ತಾತ್ಕಾಲಿಕ ದಿನಾಂಕದೊಂದಿಗೆ ಅಧಿಸೂಚನೆಯನ್ನು ಕಳುಹಿಸಿದ್ದಾರೆ. ಅಂದರೆ ಏಪ್ರಿಲ್-ಮೇ ನಡುವೆ ಚುನಾವಣೆ ನಡೆಯುವುದು ಬಹುತೇಕ ಖಚಿತ ಎನ್ನಬಹುದು.

ಇತ್ತ ಐಪಿಎಲ್ ಅನ್ನು ಮಾರ್ಚ್ 22 ರಿಂದ ಶುರು ಮಾಡಲು ಬಿಸಿಸಿಐ ಯೋಜನೆ ರೂಪಿಸಿದೆ. ಅಲ್ಲದೆ ಚುನಾವಣೆ ಸಮಯದ ಪಂದ್ಯಗಳನ್ನು ವಿದೇಶದಲ್ಲಿ ಆಯೋಜಿಸುವ ಬಗ್ಗೆ ಚರ್ಚಿಸಲಾಗಿದೆ. ಅದರಂತೆ ಐಪಿಎಲ್ ಅನ್ನು ಭಾರತ ಮತ್ತು ವಿದೇಶಗಳಲ್ಲಿ ಆಯೋಜಿಸುವ ಸಾಧ್ಯತೆ ಹೆಚ್ಚಿದೆ.

2014ರಲ್ಲಿ ಲೋಕಸಭಾ ಚುನಾವಣಾ ನಿಮಿತ್ತ ಐಪಿಎಲ್‌ನ 20 ಪಂದ್ಯಗಳನ್ನು ದುಬೈನಲ್ಲಿ ಆಯೋಜಿಸಲಾಗಿತ್ತು. ಇದಕ್ಕೂ ಮುನ್ನ 2009 ರ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ಸಂಪೂರ್ಣ ಟೂರ್ನಿಯನ್ನು ಸೌತ್ ಆಫ್ರಿಕಾದಲ್ಲಿ ನಡೆಸಲಾಗಿತ್ತು. ಇದೀಗ ಮೂರನೇ ಬಾರಿ ಚುನಾವಣಾ ನಿಮಿತ್ತ ಐಪಿಎಲ್‌ನ ಕೆಲ ಪಂದ್ಯಗಳು ವಿದೇಶಕ್ಕೆ ಶಿಫ್ಟ್ ಆಗುವ ಸಾಧ್ಯತೆ ಹೆಚ್ಚಿದೆ.

## ಸಕ್ಕರೆ ಕಾರ್ಖಾನೆ ನೋಟಿಸ್

# ಸರ್ಕಾರದ ವಿರುದ್ಧ ಯತ್ನಾಳ್ ಕಿಡಿ



**ಕಲಬುರಗಿ:** ಪರಿಸರ ನಿಯಮ ಉಲ್ಲಂಘನೆ ಆರೋಪ ಹಿನ್ನೆಲೆ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅಧ್ಯಕ್ಷತೆಯ ಸಿದ್ದಶ್ರೀ ಸೌಹಾರ್ದ ಸಹಕಾರಿ ಸಕ್ಕರೆ ಕಾರ್ಖಾನೆ ಮುಚ್ಚಲು ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ನೋಟಿಸ್ ಜಾರಿ ಮಾಡಿದೆ. ಈ ಸಂಬಂಧ ಎಕ್ಸ್ (ಟ್ವಿಟರ್)ನಲ್ಲಿ ಟ್ವೀಟ್ ಮಾಡುವ ಮೂಲಕ ಯತ್ನಾಳ್ ಸರ್ಕಾರದ ನಡೆಯನ್ನು ವಿರೋಧಿಸಿ ತೀಕ್ಷ್ಣವಾಗಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಸರ್ಕಾರ ರಾಜಕೀಯವಾಗಿ ಎದುರಿಸಲಾಗದೆ ನಮ್ಮ ಎಥನಾಲ್ ಕಾರ್ಖಾನೆಗೆ ನೋಟಿಸ್ ಕೊಡಿಸಿದೆ. ರೈತರಿಗೆ ನೆರವಾಗಲು ಹಾಗೂ ಹಿಂದುಳಿದ ಪ್ರದೇಶದಲ್ಲಿ ಉದ್ಯೋಗ ಸೃಷ್ಟಿ ಮಾಡಲು ಕಾರ್ಖಾನೆ ಸ್ಥಾಪಿಸಲಾಗಿದೆ. ಕಾನೂನು ರೀತ್ಯಾ ನ್ಯಾಯಾಲಯದಲ್ಲಿ ಇದನ್ನು ಪ್ರಶ್ನಿಸಲಾಗುತ್ತದೆ. ಈ ನೋಟಿಸ್, ಆದೇಶಗಳಿಗೆ ಹೆದರುವ ಜಾಯಮಾನ ನನ್ನದಲ್ಲ. ಕಾಂಗ್ರೆಸ್ ಆಡಳಿತದ ವಿರುದ್ಧ ಹೋರಾಟ ಮಾಡಲು ಶಕ್ತಿ ಇಮ್ಮಡಿಯಾಗಿದೆ. 'ಕೈ'ಲಾಗದವರ ಕೊನೆಯ ಅಸ್ತ್ರವೇ ಅಪಪ್ರಚಾರ ಎಂಬುದು ಗೊತ್ತಿರುವ ವಿಷಯವೇ. ಬಡವರಿಗೆ, ದೀನ-ದಲಿತರಿಗೆ, ಪಕ್ಷದ ಕಾರ್ಯಕರ್ತರಿಗೆ ಸಹಾನೂಭೂತಿಯಿಂದ ಕಾಣುತ್ತ ಬಂದಿರುವ ನಾನು, ನನ್ನ ಮಿತಿಯಲ್ಲಿ ನನ್ನದೇ ಕಾರ್ಖಾನೆಗಳಲ್ಲಿ ನೂರಾರು ಜನರಿಗೆ ಉದ್ಯೋಗ ಸೃಷ್ಟಿಸಿದ್ದೇನೆ. ಜಿಲ್ಲೆಯ ಆರ್ಥಿಕತೆಯನ್ನು ಸುಧಾರಿಸಲು ನನ್ನ ಅಳಿಲು ಸೇವೆಯೂ ಇದೆ. ರಾಜಕೀಯ ಒತ್ತಡಕ್ಕೆ ಮಣಿದು ನನ್ನ ಕಾರ್ಖಾನೆಯನ್ನು ಮುಚ್ಚಿಸುವುದರಿಂದ ಇವರು ಏನನ್ನೂ ಕೂಡ ಸಾಧಿಸಲು ಸಾಧ್ಯವಿಲ್ಲ. ಕಾರ್ಖಾನೆ ಮತ್ತೆ ತೆರೆಯುವುದು ನಿಶ್ಚಿತ, ಈ ನಿಟ್ಟಿನಲ್ಲಿ ಕಾನೂನು ಹೋರಾಟವನ್ನು ನಾನು ಮಾಡುತ್ತೇನೆ ಎಂದು ಯತ್ನಾಳ್ ಟ್ವೀಟ್ ಮಾಡುವ ಮೂಲಕ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒಡೆತನದ ಶುಗರ್ ಫ್ಯಾಕ್ಟರಿ ಬಂದ್‌ಗೆ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ಹೊರಡಿಸಿದೆ. ಕಲಬುರಗಿ ಜಿಲ್ಲೆ ಚಿಂಚೋಳಿ ತಾಲೂಕಿನ ಚಿಮ್ಮಾಯಿದಲಾಯಿ ಗ್ರಾಮದ ಬಳಿ ಇರುವ ಶುಗರ್ ಫ್ಯಾಕ್ಟರಿ ಮತ್ತು ಎಥೆನಾಲ್ ಘಟಕಕ್ಕೆ ಬೀಗ ಹಾಕಲು ಆದೇಶಿಸಲಾಗಿದೆ. ಕಾರ್ಖಾನೆಯ ಕಲುಷಿತ ನೀರು ಮುಲ್ಲಾಮಾರಿ ಜಲಾಶಯಕ್ಕೆ ಬಿಡಲಾಗುತ್ತಿತ್ತು ಎಂಬ ಆರೋಪ ಕೇಳಿ ಬಂದಿದೆ.

# ಆರ್‌ಸಿಬಿಗೆಯಿಂದ ಹೊರಬಿದ್ದ ಸ್ಟಾರ್ ವಿದೇಶಿ ಪ್ಲೇಯರ್..!




ಎರಡನೇ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್ ಮುಂದಿನ ತಿಂಗಳು ಅಂದರೆ ಫೆಬ್ರವರಿ 23 ರಿಂದ ಆರಂಭವಾಗುತ್ತಿದೆ. ಇದಕ್ಕಾಗಿ ಎಲ್ಲಾ ತಂಡಗಳು ಕೂಡ ತಮ್ಮ ತಯಾರಿಯನ್ನು ಆರಂಭಿಸಿವೆ. ಈ ನಡುವೆ ಲೀಗ್ ನ ಅತ್ಯಂತ ಪ್ರಸಿದ್ಧ ಫ್ರಾಂಚೈಸಿಯಾದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಬಿಗ್ ಶಾಕ್ ಎದುರಾಗಿದೆ. ಟೂರ್ನಿ ಆರಂಭಕ್ಕೆ ಕೆಲವು ದಿನಗಳು ಬಾಕಿ ಉಳಿದಿರುವಾಗ ತಂಡದ ಸ್ಟಾರ್ ಬ್ಯಾಟರ್ ಎನಿಸಿಕೊಂಡಿದ್ದ ಇಂಗ್ಲೆಂಡ್ ಮಹಿಳಾ ತಂಡದ ನಾಯಕಿ ಹೀದರ್ ನೈಟ್ ಲೀಗ್ ನಿಂದ ಹಿಂದೆ ಸರಿದಿದ್ದಾರೆ. ಅಂದರೆ ಮುಂದಿನ ಆವೃತ್ತಿಯಲ್ಲಿ ಹೀದರ್ ನೈಟ್ ಆಡುತ್ತಿಲ್ಲ ಎಂದು ವರದಿಯಾಗಿದೆ.

ಫೆಬ್ರವರಿ 23 ರಿಂದ ಪ್ರಾರಂಭವಾಗುವ ಮಹಿಳಾ ಪ್ರೀಮಿಯರ್ ಲೀಗ್ ನಿಂದ ಹೀದರ್ ನೈಟ್ ಯಾಕೆ ತಮ್ಮ ಹೆಸರನ್ನು ಹಿಂಪಡೆದಿದ್ದಾರೆ ಎಂಬುದಕ್ಕೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಯಾವುದೇ ನಿರ್ದಿಷ್ಟ ಕಾರಣವನ್ನು ನೀಡಿಲ್ಲ. ಆದರೆ ಹೀದರ್ ನೈಟ್ ರಂತೆಯೇ ಇಂಗ್ಲೆಂಡ್ ತಂಡದ ಇತರ ಮಹಿಳಾ ಆಟಗಾರ್ತಿಯರು ಕೂಡ ಮಹಿಳಾ ಪ್ರೀಮಿಯರ್ ಲೀಗ್ ನಿಂದ ತಮ್ಮ ಹೆಸರನ್ನು ಹಿಂಪಡೆಯುತ್ತಿದ್ದಾರೆ. ಇದಕ್ಕೆ ಯಾವುದೇ ಸೂಕ್ತ ಕಾರಣ ಸಿಕ್ಕಿಲ್ಲವಾದರೂ, ಮಹಿಳಾ ಪ್ರೀಮಿಯರ್ ಲೀಗ್ ಮುಗಿದ ತಕ್ಷಣ ಇಂಗ್ಲೆಂಡ್ ಮಹಿಳಾ ಪಡೆ, ನ್ಯೂಜಿಲೆಂಡ್ ವಿರುದ್ಧ ಐದು ಪಂದ್ಯಗಳ ಟಿ20 ಸರಣಿ ಮತ್ತು ಮೂರು ಪಂದ್ಯಗಳ ಏಕದಿನ ಸರಣಿಯನ್ನು ಆಡಬೇಕಾಗಿದೆ. ಹೀಗಾಗಿ ಈ ಸರಣಿಯ ಮೇಲೆ ಹೆಚ್ಚು ಗಮನ ಹರಿಸುವ ಸಲುವಾಗಿ ಇಂಗ್ಲೆಂಡ್ ತಂಡದ ವನಿತಾ ಆಟಗಾರ್ತಿಯರು ಮಹಿಳಾ ಪ್ರೀಮಿಯರ್ ಲೀಗ್ ನಿಂದ ಹಿಂದೆ ಸರಿಯುತ್ತಿದ್ದಾರೆ ಎಂದು ವರದಿಯಾಗಿದೆ.

ಫೆಬ್ರವರಿ 23 ರಿಂದ ಪ್ರಾರಂಭವಾಗುವ ಮಹಿಳಾ ಪ್ರೀಮಿಯರ್ ಲೀಗ್ ನ ಫೈನಲ್ ಪಂದ್ಯವು ಮಾರ್ಚ್ 17 ರಂದು ನಡೆಯಲ್ಲಿದೆ. ಆದರೆ ಇಂಗ್ಲೆಂಡ್ ಹಾಗೂ ನ್ಯೂಜಿಲೆಂಡ್ ತಂಡಗಳ ನಡುವಿನ ಮೊದಲ ಟಿ20 ಪಂದ್ಯ ಮಾರ್ಚ್ 19 ರಂದು ಡ್ಯುನೆಡಿನ್‌ನಲ್ಲಿ ನಡೆಯಲ್ಲಿದೆ. ಹಾಗಾಗಿ ದ್ವಿಪಕ್ಷೀಯ ಸರಣಿಗೆ ಹೆಚ್ಚಿನ ಆದ್ಯತೆ ನೀಡುವ ಸಲುವಾಗಿ ಹೀದರ್ ನೈಟ್ ಮಹಿಳಾ ಪ್ರೀಮಿಯರ್ ಲೀಗ್ ನಿಂದ ಹಿಂದೆ ಸರಿದಿರುವ ಸಾಧ್ಯತೆಗಳಿವೆ. ಇದೀಗ ಹೀದರ್ ನೈಟ್ ಅವರ ಬದಲಿಯನ್ನು ಸಹ ಪ್ರಕಟಿಸಿರುವ ಆರ್ ಸಿಬಿ ದಕ್ಷಿಣ ಆಫ್ರಿಕಾದ ಆಲ್ ರೌಂಡರ್ ನಡಿನ್ ಡಿ ಕ್ಲರ್ಕ್ ಅವರನ್ನು ನೈಟ್ ಬದಲಿಗೆ ತಂಡಕ್ಕೆ ಆಯ್ಕೆ ಮಾಡಿಕೊಂಡಿದೆ.

ಮಧ್ಯಮ ವೇಗದ ಬೌಲಿಂಗ್ ಮತ್ತು ಬಲಗೈ ಬ್ಯಾಟರ್ ಆಗಿರುವ ಡಿ ಕ್ಲರ್ಕ್ ದಕ್ಷಿಣ ಆಫ್ರಿಕಾ ಪರ 30 ಏಕದಿನ ಮತ್ತು 46 ಟಿ20 ಪಂದ್ಯಗಳನ್ನಾಡಿದ್ದಾರೆ. ವರದಿಗಳ ಪ್ರಕಾರ, ಇಂಗ್ಲೆಂಡ್ ಮತ್ತು ವೇಲ್ಸ್ ಕ್ರಿಕೆಟ್ ಮಂಡಳಿ (ಇಸಿಬಿ) ಡಬ್ಲ್ಯುಪಿಎಲ್‌ನಲ್ಲಿ ಭಾಗಿಯಾಗಿರುವ ಆಟಗಾರ್ತಿಯರಿಗೆ ಟಿ20 ಲೀಗ್ ಮುಗಿಯುವವರೆಗೆ ಭಾರತದಲ್ಲಿದ್ದರೆ, ನ್ಯೂಜಿಲೆಂಡ್‌ನಲ್ಲಿನ ಮೊದಲ ಮೂರು ಟಿ20 ಪಂದ್ಯಗಳಿಗೆ ಅವರ ಹೆಸರನ್ನು ಪರಿಗಣಿಸಲಾಗುವುದಿಲ್ಲ ಎಂದು ತಿಳಿಸಿದೆ ಎಂದು ವರದಿಯಾಗಿದೆ. ಹೀಗಾಗಿಯೇ ಆಟಗಾರ್ತಿಯರು ಒಬ್ಬೊಬ್ಬರಾಗಿ ಲೀಗ್ ನಿಂದ ಹಿಂದೆ ಸರಿಯುತ್ತಿದ್ದಾರೆ. ಹೀದರ್ ನೈಟ್ ಹೊರತುಪಡಿಸಿ, ಯುಪಿ ವಾರಿಯರ್ಸ್ ಪರ ಆಡಬೇಕಿದ್ದ ಲಾರೆನ್ ಬೆಲ್ ಶುಕ್ರವಾರ ತನ್ನ ಹೆಸರನ್ನು ಡಬ್ಲ್ಯುಪಿಎಲ್‌ನಿಂದ ಹಿಂತೆಗೆದುಕೊಂಡಿದ್ದು, ನ್ಯೂಜಿಲೆಂಡ್ ಪ್ರವಾಸಕ್ಕೆ ತಯಾರಿ ನಡೆಸುವುದು ತನ್ನ ಆದ್ಯತೆಯಾಗಿದೆ ಎಂದು ಹೇಳಿದ್ದರು.

## ಗ್ಯಾರೆಂಟಿ ಯೋಜನೆ ಅನುಷ್ಠಾನ

# ಸರ್ಕಾರದಿಂದ ಪ್ರಾಧಿಕಾರ, ಸಮಿತಿ ರಚನೆ



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಐದು ಗ್ಯಾರೆಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. ಈ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಸರ್ಕಾರ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರ ಹಾಗೂ ತಾಲೂಕು ಮತ್ತು ಬಿಬಿಎಂಪಿ ಮಟ್ಟದಲ್ಲಿ ಅನುಷ್ಠಾನ ಸಮಿತಿ ರಚಿಸಲು ನಿರ್ಧರಿಸಿದೆ. ಈ ಸಂಬಂಧ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ರಾಜ್ಯ ಮಟ್ಟದ ಕಾರ್ಯವ್ಯವಸ್ಥೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಮತ್ತು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಅಗತ್ಯ ನೀತಿ, ಸುಧಾರಣೆಗಳು, ಅನುಷ್ಠಾನದ ವಿಧಾನಗಳಲ್ಲಿ ಸರಳೀಕರಣ ತರಲು ಹಾಗೂ ತಳಮಟ್ಟದಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಪ್ರಾಧಿಕಾರಗಳನ್ನು ಮತ್ತು ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸಲು ಇದೇ ತಿಂಗಳು 17 ರಂದು ಸರ್ಕಾರ ಆದೇಶ ಹೊರಡಿಸಿದೆ.

ರಾಜ್ಯ ಮಟ್ಟದಲ್ಲಿ 'ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ', ಜಿಲ್ಲಾ ಮಟ್ಟದಲ್ಲಿ 'ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಾಲ್ಲೂಕು ಮಟ್ಟದಲ್ಲಿ 'ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ' ಹಾಗೂ ಬಿಬಿಎಂಪಿ ಮಟ್ಟದಲ್ಲಿ 'ಬಿಬಿಎಂಪಿ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ' ರಚಿಸಲು ಸರ್ಕಾರವು ನಿರ್ಧರಿಸಿ ಆದೇಶಿಸಿದೆ.

ರಾಜ್ಯದ ಜಿಲ್ಲೆಗಳನ್ನು ಐದು ವಿಭಾಗಗಳನ್ನಾಗಿ ವಿಂಗಡಿಸಿ, ರಾಜ್ಯ ಮಟ್ಟದ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಿಗೆ ಪ್ರತಿಯೊಂದು ವಿಭಾಗಗಳ ಜವಾಬ್ದಾರಿಯನ್ನು ಹಂಚಿಕೆ ಮಾಡಿ ಸದಸ್ಯ ಕಾರ್ಯದರ್ಶಿಯವರು ಆದೇಶ ಹೊರಡಿಸಬೇಕು.

ಸದಸ್ಯ ಕಾರ್ಯದರ್ಶಿಯವರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಇತರೆ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರನ್ನು ರಾಜ್ಯ ಮಟ್ಟದ ಅನುಷ್ಠಾನ ಪ್ರಾಧಿಕಾರದ ಸದಸ್ಯರನ್ನಾಗಿ ನೇಮಕ ಮಾಡಬೇಕು. ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ಸದಸ್ಯ ಕಾರ್ಯದರ್ಶಿರವರು ಸಕ್ಷಮ ಪ್ರಾಧಿಕಾರದ (ಸರ್ಕಾರದ) ಅನುಮೋದನೆ ಪಡೆದು ನೇಮಿಸಬೇಕು.

ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಗಳು ಹಾಗೂ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಕಾರ್ಯಗಳು, ಜವಾಬ್ದಾರಿಗಳು, ಅಧಿಕಾರಿ/ಸಿಬ್ಬಂದಿಗಳ ನೇಮಕಾತಿ, ರಾಜೀನಾಮೆ, ಕಛೇರಿ ನಿರ್ವಹಣೆ, ಸವಲತ್ತು, ಗೌರವಧನ, ಭತ್ಯೆಗಳು ಹಾಗೂ ಇತರೆ ಯಾವುದೇ ಸಂಬಂಧಪಟ್ಟ ವಿಷಯಗಳ ಕುರಿತು ಸಕ್ಷಮ ಪ್ರಾಧಿಕಾರದ (ಸರ್ಕಾರದ) ಅನುಮೋದನೆಯೊಂದಿಗೆ ರಾಜ್ಯ ಮಟ್ಟದ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರು ಪ್ರತ್ಯೇಕವಾಗಿ ಆದೇಶ ಹೊರಡಿಸಬೇಕು. ರಾಜ್ಯ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಮುಖ ಜವಾಬ್ದಾರಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಯಾಗಿರುತ್ತದೆ ಹಾಗೂ ಈ ಪ್ರಾಧಿಕಾರವು ನೀತಿ ರಚನೆ, ಸುಧಾರಣಾ ಕ್ರಮಗಳು, ಅನುಷ್ಠಾನದಲ್ಲಿ ಸರಳೀಕರಣ ಹಾಗೂ ಸಮನ್ವಯತೆ ತರುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ.

ರಾಜ್ಯ ಮಟ್ಟದ ಅನುಷ್ಠಾನ ಪ್ರಾಧಿಕಾರಕ್ಕೆ ಸಂಪುಟ ದರ್ಜೆಯ ಸ್ಥಾನಮಾನ ಹೊಂದಿದವರು ಅಧ್ಯಕ್ಷರಾಗಿರುತ್ತಾರೆ. ಸಚಿವ ಸ್ಥಾನಮಾನ ಹೊಂದಿದ ಐವರು ಉಪಾಧ್ಯಕ್ಷರಾಗಿರುತ್ತಾರೆ. 31 ಜಿಲ್ಲೆಗಳಿಗೆ ಪ್ರತಿನಿಧಿಸುವ ಜಿಲ್ಲೆಗೆ ಒಬ್ಬರಂತೆ ಸದಸ್ಯರು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಟಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿಗಳು ಸದಸ್ಯ ಕಾರ್ಯದರ್ಶಿ ಇರುತ್ತಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com